ಸಂಪುಟ: ೦೭/ ಸಂಚಿಕೆ: ೧೭೯/ ಶುಕ್ರವಾರ ದಿನಾಂಕ : ೦೫-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 179/ FRIDAY Date : 05-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಜಿಎಸ್‌ಟಿ ಇಳಿಕೆಯಿಂದ ಜನರಿಗೆ ಅನುಕೂಲ: ರಾಜ್ಯಗಳಿಗೆ ನಷ್ಟ



**ಬೆಂಗಳೂರು:** ಕೇಂದ್ರ ಸರ್ಕಾರ ಜಿಎಸ್‌ಟಿ ವ್ಯವಸ್ಥೆ ಜಾರಿಗೆ ತಂದು ಜನರಿಗೆ ಸಾಕಷ್ಟು ಹೊರೆ ಮಾಡಿದ್ದರು. ಬಡವರು, ಮಧ್ಯಮವರ್ಗದ ಮೇಲೆ ಹೊಡೆತ ಬಿದ್ದಿತ್ತು. ರಾಜ್ಯದಿಂದ 4.5 ಲಕ್ಷ ಕೋಟಿ ಜಿಎಸ್?ಟಿ ಸಂಗ್ರಹವಾಗಿ ಕೇಂದ್ರ ಸರ್ಕಾರಕ್ಕೆ ಹೋಗುತ್ತಿತ್ತು. ಅಲ್ಲಿಂದ ನಮಗೆ ತೀರಾ ಕಡಿಮೆ ವಾಪಸ್ ಬರುತ್ತಿತ್ತು ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಎಸ್‌ಟಿ ಸ್ತರ, ದರ ಇಳಿಕೆಯ ಬಳಿಕ ಕರ್ನಾಟಕಕ್ಕೆ 15 ಸಾವಿರ ಕೋಟಿ ಕೊರತೆಯಾಗುವುದು. ಇದನ್ನು ಕೇಂದ್ರ ಸರ್ಕಾರ ಕೊಡಬೇಕು. ನಮಗೆ ಅಲ್ಲ ಎಲ್ಲ ರಾಜ್ಯಗಳಿಗೂ ಕೊಡಬೇಕು. ರಾಜ್ಯ ಸರ್ಕಾರ ಕೊಡುವ 1 ರೂಪಾಯಿ ತೆರಿಗೆಯಲ್ಲಿ ಹಣದಲ್ಲಿ 12 ಪೈಸೆ ಮಾತ್ರ ಕೊಡುತ್ತಿದೆ ಎಂದು ಲೆಕ್ಕ ಹೇಳಿದರು.

**ಜನರಿಗೆ ಅನುಕೂಲವಾಗಲಿದೆ:** ಜಿಎಸ್‌ಟಿ ಇಳಿಕೆ ಬಿಹಾರ ಚುನಾವಣೆ ಮೇಲೆ ಪರಿಣಾಮ ಬೀರುತ್ತಾ ಎಂಬ ಪ್ರಶ್ನೆಗೆ, ಕೇಂದ್ರ ಸರ್ಕಾರದ ಈ ನಿರ್ಧಾರ ಜನರಿಗೆ ಅನುಕೂಲ ಆಗುತ್ತದೆ. ರಾಜ್ಯ ಸರ್ಕಾರಕ್ಕೆ ನಷ್ಟವಾಗುತ್ತೆ. ನಮ್ಮಿಂದ ಹೆಚ್ಚುವರಿ ಕಲೆಕ್ಟ್ ಮಾಡ್ತಿದ್ದಾರೆ. ಆದರೆ, ನಮಗೆ ಕೊಡೋದು ಅತ್ಯಲ್ಪ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇನ್ನು, ರಾಜಣ್ಣ ಬಿಜೆಪಿಗೆ ಹೋಗುವ ವಿಚಾರದ ಕುರಿತು ಪ್ರತಿಕ್ರಿಯಿಸಿ, ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರು ಕಾಂಗ್ರೆಸ್ ಬಿಟ್ಟು ಎಲ್ಲೂ ಹೋಗಲ್ಲ. ಅವರು ಇಲ್ಲೇ ಇರ್ತಾರೆ. ನಾನು ಅವರ ಹುಟ್ಟುಹಬ್ಬಕ್ಕೆ ಹೋಗಿದ್ದೆ. ಅವರು 1972 ರಿಂದಲೂ ಕಾಂಗ್ರೆಸ್‌ನಲ್ಲಿದ್ದಾರೆ. ಅವರು ಎಲ್ಲೂ ಹೋಗಲ್ಲ ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಅರಮನೆ ಮೈದಾನದಲ್ಲಿ ಈದ್ ಮಿಲಾದ್ ಕಾರ್ಯಕ್ರಮ ವಿಚಾರವಾಗಿ ಮಾತನಾಡಿ, ಅದರ ಬಗ್ಗೆ ನನಗೆ ಹೆಚ್ಚು ಮಾಹಿತಿ ಇಲ್ಲ. ಬೇರೆ ದೇಶಗಳಿಂದಲೂ ಗಣ್ಯರನ್ನು ಆಹ್ವಾನಿಸಿದ್ದಾರೆ. ಹಬ್ಬದ ವೇಳೆ ಯಾವುದೇ ತಪ್ಪುಗಳು ನಡೆಯಬಾರದು. ಮೌಲ್ವಿಗಳು ಬರಲಿದ್ದಾರೆ ಎಂದು ಹೇಳಲಾಗಿದೆ. ಅವರು ಜನರಿಗೆ ಸನ್ಮಾರ್ಗದಲ್ಲಿ ನಡೆಯಲು ಸಂದೇಶ ಕೊಡಲಿದ್ದಾರೆ. ಸರಿದಾರಿಯಲ್ಲಿ ಜನರನ್ನು ತನ್ನಿ ಎಂದು ಹೇಳುತ್ತಾರೆ. ಅವರು ಎಲ್ಲೂ ಬೇರೆಯದನ್ನು ಹೇಳಲ್ಲ. ಇದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು.

### ಬುರುಡೆ ಕೇಸ್ ಅಂತ್ಯಕ್ಕೆ ಬರುತ್ತೆ

ಧರ್ಮಸ್ಥಳ ವಿರುದ್ಧ ಷಡ್ಯಂತ್ರದ ಕುರಿತು ಸ್ವಾಮೀಜಿಗಳಿಂದ ಎನ್‌ಐಎ ತನಿಖೆಗೆ ಒತ್ತಾಯ ಕೇಳಿಬರುತ್ತಿರುವ ವಿಚಾರವಾಗಿ ಮಾತನಾಡಿ, ಪ್ರಕರಣವನ್ನು ಎಸ್‌ಐಟಿ ತನಿಖೆ ಮಾಡುತ್ತಿದೆ. ಸರಿಯಾದ ದಾರಿಯಲ್ಲೇ ತನಿಖೆ ನಡೆಯುತ್ತಿದೆ. ಬಿಜೆಪಿಯವರು ಎನ್‌ಐಎ ತನಿಖೆಗೆ ನೀಡಿ ಎಂದು ಆಗ್ರಹಿಸುತ್ತಿದ್ದಾರೆ. ಹಿಂದೆ ಸೌಜನ್ಯ ಪ್ರಕರಣದಲ್ಲಿ ಸಿಬಿಐ ತನಿಖೆ ಮಾಡಿತ್ತು. ಆಗ ಸೌಜನ್ಯಗೆ ಯಾಕೆ ನ್ಯಾಯ ಸಿಗಲಿಲ್ಲ. ಬುರುಡೆ ಪ್ರಕರಣ ತಾರ್ಕಿಕ ಅಂತ್ಯಕ್ಕೆ ಬರಲಿದೆ. ಧರ್ಮಸ್ಥಳ ಅಷ್ಟೇ ಅಲ್ಲ, ರಾಜ್ಯದ ಎಲ್ಲಾ ದೇವಸ್ಥಾನಗಳು ಸುರಕ್ಷಿತವಾಗಿವೆ ಎಂದರು.

---

ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸ್ಸು ಮಾಡಲು ಸಂಪುಟ ನಿರ್ಧಾರ

## ಸ್ಥಳೀಯ ಚುನಾವಣೆಗಳಲ್ಲಿ ಇವಿಎಮ್ ಬದಲು ಬ್ಯಾಲೆಟ್ ಪೇಪರ್ ಬಳಕೆ

**ಬೆಂಗಳೂರು:** ಮುಂಬರುವ ಎಲ್ಲ ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ಇಲೆಕ್ಟ್ರಾನಿಕ್ ಮತ ಯಂತ್ರ (ಇವಿಎಂ)ದ ಬದಲಾಗಿ ಬ್ಯಾಲೆಟ್ ಪೇಪರ್‌ಗಳನ್ನು ಬಳಸಿ ನಡೆಸುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸ್ಸು ಮಾಡಲು ರಾಜ್ಯ ಸಚಿವ ಸಂಪುಟ ನಿರ್ಧರಿಸಿದೆ.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಈ ವಿಷಯವನ್ನು ತಿಳಿಸಿದರು.





ಮತಗಳ್ಳತನದ ಪ್ರಕರಣಗಳು ಬಯಲಾದ ಬಳಿಕ ಜನಸಾಮಾನ್ಯರಲ್ಲಿ ಇವಿಎಂ ಮೇಲಿನ ವಿಶ್ವಾಸಾರ್ಹತೆ ಕಡಿಮೆಯಾಗಿದೆ. ಮತಗಳ್ಳತನಕ್ಕೆ ಸಂಬಂಧಿಸಿದಂತೆ ಹಲವಾರು ದೂರುಗಳು ಬಂದಿವೆ. ಆದುದರಿಂದ, ಸಚಿವ ಸಂಪುಟವು ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ಇವಿಎಂ ಬದಲು ಬ್ಯಾಲೆಟ್ ಪೇಪರ್ ಬಳಸಿ ನಡೆಸುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ಶಿಫಾರಸ್ಸು ಮಾಡಲು ನಿರ್ಧರಿಸಿದೆ ಎಂದು ಅವರು ಹೇಳಿದರು.

ರಾಜ್ಯ ಚುನಾವಣಾ ಆಯೋಗವು ಒಂದು ಸ್ವತಂತ್ರ ಸಂಸ್ಥೆ. ಅದು ರಾಜ್ಯದ ಕಾನೂನಿನ ಅಡಿಯಲ್ಲಿ ಕಾರ್ಯನಿರ್ವಹಿಸುತ್ತದೆ. ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುವ ಸಂಬಂಧ ಮತದಾರರ ಪಟ್ಟಿಯನ್ನು ಸಿದ್ಧಪಡಿಸಲು, ಪರಿಷ್ಕರಣೆ ಮಾಡಲು ಈಗಾಗಲೆ ರಾಜ್ಯ ಚುನಾವಣಾ ಆಯೋಗಕ್ಕೆ ಪತ್ರ ಬರೆದು ತಿಳಿಸಲಾಗಿದೆ ಎಂದು ಎಚ್.ಕೆ.ಪಾಟೀಲ್ ಹೇಳಿದರು. ಇವಿಎಂ ಬದಲು ಬ್ಯಾಲೆಟ್ ಪೇಪರ್ ಬಳಕೆಗೆ ಅವಕಾಶ ಕಲ್ಪಿಸುವ ಸಂಬಂಧ ಅಗತ್ಯ ಕಾನೂನು ಮತ್ತು ನಿಯಮಾವಳಿಗಳಿಗೆ ಮುಂದಿನ 15 ದಿನಗಳಲ್ಲಿ ತಿದ್ದುಪಡಿ ಮಾಡಲಾಗುವುದು. ಸರಕಾರ ಕಾನೂನು ರೂಪಿಸಿದ ಬಳಿಕ ರಾಜ್ಯ ಚುನಾವಣಾ ಆಯೋಗ ಅದನ್ನು ಪಾಲಿಸಬೇಕಾಗುತ್ತದೆ ಎಂದು ಅವರು ಹೇಳಿದರು. ಈ ಹಿಂದಿನ ವಿಧಾನಸಭೆಯಲ್ಲಿ ಸ್ಪೀಕರ್ ಆಗಿದ್ದ ವಿಶ್ವೇಶ್ವರ ಹೆಗಡೆ ಕಾಗೇರಿ ಚುನಾವಣಾ ವ್ಯವಸ್ಥೆಯ ಸುಧಾರಣೆಗೆ ಸಂಬಂಧಿಸಿದಂತೆಯೆ ವಿಶೇಷ ಅಧಿವೇಶನ ಕರೆದಿದ್ದರು. ಅಲ್ಲಿ ನಾನು ಈ ವಿಷಯದ ಕುರಿತು ಸುದೀರ್ಘವಾಗಿ ಮಾತನಾಡಿದೆ. ಅಲ್ಲದೇ, ಸುಮಾರು 3450 ಪುಟಗಳಷ್ಟು ದಾಖಲೆಗಳನ್ನು ಭಾರತೀಯ ಚುನಾವಣಾ ಆಯೋಗಕ್ಕೆ ಕಳುಹಿಸಿಕೊಟ್ಟಿದ್ದೆ. ಆದರೆ, ಯಾವುದೆ ಪ್ರಯೋಜನವಾಗಲಿಲ್ಲ ಎಂದು ಎಚ್.ಕೆ.ಪಾಟೀಲ್ ಹೇಳಿದರು.

---

## ಅಪಘಾತಕ್ಕೀಡಾದವರಿಗೆ ತಕ್ಷಣ ಚಿಕಿತ್ಸೆ ನೀಡಲು ಆಸ್ಪತ್ರೆಗಳಿಗೆ ಸೂಚನೆ

**ಬೆಂಗಳೂರು:** ಸೌಲಭ್ಯಗಳ ಕೊರತೆಯಿರುವ ಆಸ್ಪತ್ರೆಗಳು ರೋಗಿಯನ್ನು ಇತರ ಆಸ್ಪತ್ರೆಗಳಿಗೆ ವರ್ಗಾವಣೆ ಮಾಡುವ ಮೊದಲು ಪ್ರಥಮ ಚಿಕಿತ್ಸೆ ನೀಡಬೇಕು ಮತ್ತು ಸಂಪೂರ್ಣ ವೈದ್ಯಕೀಯ ವಿವರಗಳೊಂದಿಗೆ ಸ್ಥಳಾಂತರಿಸಬೇಕು ಎಂದು ಅದು ಹೇಳಿದೆ.

ಸುತ್ತೋಲೆಯು 1988 ರ ಮೋಟಾರು ವಾಹನ ಕಾಯ್ದೆಯ ಸೆಕ್ಷನ್ 187 ಅನ್ನು ಸಹ ಅನ್ವಯಿಸುತ್ತದೆ. ಇದನ್ನು ಪಾಲಿಸಲು ವಿಫಲವಾದರೆ ಮೂರು ತಿಂಗಳವರೆಗೆ ಜೈಲು ಶಿಕ್ಷೆ ಅಥವಾ 500 ರೂ.ಗಳವರೆಗೆ ದಂಡ ವಿಧಿಸಬಹುದು ಮತ್ತು ಪುನರಾವರ್ತಿತ ಅಪರಾಧಗಳಿಗೆ ಆರು ತಿಂಗಳವರೆಗೆ ಜೈಲು ಶಿಕ್ಷೆ ಅಥವಾ 1,000 ರೂ.ಗಳವರೆಗೆ ದಂಡ ವಿಧಿಸಬಹುದು ಎಂದು ಎಚ್ಚರಿಸಿದೆ. 2025ರ ರಸ್ತೆ ಅಪಘಾತ ಸಂತ್ರಸ್ತರ ನಗದು ರಹಿತ ಚಿಕಿತ್ಸೆ ಯೋಜನೆಯನ್ನು ಉಲ್ಲೇಖಿಸಿ, ರಸ್ತೆ ಅಪಘಾತದ ಸಂತ್ರಸ್ತರು ಅಪಘಾತದ ದಿನಾಂಕದಿಂದ ಏಳು ದಿನಗಳವರೆಗೆ ಪ್ರತಿ ಸಂತ್ರಸ್ತರಿಗೆ ಒಂದು ಲಕ್ಷದ ಐವತ್ತು ಸಾವಿರ ರೂಪಾಯಿಗಳವರೆಗೆ ಯಾವುದೇ ಗೊತ್ತುಪಡಿಸಿದ ಆಸ್ಪತ್ರೆಯಲ್ಲಿ ನಗದು ರಹಿತ ಚಿಕಿತ್ಸೆಗೆ ಅರ್ಹರಾಗಿರುತ್ತಾರೆ. ರಾಜ್ಯ ರಸ್ತೆ ಸುರಕ್ಷತಾ ಮಂಡಳಿಯು ನೋಡಲ್ ಏಜೆನ್ಸಿಯಾಗಿ ಕಾರ್ಯನಿರ್ವಹಿಸಲಿದ್ದು, ಮೋಟಾರು ವಾಹನ ಅಪಘಾತ ನಿಧಿಯಿಂದ ಮರುಪಾವತಿ ಮಾಡಲಾಗುತ್ತದೆ' ಎಂದು ಅದು ತಿಳಿಸಿದೆ. ಕರ್ನಾಟಕವು ಈಗಾಗಲೇ ಅಪಘಾತಕ್ಕೊಳಗಾದವರಿಗೆ 48 ಗಂಟೆಗಳವರೆಗೆ ನಗದು ರಹಿತ ಚಿಕಿತ್ಸೆ ನೀಡುವ ರಾಜ್ಯ ಮಟ್ಟದ ಯೋಜನೆಯನ್ನು ಹೊಂದಿದ್ದು, ಸರ್ಕಾರಿ ಆಸ್ಪತ್ರೆಗಳು, ವೈದ್ಯಕೀಯ ಕಾಲೇಜುಗಳು ಮತ್ತು SAST-ಎಂಪನೇಲ್ಡ್ ಆಸ್ಪತ್ರೆಗಳಲ್ಲಿ 76 ಜೀವರಕ್ಷಕ ಸೇವೆಗಳನ್ನು ಒಳಗೊಂಡಿದೆ ಎಂದು ಸುತ್ತೋಲೆ ನೆನಪಿಸಿದೆ. ಪ್ರತಿಯೊಬ್ಬ ನೋಂದಾಯಿತ ವೈದ್ಯಕೀಯ ವೈದ್ಯರು ಮತ್ತು ಪ್ರತಿಯೊಂದು ವೈದ್ಯಕೀಯ ಸಂಸ್ಥೆಯು ಅಪಘಾತಕ್ಕೊಳಗಾದವರಿಗೆ ಯಾವುದೇ ವಿಳಂಬ ಅಥವಾ ನಿರಾಕರಣೆ ಇಲ್ಲದೆ ಪ್ರಥಮ ಚಿಕಿತ್ಸೆ ನೀಡಬೇಕು ಮತ್ತು ಸ್ಥಿರಗೊಳಿಸಬೇಕು. ವಿಫಲವಾದರೆ ಅವರು ನಿರ್ದಿಷ್ಟಪಡಿಸಿದಂತೆ ಶಿಕ್ಷೆಗೆ ಗುರಿಯಾಗುತ್ತಾರೆ.




ಮೇಲಿನ ನಿಬಂಧನೆಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿಯುತ ಪ್ರತಿಯೊಂದು ಪ್ರಾಧಿಕಾರವು ಅಪಘಾತಕ್ಕೊಳಗಾದವರಿಗೆ ಈ ಆರೋಗ್ಯ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗುವಂತೆ ತಕ್ಷಣ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.

---

## 398 ಕೋಟಿ ರೂ.ವೆಚ್ಚದಲ್ಲಿ ಅತೀ ಹಿಂದುಳಿದ ಅಲ್ಪಸಂಖ್ಯಾತರ ಕಾಲನಿಗಳ ಅಭಿವೃದ್ಧಿ

**ಬೆಂಗಳೂರು:** ರಾಜ್ಯದ ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ ಅಲ್ಪಸಂಖ್ಯಾತರು ವಾಸಿಸುತ್ತಿರುವ ನಗರ ಪ್ರದೇಶಗಳಲ್ಲಿನ ಅತೀ ಹಿಂದುಳಿದ ಕಾಲನಿಗಳನ್ನು ಮಾದರಿ ಕಾಲನಿಗಳನ್ನಾಗಿ ಅಭಿವೃದ್ಧಿಪಡಿಸಲು 398 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದರು.

ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಕೈಗೊಂಡ ನಿರ್ಧಾರಗಳ ಕುರಿತು ಅವರು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

**ಇತರ ನಿರ್ಣಯಗಳು:** ರಾಜ್ಯ ಸರಕಾರಿ ವಿಮಾ ಇಲಾಖೆಯ ಕಡ್ಡಾಯ ಜೀವ ವಿಮಾ ಯೋಜನೆಯ ವಿಮಾದಾರರಿಗೆ 2020-22ರ ದ್ವೈವಾರ್ಷಿಕ ಅವಧಿಯಲ್ಲಿ ಚಾಲ್ತಿಯಲ್ಲಿದ್ದ ಎಲ್ಲ ಪಾಲಿಸಿಗಳಿಗೆ ವಿಮಾ ಮೊತ್ತದ ಮೇಲೆ ಪ್ರತಿ ಸಾವಿರ ರೂಪಾಯಿಗಳಿಗೆ ಪ್ರತಿ ವರ್ಷಕ್ಕೆ 80 ರೂ.ಗಳಂತೆ ಲಾಭಾಂಶ (ಬೋನಸ್) ಘೋಷಣೆ. ಶುಚಿ' ಕಾರ್ಯಕ್ರಮದಡಿ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್‌ಗಳನ್ನು 71.83 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಖರೀದಿಸಲು ಮತ್ತು ವಿತರಣೆ ಮಾಡಲು ಹಾಗೂ 'ಆಶಾಕಿರಣ' ಯೋಜನೆಯನ್ನು ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ 52.85 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ.



**ಕನಕಪುರದಲ್ಲಿ ವೈದ್ಯಕೀಯ ಕಾಲೇಜು:** ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ರಾಮನಗರ ಜಿಲ್ಲೆಯ ಕನಕಪುರ ತಾಲೂಕಿನಲ್ಲಿ ಒಂದು ಹೊಸ ವೈದ್ಯಕೀಯ ಕಾಲೇಜು ಸ್ಥಾಪಿಸಲು ಮೊದಲನೆ ಹಂತದಲ್ಲಿ ಕರ್ನಾಟಕ ಗೃಹ ಮಂಡಳಿಯಿಂದ 65 ಕೋಟಿ ರೂ.ಗಳ ವೆಚ್ಚದಲ್ಲಿ 25 ಎಕರೆ ಜಮೀನು ಖರೀದಿಸಲು ಆಡಳಿತಾತ್ಮಕ ಅನುಮೋದನೆ.

**ಶಾಲಾ ಮಕ್ಕಳಿಗೆ ರಾಗಿ ಹೆಲ್ತ್ ಮಿಕ್ಸ್ ಪುಡಿ:** ಸರಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1 ರಿಂದ 10ನೆ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಾಯಿ ಶ್ಯೂರ್ ರಾಗಿ ಹೆಲ್ತ್ ಮಿಕ್ಸ್ ಪುಡಿಯನ್ನು ಬಿಸಿ ಹಾಲಿನೊಂದಿಗೆ ವಾರದಲ್ಲಿ ಐದು ದಿನಗಳಿಗೆ ಮಿಶ್ರಣ ಮಾಡಿ ನೀಡಲು ರಾಜ್ಯ ಸರಕಾರದಿಂದ ಭರಿಸಬೇಕಾಗಿರುವ ಶೇ.25ರಷ್ಟು ವೆಚ್ಚದ ಅಂದಾಜು ಮೊತ್ತ 20.53 ಕೋಟಿ ರೂ.ಗಳನ್ನು ಪಾವತಿಸಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮತ್ತು ಅಂದಾಜು ಸಾಗಾಣಿಕಾ ವೆಚ್ಚ 6.49 ಕೋಟಿ ರೂ.ಗಳನ್ನು ಕರ್ನಾಟಕ ಹಾಲು ಮಹಾಮಂಡಳಿಗೆ ಪಾವತಿಸಲು ಅನುಮೋದನೆ ನೀಡಲಾಗಿದೆ.

ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲೂಕಿನ ಯಳಗೊಂಡನಹಳ್ಳಿ, ಕುರುಬರಹಳ್ಳಿ, ಅಣ್ಣಿಗೆರೆ ಮತ್ತು ವೈ.ಮಲ್ಲಾಪುರ ಗ್ರಾಮಗಳ ವ್ಯಾಪ್ತಿಯಲ್ಲಿ ಬರುವ ಭದ್ರಾ ಮೇಲ್ದಂಡೆ ಯೋಜನೆಯ ತುಮಕೂರು ಶಾಖಾ ಕಾಲುವೆಯ ಕಾಮಗಾರಿಗಳಿಗೆ ಅಗತ್ಯವಿರುವ ಸುಮಾರು 221 ಎಕರೆ 01.12 ಗುಂಟೆ ಜಮೀನನ್ನು 77.35 ಕೋಟಿ ರೂ. ಮೊತ್ತದಲ್ಲಿ ನೇರ ಖರೀದಿಯ ಮೂಲಕ ಸ್ವಾಧೀನಪಡಿಸಿಕೊಳ್ಳಲು ನಿರ್ಧರಿಸಲಾಗಿದೆ. ಕರ್ನಾಟಕ ಎಲೆಕ್ಟ್ರಾನಿಕ್ ಪ್ರಕ್ರಿಯೆ ಗಳು (ವಿತರಣೆ), ಸೇವೆ ಮತ್ತು ಕಾರ್ಯಗತಗೊಳಿಸುವಿಕೆ) ನಿಯಮಗಳು, 2025', 'ಕರ್ನಾಟಕ ಇ-ಸಾಕ್ಷ್ಯ ನಿರ್ವಹಣಾ ನಿಯಮಗಳು, 2025', 'ಕರ್ನಾಟಕ ಪೊಲೀಸ್ ಅಧಿಕಾರಿಗಳಿಂದ ಸಮನ್ಸ್ ಸೇವೆಯ ನಿಯಮಗಳು, 2025'ಕ್ಕೆ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ.

---

ರಾಜ್ಯದಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಸರ್ವೇ : ದೇಶದಲ್ಲೇ ಮೊದಲು

## ಮಾಜಿ ದೇವದಾಸಿಯರ ಮರು ಸಮೀಕ್ಷೆಗೂ ಚಾಲನೆ

**ಬೆಂಗಳೂರು:** ದೇಶದಲ್ಲೇ ಪ್ರಪ್ರಥಮ ಬಾರಿಗೆ ಕರ್ನಾಟಕ ರಾಜ್ಯಾದ್ಯಂತ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಹಾಗೂ ಮಾಜಿ ದೇವದಾಸಿಯರ ಮರು ಸಮೀಕ್ಷೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸೌಧದಲ್ಲಿ ಗುರುವಾರ ಚಾಲನೆ ನೀಡಿದರು.



ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಸಮೀಕ್ಷೆ ನಡೆಯುತ್ತಿದ್ದು, ಮೊದಲ ಬಾರಿಗೆ ರಾಜ್ಯಾದ್ಯಂತ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಹಾಗೂ 15 ಜಿಲ್ಲೆಗಳಲ್ಲಿ ಮಾಜಿ ದೇವದಾಸಿಯರ ಮರು ಸಮೀಕ್ಷೆ ನಡೆಯಲಿದೆ. ಸಮೀಕ್ಷೆಯಲ್ಲಿ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿ ಸಂಗ್ರಹಿಸಿ, ಪುನರ್ವಸತಿ ಕಲ್ಪಿಸಲು ಸಮೀಕ್ಷೆಗಳನ್ನು ನಡೆಸಲಾಗುವುದು. ಈ ಎರಡು ಸಮೀಕ್ಷೆಗಳನ್ನು ಸೆ.15ರಿಂದ ಪ್ರಾರಂಭಿಸಿ, 45 ಕೆಲಸದ ದಿನಗಳಲ್ಲಿ ಮುಕ್ತಾಯಗೊಳಿಸಲಾಗುವುದು.

ಮೊದಲ ಬಾರಿಗೆ ರಾಜ್ಯಾದ್ಯಂತ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಹಾಗೂ 15 ಜಿಲ್ಲೆಗಳಲ್ಲಿ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ (ಬೆಳಗಾವಿ, ವಿಜಯಪುರ, ಬಾಗಲಕೋಟೆ, ರಾಯಚೂರು, ಕೊಪ್ಪಳ, ಧಾರವಾಡ, ಹಾವೇರಿ, ಗದಗ, ಕಲಬುರ್ಗಿ, ಯಾದಗಿರಿ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ಬಳ್ಳಾರಿ ಮತ್ತು ವಿಜಯನಗರ)ಯಲ್ಲಿ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿ ಸಂಗ್ರಹಿಸಿ, ಪುನರ್ವಸತಿ (ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ) ಕಲ್ಪಿಸಲು ಸಮೀಕ್ಷೆಗಳನ್ನು ನಡೆಸಲಾಗುವುದು. ಈ ಎರಡು ಸಮೀಕ್ಷೆಗಳನ್ನು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ನಡೆಸಲಾಗುವುದು. ಸಮೀಕ್ಷೆ ಕಾರ್ಯ ಕೈಗೊಳ್ಳಲು ಈಗಾಗಲೇ ಪೂರ್ವ ತಯಾರಿ ಮಾಡಿಕೊಂಡಿದ್ದು, Mobile App ಮೂಲಕ ಟ್ರಾನ್ಸ್ ಜೆಂಡರ್ಸ್ ಸಮೀಕ್ಷೆಗೆ KARMANI Web Application ಅನ್ನು ಸಿದ್ಧಪಡಿಸಲಾಗಿದೆ. ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆಗೆ ಸೇವಾ ಸಿಂಧು ಮೂಲಕ ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆ web application ಅನ್ನು ಸಿದ್ಧಪಡಿಸಿದ್ದು, ತನ್ಮೂಲಕ ಪ್ರತ್ಯೇಕವಾಗಿ ಎರಡು ಸಮೀಕ್ಷೆಗಳನ್ನು ಕೈಗೊಳ್ಳಲಾಗುತ್ತದೆ.

ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳೊಂದಿಗೆ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆಯನ್ನು ರಾಜ್ಯದ ಎಲ್ಲಾ ತಾಲೂಕು ಸರ್ಕಾರಿ ಆಸ್ಪತ್ರೆಗಳು ಮತ್ತು ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ನಡೆಸಲಾಗುತ್ತದೆ. ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆಯನ್ನು 15 ಜಿಲ್ಲೆಗಳ ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ನಡೆಸಲಾಗುತ್ತದೆ.

ಲಿಂಗತ್ವ ಅಲ್ಪಸಂಖ್ಯಾತರ ಸಮುದಾಯದವರ ಮೂಲಕವೇ ಸಮೀಕ್ಷೆ ಕಾರ್ಯ ಕೈಗೊಳ್ಳುತ್ತಿರುವುದು ಸದರಿ ಸಮೀಕ್ಷೆಯ ವಿಶೇಷತೆಯಾಗಿದೆ. ಮಾಜಿ ದೇವದಾಸಿ ಮಹಿಳೆಯರ ಸಮೀಕ್ಷೆಯನ್ನು ಕೈಗೊಳ್ಳಲು ಗುರುತಿಸಲಾಗಿರುವ ಸಮೀಕ್ಷಾದಾರರಿಗೆ ಹಾಗೂ ದೇವದಾಸಿ ಪುನರ್ವಸತಿ ಯೋಜನಾ ಘಟಕದ ಅಧಿಕಾರಿ ಸಿಬ್ಬಂದಿಯು ಸದರಿ ಸಮೀಕ್ಷೆಯನ್ನು ಕೈಗೊಳ್ಳುತ್ತಾರೆ ಎಂದರು. ಸಮೀಕ್ಷೆದಾರರಿಗೆ ವಿವಿಧ ಹಂತದ ತರಬೇತಿಯನ್ನು ನೀಡಲಾಗಿರುತ್ತದೆ. ಎರಡು ಸಮೀಕ್ಷೆಗಳ ಸಂಬಂಧ ಸಹಾಯವಾಣಿ ಪ್ರಾರಂಭಿಸಲಾಗಿದೆ. ಸಹಾಯವಾಣಿ ಸಂಖ್ಯೆ 1800 599 2025.

---

## ಧರ್ಮಸ್ಥಳ ಪ್ರಕರಣ: ಧಾರ್ಮಿಕ ಮುಖಂಡರಿಂದ ಅಮಿತ್ ಶಾ ಭೇಟಿ



**ಮಂಗಳೂರು:** ಸನಾತನ ಸಂತ ನಿಯೋಗ ಬ್ಯಾನರ್ ಅಡಿಯಲ್ಲಿ ಕರ್ನಾಟಕದ ವಿವಿಧ ಮಠಗಳ ಮಠಾಧೀಶರು ಬುಧವಾರ ದೆಹಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ, ಧರ್ಮಸ್ಥಳ ಪ್ರಕರಣವನ್ನು ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ)ಯಿಂದ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು. ರಾಜಶೇಖರಾನಂದ ಸ್ವಾಮೀಜಿ ಅವರ ಪ್ರಕಾರ, 'ಸನಾತನ ಸಂತ ನಿಯೋಗ' ಬುಧವಾರ ಅಮಿತ್ ಶಾ ಅವರನ್ನು ಭೇಟಿ ಮಾಡಿದ್ದು, ಪ್ರಸ್ತುತ ನಡೆಯುತ್ತಿರುವ ಧರ್ಮಸ್ಥಳ ವಿವಾದದ ಬಗ್ಗೆ ಚರ್ಚಿಸಿತು.

ಗುರುವಾರ ದೆಹಲಿಯಿಂದ ಹಿಂದಿರುಗಿದ ನಂತರ ಪಿಟಿಐ ಜೊತೆ ಮಾತನಾಡಿದ ಸ್ವಾಮೀಜಿ, ಎಲ್ಲಾ ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ ಮತ್ತು ಸಂಪುಟ ಸಭೆಯ ನಂತರ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಅಮಿತ್ ಶಾ ನಿಯೋಗಕ್ಕೆ ಭರವಸೆ ನೀಡಿದ್ದಾರೆ ಎಂದು ಹೇಳಿದ್ದಾರೆ. ಪ್ರಕರಣದ ಬಗ್ಗೆ ನಾವು ಕೇಂದ್ರ ಗೃಹ ಸಚಿವರಿಗೆ ಮಾಹಿತಿ ನೀಡಿದ್ದೇವೆ ಮತ್ತು ಅವರ ಭರವಸೆಯಿಂದ ನಮಗೆ ಸಂತೋಷವಾಗಿದೆ ಎಂದು ಅವರು ತಿಳಿಸಿದ್ದಾರೆ. ಭಾರತದ ಒಳಗೆ ಮತ್ತು ಹೊರಗೆ ಕೆಲವು ಉತ್ತಮ ಸಂಬಂಧ ಹೊಂದಿರುವ ಸ್ಥಾಪಿತ ಹಿತಾಸಕ್ತಿಗಳು ಭಕ್ತರಲ್ಲಿ ಅಭದ್ರತೆ ಮತ್ತು ಭಯವನ್ನು ಹುಟ್ಟುಹಾಕುವ ಉದ್ದೇಶದಿಂದ ಹಿಂದೂ ನಂಬಿಕೆ ಮತ್ತು ಧರ್ಮದ ದೇವಾಲಯಗಳಿಗೆ ಕೆಟ್ಟ ಹೆಸರು ತರಲು ಒಂದು ದೊಡ್ಡ ಷಡ್ಯಂತ್ರ ನಡೆಯುತ್ತಿದೆ ಎಂದು ನಮ್ಮ ನಿಯೋಗ ಮನವರಿಕೆ ಮಾಡಿಕೊಡಲು ಯತ್ನಿಸಿತು" ಎಂದು ಮಠಾಧೀಶರು ಹೇಳಿದ್ದಾರೆ.

---

ಮುಡಾ ಪ್ರಕರಣ: ಮುಖ್ಯಮಂತ್ರಿ ಸಿದ್ದರಾಮಯ್ಯ ಮೇಲ್ಮನವಿ ವಿಚಾರಣೆ

## ನ.2ನೇ ವಾರಕ್ಕೆ ಮುಂದೂಡಿದ 'ಹೈ'

**ಬೆಂಗಳೂರು:** ಮುಡಾ ಪ್ರಕರಣದಲ್ಲಿ ತನಿಖೆಗೆ ಅನುಮತಿ ನೀಡಿ ರಾಜ್ಯಪಾಲರು ಹೊರಡಿಸಿದ್ದ ಆದೇಶವನ್ನು ಎತ್ತಿ ಹಿಡಿದ ಹೈಕೋರ್ಟ್ ಏಕಸದಸ್ಯ ನ್ಯಾಯಪೀಠದ ಕ್ರಮ ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಲ್ಲಿಸಿರುವ ಮೇಲ್ಮನವಿಯ ವಿಚಾರಣೆಯನ್ನು ಹೈಕೋರ್ಟ್ ನವೆಂಬರ್ ಎರಡನೇ ವಾರಕ್ಕೆ ಮುಂದೂಡಿದೆ.

ಏಕಸದಸ್ಯ ನ್ಯಾಯಪೀಠದ ಆದೇಶ ಪ್ರಶ್ನಿಸಿ ಸಿಎಂ ಸಿದ್ದರಾಮಯ್ಯ ಹಾಗೂ ಸಂಬಂಧವಿಲ್ಲದಿದ್ದರೂ ಪ್ರಕರಣದಲ್ಲಿ ತಮ್ಮನ್ನು ಎಳೆದು ತರಲಾಗಿದೆ ಎಂದು ಆಕ್ಷೇಪಿಸಿ ವಿವಾದಿತ ಜಮೀನಿನ ಮೂಲ ಮಾಲಕ ಜೆ.ದೇವರಾಜು ಸಲ್ಲಿಸಿರುವ ಪ್ರತ್ಯೇಕ ಮೇಲ್ಮನವಿಗಳ ಕುರಿತು ನ್ಯಾ.ಅನು ಶಿವರಾಮನ್ ಹಾಗೂ ನ್ಯಾ. ಕೆ.ರಾಜೇಶ್ ರೈ ಅವರಿದ್ದ ವಿಭಾಗೀಯ ನ್ಯಾಯಪೀಠ ಗುರುವಾರ ವಿಚಾರಣೆ ನಡೆಸಿತು. ರಾಜ್ಯ ಸರ್ಕಾರದ ಪರವಾಗಿ ಹಾಜರಾಗಿದ್ದ ಅಡ್ವೋಕೇಟ್ ಜನರಲ್ ಕೆ.ಶಶಿಕಿರಣ್ ಶೆಟ್ಟಿ ಅವರು, ಮೇಲ್ಮನವಿಗಳ ಅಂತಿಮ ವಿಚಾರಣೆ ನಡೆಸಬೇಕಿದೆ ಎಂದು ನ್ಯಾಯಪೀಠಕ್ಕೆ ತಿಳಿಸಿದರು. ಆಗ ನ್ಯಾಯಪೀಠ, ಈ ಮೇಲ್ಮನವಿಗಳ ವಿಚಾರಣೆಯಂದು ಬೇರೆ ಅರ್ಜಿಗಳನ್ನು ಹೆಚ್ಚಾಗಿ ಪಟ್ಟಿ ಮಾಡುವುದಿಲ್ಲ. ಆದ್ದರಿಂದ, ನವೆಂಬರ್ ಮೊದಲ ವಾರದಲ್ಲಿ ಅರ್ಜಿ ವಿಚಾರಣೆ ನಡೆಸಬಹುದೇ ಎಂದು ಕೇಳಿತು. ಇದಕ್ಕೆ ಹಿರಿಯ ವಕೀಲ ಪ್ರೊ. ರವಿವರ್ಮ ಕುಮಾರ್ ಅವರು ನವೆಂಬರ್ ಎರಡನೇ ವಾರದಲ್ಲಿ ವಿಚಾರಣೆ ನಡೆಸುವಂತೆ ಮನವಿ ಮಾಡಿದರು.

ಇದನ್ನು ಪರಿಗಣಿಸಿದ ನ್ಯಾಯಪೀಠ, ಗುರುವಾರ ವಿಚಾರಣೆಗೆ ನಿಗದಿಯಾಗಿದ್ದ ಮೇಲ್ಮನವಿಗಳ ವಿಚಾರಣೆಯನ್ನು ನವೆಂಬರ್ ಎರಡನೇ ವಾರಕ್ಕೆ ಮುಂದೂಡಿತು.**ಪ್ರಕರಣದ ಹಿನ್ನೆಲೆ :** ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಅಕ್ರಮ ನಿವೇಶನ ಹಂಚಿಕೆ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಅನುಮತಿ ನೀಡಿ ರಾಜ್ಯಪಾಲರು ಹೊರಡಿಸಿದ್ದ ಆದೇಶವನ್ನು ಹೈಕೋರ್ಟ್ ಏಕಸದಸ್ಯ ನ್ಯಾಯಪೀಠ 2024ರ ಸೆ.24ರಂದು ಎತ್ತಿಹಿಡಿದಿತ್ತು. ಏಕಸದಸ್ಯ ನ್ಯಾಯಪೀಠದ ಆದೇಶ ಪ್ರಶ್ನಿಸಿ ಸಿಎಂ ಸಿದ್ದರಾಮಯ್ಯ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಿದ್ದರು. ಮತ್ತೊಂದೆಡೆ, ಸಂಬಂಧವಿಲ್ಲದಿದ್ದರೂ ಪ್ರಕರಣದಲ್ಲಿ ತಮ್ಮನ್ನು ಎಳೆದು ತರಲಾಗಿದೆ. ರಾಜ್ಯಪಾಲರ ಕ್ರಮ ಎತ್ತಿ ಹಿಡಿದ ಆದೇಶದಲ್ಲಿ ಏಕಸದಸ್ಯ ನ್ಯಾಯಪೀಠ ವ್ಯಕ್ತಪಡಿಸಿದ್ದ ಕಟು ಅಭಿಪ್ರಾಯಗಳಿಂದ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣ ಎದುರಿಸುವಂತಾಗಿದೆ ಎಂದು ಆಕ್ಷೇಪಿಸಿ ವಿವಾದಿತ ಜಮೀನಿನ ಮೂಲ ಮಾಲಕ ಸಹ ಪ್ರತ್ಯೇಕ ಮೇಲ್ಮನವಿ ಸಲ್ಲಿಸಿದ್ದಾರೆ

---

## ನಮ್ಮ ಸಂಪ್ರದಾಯಕ್ಕೆ ಧಕ್ಕೆ ಆಗದಂತೆ ದಸರಾ ಉದ್ಘಾಟಕರು ನಡೆದುಕೊಳ್ಳಲಿ

**ಮೈಸೂರು:** ಬಿಜೆಪಿಯ ತೀವ್ರ ವಿರೋಧದ ನಡುವೆಯೂ ಬೂಕರ್ ಪ್ರಶಸ್ತಿ ವಿಜೇತ ಸಾಹಿತಿ ಬಾನು ಮುಷ್ತಾಕ್ ಈ ಬಾರಿಯ ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವ ಉದ್ಘಾಟಿಸುವುದು ಅಧಿಕೃತಗೊಂಡಿದೆ.

ಬಾನು ಮುಷ್ತಾಕ್ ಅವರನ್ನು ಬದಲಾಯಿಸಲು ಬಿಜೆಪಿ ಹೇರಿದ ಒತ್ತಡಕ್ಕೆ ರಾಜ್ಯ ಸರ್ಕಾರ ಮಣಿದಿಲ್ಲ. ಬದಲಿಗೆ ದಸರಾ ಉದ್ಘಾಟನೆಗೆ ಅಧಿಕೃತವಾಗಿ ಆಹ್ವಾನ ನೀಡಿದೆ. ಈ ಮಧ್ಯೆ ಇಂದು ಮೈಸೂರಿನ ಶ್ರೀಕ್ಷೇತ್ರ ಚಾಮುಂಡಿಬೆಟ್ಟಕ್ಕೆ ಕೇಂದ್ರ ಸಚಿವ ವಿ. ಸೋಮಣ್ಣ ಭೇಟಿ ನೀಡಿ, ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ವಿ. ಸೋಮಣ್ಣ, ನಂಬಿಕೆ, ಭಕ್ತಿ ಮತ್ತು ಇತಿಹಾಸಕ್ಕೆ ಮತ್ತೊಂದು ಹೆಸರೇ ಚಾಮುಂಡಿ ಬೆಟ್ಟ. ಸರ್ಕಾರವು ಉದ್ಘಾಟಕರಿಗೆ ತಾಯಿ ಚಾಮುಂಡಿ ಇತಿಹಾಸ, ಉತ್ಸವ, ಆರಾಧನೆ, ಸಂಪ್ರದಾಯವನ್ನು ಮೊದಲು ತಿಳಿಸಲಿ. ಈಗ ಉದ್ಘಾಟಕರಾಗಿ ಆಯ್ಕೆಯಾಗಿರುವವರು, ಈ ಸ್ಥಾನಕ್ಕೆ ಅರ್ಹರೋ ಅಥವಾ ಇಲ್ಲವೋ ಎಂಬ ಚರ್ಚೆ ಮಾಡುವುದಿಲ್ಲ ಎಂದರು.



ಧಾರ್ಮಿಕ ವಿಚಾರಗಳಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಪದೇ ಪದೇ ಎಡವಟ್ಟು ಮಾಡುತ್ತಿದೆ. ಸರ್ಕಾರ ಯಾರನ್ನೋ ತೃಪ್ತಿಪಡಿಸುವ ಕೆಲಸ ಮಾಡುವುದು ಸರಿಯಲ್ಲ. ಚಾಮುಂಡಿ ತಾಯಿಯ ಮನಸ್ಸು ಗೆಲ್ಲುವ ಕೆಲಸ ಮಾಡಿದರೆ ದೇಶ ಮತ್ತು ರಾಜ್ಯಕ್ಕೆ ಒಳ್ಳೆಯದಾಗುತ್ತದೆ. ದಸರಾ ಉದ್ಘಾಟಕರು ನಮ್ಮ ಸಂಪ್ರದಾಯಕ್ಕೆ ಧಕ್ಕೆ ಆಗದಂತೆ ನಡೆದುಕೊಳ್ಳಲಿ ಎಂದು ಹೇಳಿದರು.

### ಸಂಕದಾಳ ಗ್ರಾಮದಲ್ಲಿ ನೂತನ ಉಪಗ್ರಂಥಾಲಯ ಉದ್ಘಾಟನೆ

# ಗ್ರಂಥಾಲಯ ಸದ್ಬಳಕೆ ಮಾಡಿಕೊಳ್ಳಿ: ಇನಾಮದಾರ



**ನರಗುಂದ:** ಗ್ರಾಮೀಣ ಪ್ರದೇಶದಲ್ಲಿ ಜ್ಞಾನ ಸಂಪಾದನೆಗೆ ಅತ್ಯಂತ ಸರಳ ಮತ್ತು ಸುಲಭವಾದ ಮಾರ್ಗಗಳನ್ನು ಗ್ರಂಥಾಲಯ ಒದಗಿಸುತ್ತದೆ. ಯುವಕರು, ಗ್ರಾಮಸ್ಥರು ಗ್ರಂಥಾಲಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು" ಎಂದು ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಸ್.ಕೆ. ಇನಾಮದಾರ ಹೇಳಿದರು.

ತಾಲೂಕಿನ ಬೆನಕನಕೊಪ್ಪ ಗ್ರಾಮ ಪಂಚಾಯತಿ ವ್ಯಾಪ್ತಿಯ ಸಂಕದಾಳ ಗ್ರಾಮದಲ್ಲಿ ನೂತನ ಉಪ ಗ್ರಂಥಾಲಯವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಶಾಲೆಯಲ್ಲಿ ಗ್ರಂಥಾಲಯ ತೆರೆದಿರುವುದರಿಂದ ವಿದ್ಯಾರ್ಥಿಗಳಿಗೆ ತುಂಬಾ ಉಪಯುಕ್ತವಾಗಿದೆ. ವಿದ್ಯಾರ್ಥಿಗಳು ಪಠ್ಯದ ಜತೆ ಇತರೆ ಪುಸ್ತಕಗಳನ್ನು ಓದುವುದಕ್ಕೆ ಸಹಕಾರಿಯಾಗಿದೆ. ಜತೆಗೆ ದಿನಪತ್ರಿಕೆ, ಸ್ಪರ್ಧಾತ್ಮಕ ಪರೀಕ್ಷೆಗಳ ಬಗೆಗಿನ ಪುಸ್ತಕ ಓದುವ, ಓದಿದ್ದನ್ನು ಮನನ ಮಾಡಿಕೊಳ್ಳುವುದನ್ನು ರೂಢಿಸಿಕೊಂಡಲ್ಲಿ ಸಾಧನೆ ಮಾಡಬಹುದಾಗಿದೆ ಎಂದರು.

ಗ್ರಂಥಾಲಯಗಳು ಸಾರ್ವಜನಿಕರ ಜ್ಞಾನ ದಾಹವನ್ನು ನೀಗಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ. ಈ ನಿಟ್ಟಿನಲ್ಲಿ ಓದುಗರಿಗೆ ಸಹಾಯವಾಗುವಂತೆ ಅನೇಕ ಪುಸ್ತಕಗಳನ್ನು ಒದಗಿಸಲಾಗುತ್ತಿದೆ. ಐಎಎಸ್, ಐಪಿಎಸ್ ಓದುವಂತವರಿಗೂ ಇಲ್ಲಿ ಪುಸ್ತಕಗಳನ್ನು ಒದಗಿಸುತ್ತೇವೆ. ಇನ್ನೂ ಪುಸ್ತಕಗಳ ಬೇಡಿಕೆ ಸಲ್ಲಿಸಿದರೆ ತರಿಸಿಕೊಡಲಾಗುವುದು ಎಂದರು.

ಪ್ರತಿ ಗ್ರಾಮದಲ್ಲಿ ಅಕ್ಷರಸ್ಥರಾಗಬೇಕು ಎನ್ನುವ ಉದ್ದೇಶದಿಂದ ಸರ್ಕಾರ ಪ್ರತಿ ಗ್ರಾಮ ಪಂಚಾಯತಿಯಲ್ಲಿ ಗ್ರಂಥಾಲಯಗಳ ಸ್ಥಾಪನೆ ಮಾಡಿವೆ. ಅದರ ಹೊರತಾಗಿಯೂ ಉಪ ಗ್ರಂಥಾಲಯ ಸ್ಥಾಪನೆ ಮಾಡಿ ಪ್ರತಿ ಹಳ್ಳಿಗಳಿಗೂ ಗ್ರಂಥಾಲಯ ಸ್ಥಾಪನೆ ಮುಂದಾಗಿದೆ. ಆ ನಿಟ್ಟಿನಲ್ಲಿ ಸಂಕದಾಳ ಗ್ರಾಮದಲ್ಲಿ ಇಂದು ಉದ್ಘಾಟನೆಯಾಗಿದೆ. ತಾಲೂಕಿನಲ್ಲಿ 26 ಗ್ರಂಥಾಲಯಗಳ ಸದ್ಯ ಸ್ಥಾಪನೆಯಾಗಿದ್ದು, ಗ್ರಾಮೀಣ ಭಾಗದ ಜನರಿಗೆ ಅನುಕೂಲವಾಗಿದೆ ಎಂದು ಹೇಳಿದರು.

ಈ ವೇಳೆ ಅಂಗನವಾಡಿ ಕಟ್ಟಡ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಗ್ರಾಮಸ್ಥರು ನೂತನ ಗ್ರಂಥಾಲಯಕ್ಕೆ ಜಾಗವಿದೆ ಸ್ವಂತ ಕಟ್ಟಡ ನಿರ್ಮಿಸಿಕೊಡಲು ಮನವಿ ಮಾಡಿದರು. ಪ್ರಸಕ್ತ ವರ್ಷದಲ್ಲಿ ತಾಲೂಕ ಪಂಚಾಯತ್ ಅನುದಾನದ ಕ್ರಿಯಾಯೋಜನೆ ಈಗಾಗಲೇ ಅನುಮೋಧನೆಯಾಗಿದೆ. ಮುಂದಿನ ವರ್ಷದ ಕ್ರಿಯಾಯೋಜನೆಯಲ್ಲಿ ಇಟ್ಟು ಕಟ್ಟಡ ನಿರ್ಮಾಣ ಮಾಡಲುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಅಧ್ಯಕ್ಷರಾದ ಶಾಂತವ್ವ ಕೊವಿ, ಉಪಾಧ್ಯಕ್ಷರಾದ ಪಾರ್ವತೆವ್ವ ಮಾದರ, ಸದಸ್ಯರಾದ ಸಿದ್ದಣ್ಣ ಅಂಗಡಿ, ನಾಗನಗೌಡ ಪೋಲಿಸ್ ಪಾಟೀಲ, ವೀರಪ್ಪ ನಾಯ್ಕರ್, ಮುಖಂಡರಾದ ಸಿ.ಕೆ. ರಾಚನಗೌಡ್ರ, ಬಸಪ್ಪ ಭೂಮಣ್ಣನವರ, ಸಿದ್ದನಗೌಡ ಚನ್ನಪ್ಪಗೌಡ್ರ, ಪಿಡಿಒ ಎಲ್.ಬಿ. ಕಲ್ಲಾಪೂರ, ಕಾರ್ಯದರ್ಶಿ, ಶರಣಪ್ಪ ಬಾರಕೇರ್, ಪಂಚಾಯತ್ ಸಿಬ್ಬಂದಿಗಳು, ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.

## ಸೆ.7ರಂದು ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ

**ವಿಜಯಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಇದೇ ಸೆಪ್ಟಂಬರ್ 7ರಂದು ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಕಾರ್ಯಕ್ರಮವನ್ನು ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಉದ್ಘಾಟನೆ ನೆರವೇರಿಸಲಿದ್ದು, ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆಯ ಸಚಿವರಾದ ಶಿವಾನಂದ ಎಸ್. ಪಾಟೀಲ ಅವರು ಗೌರವ ಉಪಸ್ಥಿತರಿರಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಜಯಪುರ ನಗರ ಶಾಸಕ ಬಸನಗೌಡ ಆರ್. ಪಾಟೀಲ (ಯತ್ನಾಳ) ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ರವಿಕುಮಾರ ಎನ್, ನವದೆಹಲಿಯ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ–2 ಹಾಗೂ ವಿಧಾನ ಪರಿಷತಿನ ಶಾಸಕರಾದ ಪ್ರಕಾಶ ಬಿ.ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತದ ಅಧ್ಯಕ್ಷರು ಹಾಗೂ ಶಾಸಕರಾದ ಅಪ್ಪಾಜಿ ಸಿ.ಎಸ್.ನಾಡಗೌಡ, ಸಂಸದರಾದ ರಮೇಶ ಜಿಗಜಿಣಗಿ, ಸುಧಾ ಮೂರ್ತಿ, ಶಾಸಕರಾದ ಯಶವಂತರಾಯಗೌಡ ವ್ಹಿ.ಪಾಟೀಲ, ಹಣಮಂತ ಆರ್. ನಿರಾಣಿ, ಸುನೀಲಗೌಡ ಬಿ.ಪಾಟೀಲ, ಪಿ.ಎಚ್.ಪೂಜಾರ, ವಿಠ್ಠಲ ಧೋಂಡಿಬಾ ಕಟಕಧೋಂಡ, ಭೀಮನಗೌಡ (ರಾಜುಗೌಡ)ಬಸನಗೌಡ ಪಾಟೀಲ, ಅಶೋಕ ಮಲ್ಲಪ್ಪ ಮನಗೂಳಿ, ಕೇಶವ ಪ್ರಸಾದ ಎಸ್, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಕಾಂತಾ ನಾಯ್ಕ, ಧಾರವಾಡದ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷರಾದ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಮಹಾನಗರ ಪಾಲಿಕೆಯ ಮಹಾಪೌರರಾದ ಮಡಿವಾಳಪ್ಪ ಸಿದ್ದರಾಮಪ್ಪ ಕರಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕನಾನ್ ಅಬ್ದುಲ್ ಹಮೀದ್ ಮುಶ್ರೀಫ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಇಲಿಯಾಸ ಬೋರಾಮಣಿ ಬಿನ್ ಮೈಬೂಬ್ ಬೋರಾಮಣಿ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

## ಹೋಬಳಿ ಮಟ್ಟದ ಪಿಂಚಣಿ ಅದಾಲತ್

**ವಿಜಯಪುರ:** ವಿವಿಧ ಸಾಮಾಜಿಕ ಭದ್ರತೆ ಯೋಜನೆಗಳನ್ನು ಪರಿಣಾಮಕಾರಿ ಅನುಷ್ಠಾನಗೊಳಿಸಲು ಜಿಲ್ಲೆಯ ಹೋಬಳಿ ಮಟ್ಟದಲ್ಲಿ ಪಿಂಚಣಿ ಅದಾಲತ್ ನಡೆಸಲಾಗುತ್ತಿದ್ದು, ಇದೇ ಸೆಪ್ಟೆಂಬರ್ 6ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲೆಯ ವಿವಿಧ 15 ಗ್ರಾಮಗಳಲ್ಲಿ ಹೋಬಳಿ ಮಟ್ಟದ ಪಿಂಚಣಿ ಅದಾಲತ್ ಹಮ್ಮಿಕೊಳ್ಳಲಾಗಿದೆ.

ವಿಜಯಪುರ ಉಪ ವಿಭಾಗಾಧಿಕಾರಿಗಳು ತಾಳಿಕೋಟೆ ತಾಲೂಕಿನ ಬಳಗಾನೂರ ಗ್ರಾಮದ ಮಾರುತಿ ದೇವಸ್ಥಾನದಲ್ಲಿ, ಇಂಡಿ ಉಪವಿಭಾಗಾಧಿಕಾರಿಗಳು ಸಿಂದಗಿ ತಾಲೂಕಿನ ಚಾಂದಕವಠೆ ಗ್ರಾಮದ ಪಂಚಾಯತಿ ಕಾರ್ಯಾಲದಲ್ಲಿ, ವಿಜಯಪುರ ಗ್ರೇಡ್–2 ತಹಶೀಲ್ದಾರ ಅವರು ವಿಜಯಪುರ ನಗರದ ಕಸಬಾ ಚಾವಡಿ ಜೆ.ಎಂ.ರಸ್ತೆಯಲ್ಲಿನ ಗ್ರಾಮ ಆಡಳಿತಾಧಿಕಾರಿ ಕಾರ್ಯಾಲಯದಲ್ಲಿ, ಹಾಗೂ ತಿಕೋಟಾ ಗ್ರೇಡ್–2 ತಹಶೀಲ್ದಾರ ಅವರು ಯತ್ನಾಳ ಗ್ರಾಮದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಬಬಲೇಶ್ವರ ಗ್ರೇಡ್–2 ತಹಶೀಲ್ದಾರ ಅವರು ಹೊಸೂರ ಗ್ರಾಮದ ಶ್ರೀ ಹನುಮಾನ ದೇವಸ್ಥಾನದಲ್ಲಿ, ಬಸವನಬಾಗೇವಾಡಿ ಗ್ರೇಡ್–2 ತಹಶೀಲ್ದಾರ ಅವರು ನಾಗೂರ ಗ್ರಾಮದ ಶ್ರೀ ಮಲ್ಲಯ್ಯನ ಗುಡಿಯಲ್ಲಿ, ನಿಡಗುಂದಿ ತಹಶೀಲ್ದಾರ ಅವರು ಹುಣಶ್ಯಾಳ ಪಿ.ಸಿ ಗ್ರಾಮದ ಶ್ರೀ ಬೀರಲಿಂಗೇಶ್ವರ ದೇವಸ್ಥಾನದಲ್ಲಿ, ಕೊಲ್ಹಾರ ತಹಶೀಲ್ದಾರ ಅವರು ಚಿಕ್ಕ ಆಸಂಗಿ ತಾಲೂಕಿನ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ಹಾಗೂ ಮುದ್ದೇಬಿಹಾಳ ಗ್ರೇಡ್–2 ತಹಶೀಲ್ದಾರ ಅವರು ಬೂದಿಹಾಳ ಪಿ.ಎನ್.ನ ಶ್ರೀ ಮಾರುತೇಶ್ವರ ದೇವಸ್ಥಾನದಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ತಾಳಿಕೋಟೆ ಗ್ರೇಡ್–2 ತಹಶೀಲ್ದಾರ ಅವರು ಗುತ್ತಿಹಾಳ ಗ್ರಾಮದ ಶ್ರೀ ಮಾರುತೇಶ್ವರ ದೇವಸ್ಥಾನದಲ್ಲಿ, ಇಂಡಿ ಗ್ರೇಡ್–2 ತಹಶೀಲ್ದಾರ ಅವರು ಅಗಸನಾಳ ಗ್ರಾಮದ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ, ಚಡಚಣ ತಹಶೀಲ್ದಾರ ಅವರು ಗೋಟ್ಯಾಳ ಗ್ರಾಮದ ಜಹಾಂಗೀರಸಾಬ ದರ್ಗಾದಲ್ಲಿ, ಸಿಂದಗಿ ಗ್ರೇಡ್–2 ತಹಶೀಲ್ದಾರ ಅವರು ಬಸ್ತಿಹಾಳ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ, ದೇವರಹಿಪ್ಪರಗಿ ತಹಶೀಲ್ದಾರ ಅವರು ಜಾಲವಾದ ಎಲ್.ಟಿ. ನಂ.2 ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ ಹಾಗೂ ಆಲಮೇಲ ಗ್ರೇಡ್–2 ತಹಶೀಲ್ದಾರ ಅವರು ಕುರುಬತಳ್ಳಿ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ಆನಂದ ಕೆ.ಅವರು ತಿಳಿಸಿದ್ದಾರೆ.

## ಮಹಾನಗರ ಪಾಲಿಕೆ ಸಾಮಾನ್ಯ ಸಭೆ

**ವಿಜಯಪುರ:** ವಿಜಯಪುರ ಮಹಾನಗರ ಪಾಲಿಕೆಯ ಸಾಮಾನ್ಯ ಸಭೆಯನ್ನು ಜಲನಗರದ ಪಾಲಿಕೆ ಕಚೇರಿ ಸಭಾಂಗಣದಲ್ಲಿ ದಿನಾಂಕ : 09–09–2025 ರಂದು ಬೆಳಿಗ್ಗೆ 11 ಗಂಟೆಗೆ ಆಯೋಜಿಸಲಾಗಿದೆ ಎಂದು ಪಾಲಿಕೆಯ ಪರಿಷತ್ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ವಿಜಯಪುರ:** 2025–26 ನೇ ಸಾಲಿಗೆ ಕೃಷಿ ಇಲಾಖೆ ವತಿಯಿಂದ ಹೈಟೆಕ್ ಹಾರ್ವೆಸ್ಟರ್ ಹಬ್ ಕಾರ್ಯಕ್ರಮದಡಿ ಶುಗರ್ ಕೇನ ಹಾರ್ವೆಸ್ಟರ್ ಹಬ್ ಗಳನ್ನು ಹಾಗೂ ಕಂಬೈನ್ಸ್ ಹಾರ್ವೆಸ್ಟರ್ ಹಬ್‌ಗಳನ್ನು ಸಹಾಯಧನದಡಿ ವಿತರಿಸಲು ವೈಯಕ್ತಿಕ ಫಲಾನುಭವಿಗಳಿಗೆ ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪಿಸಲು ಅವಕಾಶ ನೀಡುವ ನಿಟ್ಟಿನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆ,18 ಕೊನೆಯ ದಿನಾಂಕವಾಗಿದೆ.

ಸಾಮಾನ್ಯ ಹಾಗೂ ಪರಿಶಿಷ್ಟ ವರ್ಗದಡಿ ವೈಯಕ್ತಿಕ ಫಲಾನುಭವಿಗಳಿಗೆ ಶುಗರ್ ಕೇನ ಹಾರ್ವೆಸ್ಟರ್ ಹಾಗೂ ಕಂಬೈನ್ಸ್ ಹಾರ್ವೆಸ್ಟರ್ ಹಬ್‌ಗಳನ್ನು ಸಹಾಯಧನದಡಿ ಅನುಷ್ಠಾನಗೊಳಿಸಲಾಗುತ್ತಿದ್ದು, ಯಂತ್ರೋಪಕರಣ ಖರೀದಿಸಲು ಆದ್ಯತೆ ಹಾಗೂ ಅನುದಾನ ಲಭ್ಯತೆ ಮೇರೆಗೆ ಸಹಾಯಧನ ಒದಗಿಸಲಾಗುವುದು. ಆಸಕ್ತರು, ತಮ್ಮ ಅರ್ಜಿಗಳನ್ನು ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತ್ಸ್ಯಾಶ್ರಯ ಯೋಜನೆ: ಅರ್ಜಿ ಆಹ್ವಾನ

**ಕೊಪ್ಪಳ:** ಗಂಗಾವತಿ ಮೀನುಗಾರಿಕ ಇಲಾಖೆಯಿಂದ 2024–25ನೇ ಸಾಲಿನ ಮತ್ಸ್ಯಾಶ್ರಯ ಯೋಜನೆಯಡಿ ನಿರ್ವಸತಿ ಮೀನುಗಾರ–ರಿಗೆ ಮನೆ ನಿರ್ಮಾಣಕ್ಕೆ ನೀಡಲಾಗುವ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಮತ್ಸ್ಯಾಶ್ರಯ ಯೋಜನೆಯಡಿ ಕನಕಗಿರಿ ವಿಧಾನ ಸಭಾ ಕ್ಷೇತ್ರಕ್ಕೆ ಸಾಮಾನ್ಯ ವರ್ಗ–38, ಪರಿಶಿಷ್ಟ ಜಾತಿ–9, ಪರಿಶಿಷ್ಟ ಪಂಗಡ–3 ಒಟ್ಟು 50 ಮನೆಗಳು ಹಂಚಿಕೆಯಾಗಿದ್ದು, ಕನಕಗಿರಿ ಮತ್ತು ಕಾರಟಗಿ ತಾಲೂಕಿನ ಮೀನುಗಾರರ ಸಹಕಾರ ಸಂಘಗಳ ಸದಸ್ಯರಿಗೆ ಮೊದಲ ಆದ್ಯತೆ ನೀಡಲಾಗುತ್ತದೆ. ಈ ಯೋಜನೆಯಡಿ ನಿರ್ವಸತಿ ಮೀನುಗಾರರಿಗೆ ಮನೆಗಳನ್ನು ನಿರ್ಮಿಸಿಕೊಳ್ಳಲು ಸಹಾಯಧನ ವಿತ–ರಿಸಲಾಗುತ್ತಿದ್ದು, ನಿರ್ವಸತಿ ಮೀನುಗಾರರು ಸೆಪ್ಟೆಂಬರ್ 15 ರೊಳಗಾಗಿ ಗಂಗಾವತಿ ಮೀನುಗಾರಿಕೆ ಸಹಾಯಕ ನಿರ್ದೇಶಕರಲ್ಲಿಗೆ ಕಛೇರಿ ವೇಳೆಯಲ್ಲಿ ಅರ್ಜಿಗಳನ್ನು ಪಡೆದು ಭರ್ತಿ ಮಾಡಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಗೆ ಸಂಪರ್ಕಿಸುವಂತೆ ಗಂಗಾವತಿ ಮೀನುಗಾರಿಕೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ರಹ್ಮಶ್ರೀ ನಾರಾಯಣಗುರು ಜಂಯತಿ.

**ಕಾರವಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಬ್ರಹ್ಮಶ್ರೀ ನಾರಾಯಣಗುರು ಜಯಂತಿಯನ್ನು ಸೆ.7 ರಂದು ಬೆಳಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಉದ್ಘಾಟಿಸಲಿದ್ದು, ಕರ್ನಾಟಕ ಮಾರ್ಕೇಟಿಂಗ್ ಕನ್ಸಲ್ಟೆಂಟ್ ಅಂಡ್ ಏಜೆನ್ಸಿಸ್ ಅಧ್ಯಕ್ಷ ಸತೀಶ ಕೆ. ಸೈಲ್ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ ದೇಶಪಾಂಡೆ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರಾದ ಶಿವರಾಮ ಹೆಬ್ಬಾರ್, ದಿನಕರ ಕೆ. ಶೆಟ್ಟಿ, ಭೀಮಣ್ಣ ಟಿ. ನಾಯ್ಕ, ವಿಧಾನ ಪರಿಷತ್ ಶಾಸಕರಾದ ಎಸ್. ವಿ.ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಡಿ.ಉಳ್ವೇಕರ ಹಾಗೂ ನಗರಸಭೆ ಅಧ್ಯಕ್ಷ ರವಿರಾಜ ಚಂದ್ರಹಾಸ ಅಂಕೋಲೇಕರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸತೀಶ ನಾಯ್ಕ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

## ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ಕಾರವಾರ:** ಮೀನುಗಾರಿಕೆ ಇಲಾಖೆಯಿಂದ 2025–26 ನೇ ಸಾಲಿಗೆ ರಾಜ್ಯ ವಲಯ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಗಳಡಿ ನಾಲ್ಕು ಚಕ್ರ ವಾಹನ ಖರೀದಿಸಲು ಸಹಾಯಧನಕ್ಕಾಗಿ ಅರ್ಹ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಮೀನುಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ನಾಲ್ಕು ಚಕ್ರ ವಾಹನ ಖರೀದಿಗೆ ಶೇ.50 ರಂತೆ ಗರಿಷ್ಠ 3 ಲಕ್ಷ ರೂ.ವರೆಗೆ ಆರ್ಥಿಕ ನೆರವು ನೀಡಲಾಗುವುದು. ಜಿಲ್ಲೆಗೆ ಪರಿಶಿಷ್ಟ ಜಾತಿಗೆ 2 , ಪರಿಶಿಷ್ಟ ಪಂಗಡಕ್ಕೆ 1 ಗುರಿ ನಿಗದಿಪಡಿಸಲಾಗಿದೆ. ಅರ್ಹರು ಸೆ. 20 ರೊಳಗೆ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು ಕಛೇರಿಗೆ ಅರ್ಜಿ ಸಲ್ಲಿಸಬಹುದು ಎಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರವಾರ: ಮಹಿಳೆ ಕಾಣೆ

**ಕಾರವಾರ:** ಆದಿತಿ ಆನಂದ ಬಸ್ತಾವಾಡ (29 ವರ್ಷ) ತಾ. ಬೆಳಗಾವಿ ಸಾ. ಉಪ್ಪಾರಗಲ್ಲಿ ಹಾಲಿ ನಂದಿಶ್ವರನಗರ, ಮುಂಡಗೋಡು ಇವಳು ದಿನಾಂಕ:7–3–2025ರಂದು ಮನೆಯವರು ತಮ್ಮ ಹೋಟೆಲ್‌ಗೆ ಹೋಗುವ ಸಮಯದಲ್ಲಿ ಮನೆಯಲ್ಲಿ ಕೆಲಸ ಮಾಡಿಕೊಂಡು ಅಡುಗೆ ಮಾಡಿಕೊಂಡು ಹೋಟೇಲ್‌ಗೆ ತೆಗೆದುಕೊಂಡು ಬರುವುದಾಗಿ ಹೇಳಿದವಳು ಸಂಜೆ 4 ಗಂಟೆಯಾದರು ಹೋಟೆಲಿಗೆ ಬಾರದೇ ಸಂಬಂಧಿಕರ ಮನೆಗೂ ಹೋಗದೇ ಮನೆಯಿಂದ ಎಲ್ಲಿಯೋ ಹೋಗಿ ಕಾಣೆಯಾಗಿರುತ್ತಾಳೆ. **ಮಹಿಳೆಯ ಚಹರೆ:** ಗೋಧಿ ಬಣ್ಣ, ಸಾಧಾರಣ ಮೈ ಕಟ್ಟು, ಉದ್ದನೆಯ ಮುಖ, ಕಪ್ಪು ಬಿಳಿ ಮಿಶ್ರಿತ ಟೀ ಶರ್ಟ್ ಹಾಗೂ ನೈಟ್ ಪ್ಯಾಂಟ್ ಧರಿಸಿರುತ್ತಾಳೆ. ಕನ್ನಡ ಮತ್ತು ಹಿಂದಿ ಭಾಷೆ ಮಾತನಾಡುತ್ತಾಳೆ. ಇವರು ಸಾರ್ವಜನಿಕರಿಗೆ ಕಂಡು ಬಂದಲ್ಲಿ ಮುಂಡಗೋಡ ಪಿಎಸ್ ದೂ.ಸಂ:08301222211, ಸಂಪರ್ಕಿಸುವಂತೆ ಮುಂಡಗೋಡ ಠಾಣೆಯ ಪೋಲೀಸ್ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೋಗಿಗಳಿಗೆ ಹಣ್ಣು ಹಂಪಲ ವಿತರಣೆ



**ಬೈಲಹೊಂಗಲ:** ಚನ್ನಮ್ಮನ ಕಿತ್ತೂರು ಕ್ಷೇತ್ರದ ಮಾಜಿ ಶಾಸಕರು, ಬೆಳಗಾವಿ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕನ ನಿರ್ದೇಶಕರಾದ ಮಹಾಂತೇಶ ದೊಡ್ಡಗೌಡರ ಅವರು ಇಂದು ತಮ್ಮ 52 ನೇ ಜನ್ಮದಿನವನ್ನು ವಿನೂತನವಾಗಿ ಅಭಿಮಾನಿಗಳ, ಕಾರ್ಯಕರ್ತರ ಸಮ್ಮುಖದಲ್ಲಿ ಬಡರೋಗಿಗಳ, ಶಾಲಾ ಮಕ್ಕಳ ಸೇವೆಯೊಂದಿಗೆ ಆಚರಿಸಿಕೊಂಡರು.

ಅವರು ನಗರದ ಮಲಪ್ರಭಾ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ತೆರಳಿ ಅಲ್ಲಿನ ಒಳ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿ ಮಾತನಾಡಿ ನಾನು ಅಧಿಕಾರ ಇದ್ದರು, ಇಲ್ಲದಿದ್ದರೂ ಬಡವರ ಪರ ಕೆಲಸ ಮಾಡಲು ನನಗೆ ಶಕ್ತಿಯನ್ನು ನನ್ನ ಅಭಿಮಾನಿಗಳು ಹಾಗೂ ಬೆಂಬಲಿಗರು ಕೊಟ್ಟಿದ್ದು ಅವರಿಗೆ ಚುತಿ ತರದ ಹಾಗೆ ಸದಾ ಸಮಾಜ ಸೇವೆ ಮಾಡಲು ಸಿದ್ದನಿದ್ದೇನೆ ಇದಕ್ಕೆ ಕಾರಣ ನಮ್ಮ ತಂದೆ ದಿ. ಬಸವಂತರಾಯ ದೊಡ್ಡಗೌಡರ ಹಾಗೂ ತಾಯಿ ದಿ. ಗಂಗಮ್ಮ ಅವರು ಹಾಕಿಕೊಟ್ಟ ದಾರಿ ಕಾರಣ ಎಂದರು.

ಮಹಾಂತೇಶ ದೊಡ್ಡಗೌಡರ ಅವರ ಪತ್ನಿ ಮಂಜುಳಾ ದೊಡ್ಡಗೌಡರ ಮಾತನಾಡಿ ನೀವು ಗೌಡರ ಮೇಲೆ ಇಟ್ಟಿರುವ ಪ್ರೀತಿಗೆ ನಮ್ಮ ಕುಟುಂಬ ಸದಾ ನಿಮಗೆ ಚಿರಋಣಿ ಅಗಿದ್ದು, ನಿಮ್ಮ ಅಭಿಮಾನಕ್ಕೆ ನಮ್ಮ ಯಜನಾನರಿಗೆ ಸಮಾಜ ಸೇವೆ ಮಾಡಲು ಸ್ಫೂರ್ತಿ ಎಂದರು.

52 ನೇ ಹುಟ್ಟುಹಬ್ಬದ ಪ್ರಯುಕ್ತ ಅಭಿಮಾನಿಗಳಿಂದ ರಕ್ತದಾನ ಶಿಬಿರ, ಸರ್ಕಾರಿ ಶಾಲೆ ವಿದ್ಯಾರ್ಥಿಗಳಿಗೆ ಊಟದ ತಟ್ಟೆ ವಿತರಣೆ, ತಾಲೂಕಾ ಸರ್ಕಾರಿ ಆಸ್ಪತ್ರೆ ಒಳರೋಗಿಗಳಿಗೆ ಹಣ್ಣುವಿತರಣೆ ಇನ್ನೂ ಅನೇಕ ವಿಶಿಷ್ಟ ಜನಪರ ಕಾರ್ಯಕ್ರಮ ಮಹಾಂತೇಶ್ ದೊಡ್ಡಗೌಡರ ಅಭಿಮಾನಿ ಬಳಗ ಮಾಡುವ ಮೂಲಕ ಅರ್ಥಗರ್ಭಿತವಾಗಿ ಮಾಜಿ ಶಾಸಕ ಹಾಗೂ ಬಿಡಿಸಿಸಿ ಬ್ಯಾಂಕ ನಿರ್ದೇಶಕರಾದ ಮಹಾಂತೇಶ ದೊಡ್ಡಗೌಡರ ಅವರ ಜನ್ಮದಿನಾಚರಣೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರು, ವೈದ್ಯರು, ದೊಡ್ಡಗೌಡರ ಕುಟುಂಬದ ಅಭಿಮಾನಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಶಿರಸಿ: ಉತ್ತಮ ಶಿಕ್ಷಕ ಪ್ರಶಸ್ತಿ ವಿಜೇತರು

**ಕಾರವಾರ:** ಶಿರಸಿ ಶೈಕ್ಷಣಿಕ ಜಿಲ್ಲೆಯ ಶಿಕ್ಷಕರ ದಿನಾಚರಣೆ ಅಂಗವಾಗಿ ನೀಡುವ ಜಿಲ್ಲಾ ಉತ್ತಮ ಶಿಕ್ಷರ ಪ್ರಶಸ್ತಿಗೆ ಕಿರಿಯ ಪ್ರಾಥಮಿಕ ವಿಭಾಗದಲ್ಲಿ , ಜೋಯಿಡಾ ತಾ. ಕ್ಯಾಸಲ್‌ರಾಕ್ ಶಾಲೆಯ ಸಹ ಶಿಕ್ಷಕ ಮುತ್ತಪ್ಪ ವಠಾರ, ಹಳಿಯಾಳ ತಾ. ಹೊಸಹಡಗಲಿಯ ವನಶ್ರೀ ಸಿಂಧೆ, ಯಲ್ಲಾಪುರ ತಾ. ಅಲ್ಕೇರಿ ಗೌಳಿವಾಡದ ಗಂಗಪ್ಪ ಎಸ್ ಲಮಾಣಿ, ಮುಡಗೋಡ ತಾ. ತಟ್ಟಿಹಳ್ಳಿಯ ಸುನೀತಾ ಕೃಷ್ಣಪ್ಪ ಪವಾರ, ಸಿದ್ದಾಪುರ ತಾ.ಕೊಳಗಿಯ ಧರ್ಮಣ್ಣ, ಶಿರಸಿ ತಾ. ಭದ್ರಾಪುರದ ರಂಜನಾ ಹೆಗಡೆ.

**ಹಿರಿಯ ಪ್ರಾಥಮಿಕ ವಿಭಾಗ:** ಜೋಯಿಡಾ ತಾ. ಮೌವಳಿಂಗ ಶಾಲೆಯ ಶ್ರೀಕಾಂತ ನಾಯ್ಕ, ಹಳಿಯಾಳ ತಾ. ಕೇರವಾಡ (ಹವಗಿ)ದ ಸುನೀತಾ ಹುಲುಸ್ವಾರ, ಯಲ್ಲಾಪುರ ತಾ. ಅರಬೈಲನ ಶೀವಲೀಲಾ ಹುಣಸಗಿ, ಮುಂಡಗೋಡ ತಾ. ಹಿರೇಹಳ್ಳಿಯ ಪೂರ್ಣಿಮಾ ಕೈಟಕರ್, ಸಿದ್ದಾಪುರ ತಾ. ವಾಜಗದ್ದೆಯ ವಿನಾಯಕ ಹೆಗಡೆ, ಶಿರಸಿ ತಾ. ರಾಮನಬೈಲ್‌ನ ಎನ್.ಬಿ. ನಾಯ್ಕ.

**ಪ್ರೌಢ ಶಾಲಾ ವಿಭಾಗ:** ಜೋಯಿಡಾ ತಾ. ಬಾಪೇಲಿಕ್ರಾಸ್ ಶಾಲೆಯ ಸಹಶಿಕ್ಷಕ ಶಿವನಂದಾ ಕೆ.ಎಚ್, ದಾಂಡೇಲಿಯ ಜನತಾ ವಿದ್ಯಾಲಯದ ಕಿಶೋರ ಕಿಂದಳಕರ, ಯಲ್ಲಾಪುರದ ವಿಶ್ವದರ್ಶನ ಪ್ರೌಢ ಶಾಲೆಯ ಮುಕ್ತಾಬಾಯಿ ಎಸ್ ಹೆಗಡೆ, ಮುಂಡಗೋಡ ತಾ. ಮುಳಗಿ ಕರ್ನಾಟಕ ಪಬ್ಲಿಕ್ ಶಾಲೆಯ ಅಶೋಕ ಸಂಕ್ರಿಕೊಪ್ಪ, ಸಿದ್ದಾಪುರ ತಾ. ಬೇಡ್ಕಣಿಯ ಜನತಾ ವಿದ್ಯಾಲಯದ ಪ್ರಕಾಶ ಮಂಜುನಾಥ ನಾಯ್ಕ, ಶಿರಸಿ ತಾ. ಬಿಸ್ಲಕೊಪ್ಪ ಶ್ರೀ ಸೂರ್ಯನಾರಾಯಣ ಪ್ರೌಢ ಶಾಲೆಯ ಗಣೇಶ ಭಟ್ಟ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.ಶೈಕ್ಷಣಿಕ

**ಕಾರವಾರ: ಉತ್ತಮ ಶಿಕ್ಷಕ ಪ್ರಶಸ್ತಿ ವಿಜೇತರು**

**ಕಾರವಾರ:** ಕಾರವಾರ ಶೈಕ್ಷಣಿಕ ಜಿಲ್ಲೆಯ ಶಿಕ್ಷಕರ ದಿನಾಚರಣೆ ಅಂಗವಾಗಿ ನೀಡುವ ಜಿಲ್ಲಾ ಉತ್ತಮ ಶಿಕ್ಷರ ಪ್ರಶಸ್ತಿಗೆ ಕಿರಿಯ ಪ್ರಾಥಮಿಕ ವಿಭಾಗದಲ್ಲಿ ನಾಗವೇಣಿ ಶಿವಾನಂದ ನಾಯ್ಕ, ಸರಕಾರಿ ಕಿರಿಯ ಪ್ರಾಥಮಿಕ ಶಾಲೆ, ಹಬ್ಬುವಾಡ, ತಾ:ಕಾರವಾರ, ಬಾಬು ಬುಧದಂತ ಗೌಡ, ಸರಕಾರಿ ಕಿರಿಯ ಪ್ರಾಥಮಿಕ ಶಾಲೆ, ಕಟ್ಟಿನಹಕ್ಕಲ, ತಾ: ಅಂಕೋಲಾ(ಉ.ಕ), ಉಷಾಬಾಯಿ ಗಣಪತಿ ನಾಯ್ಕ, ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ತಾರಿಬಾಗಿಲು ನಂ.2, ತಾ:ಕುಮಟಾ(ಉ.ಕ), ಸುನಂದಾ ಕೃಷ್ಣ ಭಟ್ಟ, ಸರಕಾರಿ ಕಿರಿಯ ಪ್ರಾಥಮಿಕ ಶಾಲೆ, ಕೋಟಾ, ಅನಂತವಾಡಿ, ತಾ: ಹೊನ್ನಾವರ(ಉ.ಕ) ಸುಮನಾ ಕೆ. ಸರಕಾರಿ ಕಿರಿಯ ಪ್ರಾಥಮಿಕ ಶಾಲೆ, ಹಡಾಳ ತಾ:ಭಟ್ಕಳ

ಹಿರಿಯ ಪ್ರಾಥಮಿಕ ಶಾಲಾ ವಿಭಾಗದಲ್ಲಿ ಮಾಲಿನಿ ಕೃಷ್ಣ ನಾಯಕ, ಶಾಸಕರ ಮಾದರಿ ಹಿರಿಯ ಪ್ರಾಥಮಿಕ ಶಾಲೆ, ಕಾರವಾರ, ಸಾವಿತ್ರಿ ಹಮ್ಮಣ್ಣ ನಾಯಕ, ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ (ಮೀನುಗಾರಿಕೆ), ಶ್ಯಾಮಲಾ ಸುಬ್ರಾಯ ಹೆಗಡೆ, ಸರಕಾರಿ ಹಿರಿಯ ಪ್ರಾಥಮಿಕ ಶಾಲೆ, ಉಪ್ಪಿನಪಟ್ಟಣ, ತಾ:ಕುಮಟಾ(ಉ.ಕ) ಗಣಪಯ್ಯ ಈರ ಗೌಡ, ಸರಕಾರಿ ಹಿರಿಯ ಪ್ರಾಥಮಿಕ ಶಾಲೆ, ಅಪ್ಸರಕೊಂಡ, ತಾ:ಹೊನ್ನಾವರ, ವಾಸು ಡಿ ನಾಯ್ಕ, ಪಿ.ಎಮ್.ಶ್ರೀ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ, ಚಾಲೆ ತಾ:ಭಟ್ಕಳ

ಪ್ರೌಢಶಾಲಾ ವಿಭಾಗದಲ್ಲಿ ತಿಮ್ಮಪ್ಪ ಪರಮೇಶ್ವರ ನಾಯಕ, ದಿ ಪೊಪ್ಯುಲರ್ ನ್ಯೂ ಇಂಗ್ಲೀಷ್ ಸ್ಕೂಲ್ ಚೆಂಡಿಯಾ, ತಾ:ಕಾರವಾರ, ನೇಮಸಿಂಗ ವಾಲಪ್ಪ ರಾಠೋಡ, ಸತ್ಯಾಗ್ರಹ ಸ್ಮಾರಕ ವಿದ್ಯಾಲಯ, ಶೆಟಗೇರಿ, ಅಂಕೋಲಾ(ಉ.ಕ), ಚಂದ್ರಶೇಖರ ಗೌಡಣ್ಣ ನಾಯಕ ದೊರೆ, ಬಿ.ಸಿ.ಪಿ.ಯು ಕಾಲೇಜ್, ಪ್ರೌಢಶಾಲಾ ವಿಭಾಗ, ಗೋಕರ್ಣ, ತಾ:ಕುಮಟಾ) ಉ.ಕ), ಶ್ರೀಕಾಂತ ಭೀಮಪ್ಪ ಹಿಟ್ನಳ್ಳಿ, ಶ್ರೀ ಚೆನ್ನಕೇಶದ ಪ್ರೌಢಶಾಲೆ ಕರ್ಕಿ, ಹೊನ್ನಾವರ(ಉ.ಕ), ಸುಜಾತಾ ಟಿ ಹೊರ್ಟಾ, ಕರ್ನಾಟಕ ಪಬ್ಲಿಕ್ ಸ್ಕೂಲ್ ಬೈಲೂರು, ತಾ: ಭಟ್ಕಳ ಇವರು ಆಯ್ಕೆಯಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ಬಸವ ಸಂಸ್ಕ್ರತಿ ರಥಯಾತ್ರೆಗೆ ಮುಸ್ಲಿ ಬಾಂಧವರಿಂದ ಗೌರವ

**ಬಸವನಬಾಗೇವಾಡಿ:** ಲಿಂಗಾಯತ ಮಠಾಧಿಪತಿಗಳ ಒಕ್ಕೂಟವು ರಾಜ್ಯಾದ್ಯಂತವಾಗಿ ಹಮ್ಮಿಕೊಂಡಿರುವ ಬಸವ ಸಂಸ್ಕೃತಿ ಅಭಿಯಾನದ ಭವ್ಯ ರಥಯಾತ್ರೆ ಸೋಮವಾರ ಪ್ರಮುಖ ಬೀದಿಗಳಲ್ಲಿ ಸಾಗಿ ಬರುವ ಸಂದರ್ಭದಲ್ಲಿ ಜಾಮೀಯ ಮಸೀದಿ ಹತ್ತಿರ ರಥ ಆಗಮಿಸಿದ ಸಂದರ್ಭದಲ್ಲಿ ಮುಸ್ಲಿಂ ಬಾಂಧವರು ರಥಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಮೆರವಣಿಗೆಯಲ್ಲಿ ಸಾಗಿದ ಶ್ರೀಗಳಿಗೆ,ಬಸವ ಭಕ್ತರಿಗೆ, ರಥಕ್ಕೆ ಪುಷ್ಪ ವೃಷ್ಟಿ ಮಾಡಿದರು. ಮೆರವಣಿಗೆಯಲ್ಲಿ ಸಾಗಿದ ಎಲ್ಲ ಜನರಿಗೆ ಶರಬತ್ತು, ಕುಡಿಯುವ ನೀರಿನ ವ್ಯವಸ್ಥೆ ಮಾಡುವ ಮೂಲಕ ಗಮನ ಸೆಳೆದರು.

ಈ ಸಂದರ್ಭದಲ್ಲಿ ಜಾಮೀಯಾ ಮಸೀದಿಯ ಅಧ್ಯಕ್ಷ ಡಾ.ಶಬ್ಬೀರ ನದಾಫ, ಮುಖಂಡರಾದ ಕಮಲಸಾಬ ಕೊರಬು, ಸಲೀಂ ಸಯ್ಯದ, ಇಸ್ಮಾಯಿಲ ಭಾಗವಾನ, ಚಾಂದಭಾಷಾ ಕೊರಬು, ಎಚ್. ಆರ್.ಬಾಗವಾನ, ಶಬ್ಬೀರ ನಾಯ್ಕೋಡಿ, ಅಲ್ಲಾಭಕ್ಷ ಕೊರಬು, ಅಸ್ಲಂ ಮುಜಾವರ, ಜಾಕೀರ ನದಾಫ, ರಫೀಕ ಹೊಕ್ರಾಣಿ, ಬಸೀರ ಹೊಕ್ರಾಣಿ, ಅಬ್ದುಲರಜಾಕ ಬಾಗವಾನ, ಈಸೂ– ಬಾಗವಾನ, ತೌಫೀಕ ಶಾಬಾದಿ, ರಫೀಕ ನಂದವಾಡಗಿ, ಕೆ.ಎ.ವಾಲೀಕಾರ, ಸೇರಿದಂತೆ ಅನೇಕರು ಇದ್ದರು.



## ನೂತನ ಸರ್ಕಾರಿ ಪದವಿಪೂರ್ವ ಕಾಲೇಜ ಉದ್ಘಾಟನೆ

**ರಾಯಬಾಗ:** ಉಪನ್ಯಾಸಕರು ವಿದ್ಯಾರ್ಥಿಗಳಲ್ಲಿ ಯಾವದೇ ಭೇದಭಾವ ಮಾಡದೇ ಎಲ್ಲ ವಿದ್ಯಾರ್ಥಿಗಳಿಗೆ ಒಳ್ಳೆಯ ಶಿಕ್ಷಣ ನೀಡಬೇಕೆಂದು ಶಾಸಕ ಡಿ.ಎಮ್.ಐಹೊಳೆ ಹೇಳಿದರು.

ಮಂಗಳವಾರ ತಾಲೂಕಿನ ಮೇಖಳಿ ಗ್ರಾಮದಲ್ಲಿ ನೂತನವಾಗಿ ಪ್ರಾರಂಭವಾಗಿರುವ ಆದರ್ಶ ಸರ್ಕಾರಿ ಪದವಿಪೂರ್ವ ಕಾಲೇಜನ್ನು ಉದ್ಘಾಟಿಸಿ ಮಾತನಾಡಿದ ಅವರು, ಮೇಖಳಿ ಗ್ರಾಮದಲ್ಲಿ ಸರ್ಕಾರಿ ಪ್ರೌಢ ಶಾಲೆ ಮತ್ತು ಆದರ್ಶ ವಿದ್ಯಾಲಯ (ಪ್ರೌಢ ಶಾಲೆ) ಇರುವುದರಿಂದ ಇಲ್ಲಿನ ವಿದ್ಯಾರ್ಥಿಗಳು ಪದವಿಪೂರ್ವ ಶಿಕ್ಷಣ ಪಡೆಯಲು ಅನುಕೂಲವಾಗಲು ಸರ್ಕಾರ ಆದರ್ಶ ವಿದ್ಯಾಲಯದಲ್ಲಿ ಪದವಿಪೂರ್ವ ಕಾಲೇಜ ಪ್ರಾರಂಭಿಸಿದ್ದು, ಇಲ್ಲಿನ ವಿದ್ಯಾರ್ಥಿಗಳು, ಮುಖ್ಯವಾಗಿ ಹೆಣ್ಣು ಮಕ್ಕಳು ಇದರ ಸದುಪಯೋಗವನ್ನು ಪಡೆದುಕೊಂಡು ಉನ್ನತ ಶಿಕ್ಷಣ ಹೊಂದಬೇಕೆಂದರು.ವಿದ್ಯಾರ್ಥಿಗಳು ಗುರುವಿನಲ್ಲಿ ಅಚಲ ವಿಶ್ವಾಸ ಇಟ್ಟು ಶ್ರಮ ವಹಿಸದರೆ, ಜೀವನದಲ್ಲಿ ಯಶಸ್ಸು ಪಡೆಯಲು ಸಾಧ್ಯ. ವಿದ್ಯಾರ್ಥಿಗಳು ನೈತಿಕ ಶಿಕ್ಷಣ ಅಳವಡಿಸಿಕೊಂಡು, ಒಳ್ಳೆಯ ಸಂಸ್ಕಾರ, ಸಂಸ್ಕೃತಿ ಹೊಂದಬೇಕು ಎಂದು ಕರೆ ನೀಡಿದರು. ಪ್ರಾಚಾರ್ಯ ಬಿ.ಎಮ್.ಹಾದಿಮನಿ, ಎಸ್.ಡಿ.ಎಮ್.ಸಿ ಅಧ್ಯಕ್ಷ ಸಂಜೀವ ನಾಯಿಕ, ಪಿಡಿಒ ನೂರಅಹ್ಮದ ಕುಡಚಿ, ಸದಾಶಿವ ಘೋರ್ಪಡೆ, ಸಂಜು ಒಡೆಯರ, ಪಿ.ಎ.ನಾಯಿಕ, ವಿವೇಕ ಹಟ್ಟಿಕರ, ಬಸವರಾಜ ಖಿಚಡೆ, ರಾಜು ನಾಯಿಕ, ಚಿದಾನಂದ ಚೌಗಲಾ, ಚಂದ್ರಕಾಂತ ಒಡೆಯರ, ಬಸವರಾಜ ನಾಯಿಕ, ಸುಶ್ಮಿತಾ ಕಾಂಬಳೆ ಹಾಗೂ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಇದ್ದರು.

## ಮಹಿಳೆಯರ ಸ್ವಾವಲಂಬಿ ಬದುಕಿಗೆ ನೆರವಾದ ಗ್ಯಾರಂಟಿಗಳು: ರಾಜು ಕಾಗೆ

**ಮೋಳೆ:** ಮತ ಕ್ಷೇತ್ರದಲ್ಲಿ ಮುಖ್ಯ ಸಂಪರ್ಕ ಹಾಗೂ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ಮುಖ್ಯ ಮಂತ್ರಿ ಸಿದ್ಧರಾಮಯ್ಯ ಹೆಚ್ಚಿನ ಅನುದಾನ ಬಿಡುಗಡೆ ಮಾಡಿದ್ದಾರೆ ಎಂದು ಕಾಗವಾಡ ಶಾಸಕ ರಾಜು ಕಾಗೆ ಹೇಳಿದರು.

ಅವರು 4 ಕೋಟಿ ರೂ ಅನುದಾನದಲ್ಲಿ ಮಂಗಾವತಿ–ಕಾಗವಾಡ ಹಾಗೂ ಜುಗೂಳ ಗ್ರಾಮದಿಂದ ಕಾಗವಾಡ ಹಳೆ ಮೀರಜ ರಸ್ತೆಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡುತ್ತಿದ್ದರು. ರಾಜ್ಯದ ಜನರಿಗೆ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನಗಳ ಮಧ್ಯೆಯೂ ಮುಖ್ಯಮಂತ್ರಿಗಳು ಕಾಗವಾಡ ಕ್ಷೇತ್ರದ ಅಭಿವೃದ್ಧಿಗೆ ಈಗಾಗಲೇ 25 ಕೋಟಿ ವಿಶೇಷ ಅನುದಾನ ಮಂಜೂರು ಮಾಡಿದ್ದು, ಈ ಅನುದಾನದಲ್ಲಿ 13 ಕೋಟಿಯಷ್ಟು ಅನುದಾನ ಗ್ರಾಮೀಣ ರಸ್ತೆ ಸುಧಾರಣೆಗೆ ಮತ್ತು 12 ಕೋಟಿಯಷ್ಟು ಅನುದಾನ ಸಮುದಾಯ ಭವನಗಳಿಗಾಗಿ ಹಂಚಿಕೆ ಮಾಡುವ ಮೂಲಕ ಕ್ಷೇತ್ರದ ಅಭಿವೃದ್ಧಿಗೆ ಆದ್ಯತೆ ನೀಡಿರುವೆ ಎಂದು ಹೇಳಿದರು. ಜುಗೂಳ ಹಾಗೂ ಮಂಗಾವತಿ ಗ್ರಾಮಸ್ಥರು ಮಹಾರಾಷ್ಟ್ರ ರಾಜ್ಯಕ್ಕೆ ಸಂಪರ್ಕಿಸುವ ಈ ಎರಡೂ ರಸ್ತೆಗಳ ಅಭಿವೃದ್ಧಿಗೆ ಮನವಿ ಮಾಡಿದ್ದರು ಹೀಗಾಗಿ ನಾಲ್ಕು ಕೋಟಿ ರೂ ಅನುದಾನದಲ್ಲಿ ಈ ಎರಡೂ ರಸ್ತೆ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿರುವೆ ಎಂದರು.

ಗ್ರಾಮೀಣ ಭಾಗದ ರಸ್ತೆ ಸುಧಾರಣೆಯಿಂದ ರೈತರಿಗೆ ಕೃಷಿ ಚಟುವಟಿಕೆಗಳಿಗೆ ಅನಕೂಲವಾಗಲಿದೆ ಮತ್ತು ರೈತರು ಸುಲಭವಾಗಿ ತಮ್ಮ ಕೃಷಿ



ಉತ್ಪನ್ನಗಳನ್ನು ನಗರ ಮತ್ತು ಪಟ್ಟಣ ಪ್ರದೇಶಗಳ ಮಾರುಕಟ್ಟೆಗೆ ಸಾಗಿಸಲು ಅನಕೂಲವಾಗುತ್ತದೆ ಎಂದ ಅವರು ಕಾಗವಾಡ ಮತಕ್ಷೇತ್ರದ ಅಂದಾಜು 50 ಗ್ರಾಮಗಳಲ್ಲಿ ಗ್ರಾಮಸ್ಥರ ಅನಕೂಲಕ್ಕೆ ತಕ್ಕಂತೆ ಸಮುದಾಯ ಭವನಗಳನ್ನು ನಿರ್ಮಿಸುವ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದರು. ಕಾಗವಾಡ ತಾಲೂಕಾ ಪಂಚಾಯತ್ ಇಒ ವೀರಣ್ಣಾ ವಾಲಿ, ಗ್ರಾಮ ಪಂಚಾಯತ್ ಅಧ್ಯಕ್ಷ ಕಾಕಾ ಪಾಟೀಲ, ಗುತ್ತಿಗೆದಾರ ರವಿ ಮಾಳಿ,ಮುಖಂಡರಾದ ಅಣ್ಣಾಸಾಬ ಪಾಟೀಲ,ಬಿ. ಆಯ್.ಪಾಟೀಲ,ರಾಜಗೌಡ ಪಾಟೀಲ,ಸುರೇಶ ಪಾಟೀಲ, ಉಮೇಶ ಪಾಟೀಲ, ತಾತ್ಯಾಸಾಬ ಪಾಟೀಲ,ಬಾಬಾಸಾಬ ಪಾಟೀಲ,ಸಂಜಯ ಮಿನಚೆ, ರವೀಂದ್ರ ವ್ಹಾಂಟೆ, ರಾಜು ಕಡೋಲಿ, ಗುರುಗೌಡ ಪಾಟೀಲ, ಗುತ್ತಿಗೆದಾರರಾದ ರವಿ ಮಾಳಿ, ಅಜಯ ಮಾಳಿ, ವಿಲಾಸ ಕಡೋಲಿ,ಕಲಗೌಡ ಪಾಟೀಲ, ಎಸ್,ಬಿ,ಕೋರ್ಬು, ಸುಭಾಷ ಪಾಟೀಲ, ಸೇರಿದಂತೆ ಜುಗೂಳ, ಮಂಗಾವತಿ ಗ್ರಾಮಸ್ಥರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.




# ವಿಶ್ವ ತೆಂಗು ದಿನಾಚರಣೆ

**ಮೂಡಲಗಿ:** ಅರಭಾವಿಯ ಕಿತ್ತೂರು ರಾಣಿ ಚನ್ನಮ್ಮ ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಮಂಗಳವಾರ ವಿಶ್ವ ತೆಂಗು ದಿನಾಚರಣೆಯನ್ನು ರಾಷ್ಟ್ರೀಯ ಸೇವಾ ಯೋಜನೆ ಘಟಕಗಳ ವತಿಯಿಂದ ಆಚರಿಸಲಾಯಿತು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಿರಾಚತೋ ಮಹಾವಿದ್ಯಾಲಯದ ಪ್ರಭಾರಿ ಡೀನ್ ಡಾ. ವಿಲಾಸ ಡಿ. ಗಸ್ತಿ ವಹಿಸಿದ್ದರು. ಸಹಾಯಕ ಪ್ರಾಧ್ಯಾಪಕ ಡಾ. ವೈ.ಸಿ. ವಿಶ್ವನಾಥ, ವಿದ್ಯಾರ್ಥಿನಿ ಭಾಗ್ಯಶ್ರೀ ಡಂಗಿ ವಿಶ್ವ ತೆಂಗು ದಿನದ ಪ್ರಯುಕ್ತ ತೆಂಗು ಕೃಷಿ ಬಗ್ಗೆ ಹಾಗೂ ತೆಂಗಿನ ವಿಶೇಷತೆಯನ್ನು ಹೇಳಿದರು.

ಈ ಕಾರ್ಯಕ್ರಮದಲ್ಲಿ ಮಹಾ ವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿಗಳಾದ ಡಾ. ಎಸ್.ಜಿ. ಪ್ರವೀಣಕುಮಾರ, ಡಾ. ಪ್ರತೀಕಾ, ಡಾ. ರಾಘವೇಂದ್ರ ಕೆ. ಎಸ್ ಹಾಗೂ ಮಹಾವಿದ್ಯಾಲಯದ ಶಿಕ್ಷಕ ಶಿಕ್ಷಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ವಿಜಯಪುರ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

# ಕ್ರೀಡಾ ಕ್ಷೇತ್ರದಲ್ಲಿ ಸಾಧಕರಾಗಿ ಜಿಲ್ಲೆಯ ಕೀರ್ತಿ ಹೆಚ್ಚಿಸಿ: ಬಬಲೇಶ್ವರ

**ವಿಜಯಪುರ:** ಕ್ರೀಡೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ಹೆಚ್ಚು ಹೆಚ್ಚು ಪ್ರಶಸ್ತಿ ಪಡೆದು ಜಿಲ್ಲೆಗೆ ಕೀರ್ತಿ ತರಬೇಕು ಎಂದು ಧಾರವಾಡದ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಬುಧವಾರ ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಜಿಲ್ಲಾಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು, ಪಠ್ಯದೊಂದಿಗೆ ಕ್ರೀಡೆಗಳಲ್ಲಿಯೂ ಭಾಗಿಯಾಗಿ ಸತತ ಪರಿಶ್ರಮದಿಂದ ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಬೇಕು ಎಂದು ಹೇಳಿದರು.

ಯುವಕರು ಆಟೋಟಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು.ಸದೃಢವಾದ ಆರೋಗ್ಯ ಹೊಂದಿ, ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಯುವಕರ ಪಾತ್ರ ಅತ್ಯಂತ ಹಿರಿದಾಗಿದೆ. ಮಕ್ಕಳು ತಮ್ಮನ್ನು ತಾವು ಕ್ರೀಡೆಯಲ್ಲಿ ತೊಡಗಿಕೊಳ್ಳಬೇಕು.



ಕ್ರೀಡಾ ಕ್ಷೇತ್ರಕ್ಕೆ ಸರ್ಕಾರ ಅನೇಕ ಸೌಲಭ್ಯ ಒದಗಿಸುವ ಮೂಲಕ ಕ್ರೀಡಾಪಟುಗಳಿಗೆ ಉತ್ತೇಜನ ನೀಡುತ್ತಿದ್ದು, ಇದರ ಸದುಪಯೋಗ ಪಡೆದುಕೊಂಡು ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರದ ಮಟ್ಟದಲ್ಲಿ ಆಸಕ್ತಿಯುತ ಕ್ರೀಡೆಯಲ್ಲಿ ಸತತ ಪ್ರಯತ್ನ ಹಾಗೂ ಕಠಿಣ ಅಭ್ಯಾಸ ರೂಢಿಸಿಕೊಂಡು ಕ್ರೀಡಾ ಸಾಧಕರಾಗಿ, ಕ್ರೀಡಾ ಸೆಲೆಬ್ರೆಟಿಗಳಾಗಬೇಕು ಎಂದು ಅವರು ಹೇಳಿದರು.

ಡಾ.ಜಾವೀದ ಜಮಾದಾರ ಅವರು ಮಾತನಾಡಿ, ಕ್ರೀಡಾ ಕ್ಷೇತ್ರದಲ್ಲಿ ಹೊಸ ಸಾಧನೆಯ ಬರೆದು ಮೈಲುಗಲ್ಲು ಸ್ಥಾಪಿಸುವ ಮೂಲಕ ಜಿಲ್ಲೆ, ರಾಜ್ಯದ ಕೀರ್ತಿಯನ್ನು ಹೆಚ್ಚಿಸಬೇಕು.

ಮಾನಸಿಕ ಹಾಗೂ ದೈಹಿಕ ಸದೃಢತೆಗಾಗಿ ಕ್ರೀಡೆಗಳಲ್ಲಿ ಭಾಗಿಯಾಗಿ, ಸೋಲು-ಗೆಲುವು ಮುಖ್ಯವಲ್ಲ, ಭಾಗವಹಿಸುವುದು ಮುಖ್ಯ ಎಂಬುದು ಮನವರಿಕೆ ಮಾಡಿಕೊಂಡು ಯುವಕರು ಕ್ರೀಡಾ ಮನೋಭಾವದಿಂದ ಕ್ರೀಡೆಯಲ್ಲಿ ತಮ್ಮನ್ನು ತೊಡಗಿಕೊಳ್ಳುವುದರ ಮೂಲಕ ಭವಿಷ್ಯ ಉಜ್ವಲಗೊಳಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಪಾಲಿಕೆಯ ಮೇಯರ್ ಮಡಿವಾಳಪ್ಪ ಸಿದ್ದರಾಮಪ್ಪ ಕರಡಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಮಹೇಶ ಪೋತದಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಂತೋಷ ಭೋವಿ, ಕ್ರೀಡಾಧಿಕಾರಿಗಳಾದ ರಾಜಶೇಖರ್ ದೈವಾಡಿ,ಕ್ರೀಡಾ ಇಲಾಖೆ ಕಚೇರಿಯ ಅಧೀಕ್ಷಕರಾದ ಪ್ರಿಯಂಕಾ ಜಿ, ಟಿ.ಪಿ. ಆಲೂರು, ಸಂಗೀತಾ ಮಠಪತಿ, ದೈಹಿಕ ಶಿಕ್ಷಕರು, ಕ್ರೀಡಾ ತರಬೇತಿದಾರರು, ಕ್ರೀಡಾಪಟುಗಳು ಹಾಗೂ ಕ್ರೀಡಾಸಕ್ತರು ಉಪಸ್ಥಿತರಿದ್ದರು.

# ಹೆಚ್ಚುವರಿ ಬಸ್‌ಗಾಗಿ ವಿದ್ಯಾರ್ಥಿಗಳಿಂದ ಒತ್ತಾಯ



**ರಬಕವಿ-ಬನಹಟ್ಟಿ:** ತಾಲ್ಲೂಕಿನ ಜಗದಾಳ ಮತ್ತು ನಾವಲಗಿ ಗ್ರಾಮದ ನೂರಾರು ವಿದ್ಯಾರ್ಥಿಗಳು ಸಮಯಕ್ಕೆ ಸರಿಯಾಗಿ ಬಸ್ ಗಳು ಸಂಚರಿಸದೆ ಇರುವುದರಿಂದ ಸಮಯಕ್ಕೆ ಸರಿಯಾಗಿ ಶಾಲಾ ಕಾಲೇಜುಗಳಿಗೆ ತಲುಪಲಾರದೆ ಪರದಾಡುವ ಪರಿಸ್ಥಿತಿ ನಿರ್ಮಾಣಗೊಂಡಿದೆ. ಆದ್ದರಿಂದ ಸಂಬಂಧಪಟ್ಟಅಧಿಕಾರಿಗಳು ಇತ್ತ ಗಮನ ನೀಡಿ ಗ್ರಾಮದಿಂದ ಬನಹಟ್ಟಿಗೆ ಬೆಳಗ್ಗೆ 7.30 ಗಂಟೆಗೆ ಹೆಚ್ಚವರಿ ಬಸ್ ಓಡಿಸಬೇಕೆಂದು ನಾವಲಗಿ ಗ್ರಾಮದ ಮುಖಂಡ ಮಲ್ಲಪ್ಪ ಗಣಿ ಮತ್ತು ವಿದ್ಯಾರ್ಥಿಗಳು ಬನಹಟ್ಟಿ ಬಸ್ ನಿಲ್ದಾಣದ ನಿಯಂತ್ರಣಾಧಿಕಾರಿಗೆ ಒತ್ತಾಯಿಸಿದರು.

ಬೆಳಗ್ಗೆ 7.30 ಕ್ಕೆ ಒಂದು ಬಸ್ ಬರುತ್ತಿದ್ದು,ಇದು ನಾವಲಗಿ ಗ್ರಾಮದಿಂದ ಪೂರ್ತಿಯಾಗಿ ತುಂಬಿ ಬರುತ್ತದೆ. ಈ ಬಸ್ ಜಗದಾಳ ಗ್ರಾಮದಲ್ಲಿ ನಿಲ್ಲುವುದೇ ಇಲ್ಲ. ಅದೇ ರೀತಿಯಾಗಿ ಬೆಳಗಿನ ಎಂಟು ಗಂಟೆಗೆ ಬರಬೇಕಾದ ಬಸ್ ಕೂಡಾ ಸರಿಯಾದ ಸಮಯಕ್ಕೆ ಬರುತ್ತಿಲ್ಲ. ಇದರಿಂದಾಗಿ ಜಗದಾಳ ಹಾಗೂ ಸುತ್ತ ಮುತ್ತಲಿನ ತೋಟದಲ್ಲಿ ವಾಸಿಸುವ ನೂರಾರು ವಿದ್ಯಾರ್ಥಿಗಳು ಸರಿಯಾದ ಸಮಯಕ್ಕೆ ಶಾಲಾ ಕಾಲೇಜುಗಳಿಗೆ ಹೋಗಲು ಸಾಧ್ಯವಾಗುತ್ತಿಲ್ಲ. ಬಹಳಷ್ಟು ವಿದ್ಯಾರ್ಥಿಗಳು ಟಂಟಂ ಗಳಿಗೆ ಹಣ ನೀಡಿ ಬರುತ್ತಾರೆ. ಆದ್ದರಿಂದ ಬೆಳಗ್ಗೆ ಏಳು ಗಂಟೆಗೆ ಮುಧೋಳ ಇಲ್ಲವೆ ಜಮಖಂಡಿ ಡಿಪೋದಿಂದ ಹೆಚ್ಚುವರಿ ಬಸ್ ಓಡಿಸಿದರೆ ಇಲ್ಲಿಯ ವಿದ್ಯಾರ್ಥಿಗಳಿಗೆ ಅನುಕೂಲವಾಗುವುದು ಎಂದು ಗ್ರಾಮದ ವಿದ್ಯಾರ್ಥಿಗಳಾದ ಎನ್.ಬಿ.ಬಿರಾದಾಪಾಟೀಲ, ಎಂ.ಬಿ.ಹೊಸೂರ, ಎಚ್.ಎಚ್.ಅಸ್ಕಿ, ಜೆ.ಡಿ.ಕಾಡದೇವರ, ಎಸ್.ಬಿ.ಹೊಸೂರ, ಎಸ್.ಎಸ್.ಉಳ್ಳಾಗಡ್ಡಿ, ಆರ್.ಆರ್.ಮೇಟಿ, ಡಿ.ಎಂ. ದಡ್ಡಿಮನಿ, ಡಿ.ಎಂ.ಹೊಸೂರ ಸೇರಿದಂತೆ ಅನೇಕ ವಿದ್ಯಾರ್ಥಿಗಳು ತಿಳಿಸಿದರು.

# ತಾಲೂಕಾ ಮಟ್ಟದ ಕ್ರೀಡಾಕೂಟ: ವಿದ್ಯಾರ್ಥಿಗಳ ಸಾಧನೆ

**ಮೂಡಲಗಿ:** ಸಮೀಪದ ಕಲ್ಲೋಳಿಯ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯಲ್ಲಿ ಜರುಗಿದ ಮೂಡಲಗಿ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ನಮ್ಮ ಎನ್.ಆರ್. ಪಾಟೀಲ ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯ ಕಲ್ಲೋಳಿಯ ಕ್ರೀಡಾಪಟುಗಳು ವಿವಿಧ ಕ್ರೀಡೆಗಳಲ್ಲಿ ಭಾಗವಹಿಸಿ ವಿಜೇತರಾಗಿ ನಮ್ಮ ಮಹಾವಿದ್ಯಾಲಯಕ್ಕೆ ಹೆಸರು ಮತ್ತು ಕೀರ್ತಿಯನ್ನು ತಂದಿದ್ದಾರೆ.

**ಮಹಿಳಾ ವಿಭಾಗ:** ದೀಪಾ ದ್ಯಾಗನಟ್ಟಿ –

1) ಉದ್ದಜಿಗಿತದಲ್ಲಿ ಪ್ರಥಮ. 2) ಟ್ರಿಪಲ್ ಜಂಪನಲ್ಲಿ ಪ್ರಥಮ. 3) 4 100 ಮೀ. ರೀಲೆಯಲ್ಲಿದ್ವಿತೀಯ 4) 100 ಮೀ. ಓಟದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.ಭಾರತಿ ಮುಂಡಿಗನಾಳ,3000 ಮೀ. ಓಟದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.ಗೀತಾ ಮೆಳವಂಕಿ, 1) 400 ಮೀ. ಓಟದಲ್ಲಿ ಪ್ರಥಮ. 2), 100 ಮೀ. ರೀಲೆಯಲ್ಲಿ ದ್ವಿತೀಯ. 3) 200 ಮೀ. ಓಟದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.ರೂಪಾ ಮರೆವ್ವಗೋಳ,800 ಮೀ. ಓಟದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.ದಿವ್ಯಾ ಕೋಳಿ –4 100 ಮೀ. ರೀಲೆಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ದೀಪಾ ಮರ್ದಿ–4 100 ಮೀ. ರೀಲೆಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ಪುಷ್ಪಾ ಬಡಿಗೇರ –ಟ್ರಿಪಲ್ ಜಂಪನಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.

**ಪುರುಷರ ವಿಭಾಗ:** ಮಾದೇಶ ಚಂದನವಾಲೆ – ಉದ್ದ ಜಿಗಿತದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.ಪ್ರಜ್ವಲ ಮರಸಿದ್ದಪ್ಪಗೋಳ–100 ಮೀ. ಓಟದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.ಬಾಳೇಶ ಬಾಣಶಿ–ನಡಿಗೆ ಸ್ಪರ್ಧೆಯಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.ಲಕ್ಕಣ್ಣ ಮಾಯನ್ನವರ–200 ಮೀ. ಓಟದಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ. **ಗುಂಪು ಕ್ರೀಡೆಗಳು :** ಬಾಲಕಿಯರ ವ್ಹಾಲಿಬಾಲ್ ಪಂದ್ಯಾವಳಿಯಲ್ಲಿ ನಮ್ಮ ಕಾಲೇಜಿನ ಬಾಲಕಿಯರ ತಂಡ ಪ್ರಥಮ ಸ್ಥಾನ ಪಡೆದುಕೊಂಡಿದೆ. ಬಾಲಕರ ಥ್ರೋಬಾಲ್ ಪಂದ್ಯಾವಳಿಯಲ್ಲಿ ನಮ್ಮ ಕಾಲೇಜಿನ ಬಾಲಕಯರ ತಂಡ ದ್ವಿತೀಯ ಸ್ಥಾನ ಪಡೆದುಕೊಂಡಿದೆ.



ಈ ಕ್ರೀಡಾ ಪಟುಗಳಿಗೆ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆ ಕಲ್ಲೋಳಿಯ ಅಧ್ಯಕ್ಷ ಬಸಗೌಡ ಶಿವಗೌಡ ಪಾಟೀಲ, ಉಪಾಧ್ಯಕ್ಷರು ಹಾಗೂ ಸಂಸ್ಥೆಯ ಎಲ್ಲ ಸರ್ವಸದಸ್ಯರು ಮತ್ತು ಕಾಲೇಜಿನ ಪ್ರಾಚಾರ್ಯ ವ್ಹಿ.ಬಿ.ಪಂಡಿತ, ದೈಹಿಕ ಉಪನ್ಯಾಸಕ ಮಹೇಶ ಕೆ. ಮಳವಾಡ ಹಾಗೂ ಎಲ್ಲ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.



## ವಿಮಾ ಸಪ್ತಾಹ: ಬೈಕ್ ರ‍್ಯಾಲಿ

**ರಬಕವಿ-ಬನಹಟ್ಟಿ:** ಅವಳಿ ನಗರದಲ್ಲಿ ಎಲ್‌ಐಸಿ ವಿಮಾ ಪ್ರತಿನಿಧಿಗಳಿಂದ 49ನೇ ವಿಮಾ ಸಪ್ತಾಹ ಕಾರ್ಯಕ್ರಮದ ಅಂಗವಾಗಿ ವಿಮಾ ಮಾಹಿತಿ ನೀಡುವ ಸಲುವಾಗಿ ಬೈಕ್ ರ‍್ಯಾಲಿ, ಬನಹಟ್ಟಿ ಸ್ಪಿನ್ನಿಂಗ ಮಿಲ್ಲದಿಂದ ರಬಕವಿಯ ಸೆಟ್ಲೈಟ್ ಆಫಿಸ್ ವರೆಗೆ ನಡೆಯಿತು.

# ಕೃಷ್ಣ ಗಜಾನನ ಮಹಾಮಂಡಳದಿಂದ ಅನ್ನಪ್ರಸಾದ ಕಾರ್ಯಕ್ರಮ

**ಬಸವನಬಾಗೇವಾಡಿ:** ಪಟ್ಟಣದ ಹಳೆ ಅಗ್ನಿಶಾಮಕ ಠಾಣೆಯ ಆವರಣದಲ್ಲಿ ಕೃಷ್ಣಾ ಗಜಾನನ ಮಹಾಮಂಡಳ ಪ್ರತಿಷ್ಠಾಪಿಸದ ಗಣಪತಿ ಮೂರ್ತಿ ಮಂಟಪದ ಮುಂಭಾಗ ಮಂಗಳವಾರ ಜನರಿಗೆ ಸಾಮೂಹಿಕ ಅನ್ನಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಅಪಾರ ಸಂಖ್ಯೆಯ ಜನರು ಪ್ರಸಾದ ಸ್ವೀಕರಿಸಿದರು. ಕೃಷ್ಣಾ ಗಜಾನನ ಮಹಾಮಂಡ ವು ಹಾಕಿದ ಫ್ಲೆಕ್ಸನಲ್ಲಿ ನಮ್ಮ ಮಂಡಳ ನಮ್ಮ ಕುಟುಂಬ, ರಕ್ತ ಸಂಬಂಧಕ್ಕಿಂತ ಸ್ನೇಹದ ನಂಟು ಶಾಶ್ವತ ಎಂಬ ಬರಹ ನೋಡುಗರನ್ನು ಗಮನ ಸೆಳೆಯಿತು. ಪ್ರಸಾದಕ್ಕಾಗಿ 5 ಕ್ವಿಂಟಾಲ್ ಸುರಾಮ,11 ಕ್ವಿಂಟಾಲ್ ಅನ್ನ, ಸಾಂಬಾರು ತಯಾರಿಸಲಾಗಿದೆ ಶ್ರೀಕಾಂತ ಕೊಟ್ರಶೆಟ್ಟಿ ಹೇಳಿದರು.

# ಥ್ರೋ ಬಾಲ್: ತಾಲೂಕು ಮಟ್ಟಕ್ಕೆ ಆಯ್ಕೆ



**ಮುದ್ದೇಬಿಹಾಳ:** ಸ್ಥಳೀಯ ಎಂ.ಜಿ.ವಿ. ಸಿ ಕಾಲೇಜಿನಲ್ಲಿ ನಡೆದ ಪ್ರೌಢಶಾಲೆಗಳ ಇಂಗಳಗೇರಿ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಸರಕಾರಿ ಆದರ್ಶ ವಿದ್ಯಾಲಯ ಬಿದರಕುಂದಿಯ ಬಾಲಕ ಮತ್ತು ಬಾಲಕಿಯರ ಥ್ರೋ ಬಾಲ್ ದಲ್ಲಿ ಪ್ರಥಮ ಬಂದು ತಾಲೂಕ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಸರ್ಕಾರಿ ಗ್ರೇಡ್ 1ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಮುದ್ದೇಬಿಹಾಳ ಘಟಕದ ಅಧ್ಯಕ್ಷರಾದ ಎ.ಸಿ.ಕೆರೂರ, ಉಪಾಧ್ಯಕ್ಷ ಎಸ್.ಎಸ್ .ಹಿರೇಮಠ , ಸಂಘಟನಾ ಕಾರ್ಯದರ್ಶಿ ಬಲಭೀಮ್ ಮಾದರ, ಪ್ರಧಾನ ಕಾರ್ಯದರ್ಶಿ ಎಂ.ಎಸ್.ನಾಟೇಕರ, ಎನ್. ಎಸ್.ಬಿರಾದಾರ, ಖಜಾಂಚಿ ಎಸ್. ಎಸ್ .ಅಂಗಡಿ, ಎಂ.ಬಿ.ಪಾಟೀಲ್, ಎನ್.ಡಿ .ಪಣದಕಟ್ಟಿ, ಬಸವರಾಜ್ ತಾಳಿಕೋಟೆ, ಎಂ .ಎಸ್ .ಪಾಟೀಲ್, ಮುತ್ತಣ್ಣ ಪಿ. .ಸವಿತಾ.ಪಾಟೀಲ, ಗೆದ್ದಂತ ಎಲ್ಲಾ ಕ್ರೀಡಾಪಟುಗಳು ಭಾಗವಹಿಸಿದ್ದರು.

# ಹಿಂದೂ ಹಬ್ಬಗಳ ಬಗ್ಗೆ ಅಪಚಾರ ಯತ್ನಾಳ ಬೇಸರ

**ಘಟಪ್ರಭಾ:** ಹಿಂದೂ ದೇವಸ್ಥಾನ, ಮಠಮಾನ್ಯಗಳ ಮೇಲೆ ಮತ್ತು ಹಿಂದೂ ಹಬ್ಬಗಳ ಬಗ್ಗೆ ನಿರಂತರ ಅಪಚಾರ ಹಾಗೂ ಅಪಪ್ರಚಾರ ನಡೆಯುತ್ತಲೆ ಇದೆ ಎಂದು ಶಾಸಕರಾದ ಬಸವರಾಜ ಪಾಟೀಲ ಯತ್ನಾಳ ಅವರು ಬೇಸರ ವ್ಯಕ್ತ ಪಡಿಸಿದರು.

ಅವರು ಘಟಪ್ರಭಾ ವೀರ ಸಾವರ್ಕರ ಯುವಕ ಸಂಘ ಹಾಗೂ ಶ್ರೀರಾಮ ಸೇನೆ ಘಟಪ್ರಭಾ ಇವರ ಸಂಯುಕ್ತ ಆಶ್ರಯಲ್ಲಿ ಘಟಪ್ರಭಾ ಪಟ್ಟಣದ ಕಾಯಿಪಲ್ಲೆ ಮಾರ್ಕೆಟ ಆವರಣದಲ್ಲಿ ಸೋಮವಾರ ಸಂಜೆ ಆಯೋಜಿಸಲಾದ ಬೃಹತ್ ಧರ್ಮ ಜಾಗೃತಿ ಸಭೆಯಲ್ಲಿ ಮಾತನಾಡಿದರು.

ನನ್ನನ್ನು ದಿಲ್ಲಿಯವರೆ ಬಂದು ಪಕ್ಷಕ್ಕೆ ಕರೆದುಕೊಂಡು ಹೊಗುತ್ತಾರಲ್ಲದೆ, 2028ರ ಚುನಾವಣೆಯಲ್ಲಿ ಪಕ್ಷ ಭರ್ಜರಿ ಗೆಲುವು ಸಾಧಿಸುವ ಮೂಲಕ ನಾನೇ ಮುಖ್ಯಮಂತ್ರಿ ಆಗುತ್ತೇನೆ ಎಂದು ಬಸವರಾಜ ಪಾಟೀಲ ಯತ್ನಾಳ ಆತ್ಮ ವಿಶ್ವಾಸದಿಂದ ಹೇಳಿದರು. ಈ ದೇಶಕ್ಕೆ ನರೇಂದ್ರ ಮೋದಿಯಂತಹ ಒಳ್ಳೆ ಪ್ರಧಾನಿ ಮಂತ್ರಿ ಸಿಕ್ಕಿರುವುದರಿಂದಲೇ ನಾವೂ ನೀವೆಲ್ಲಾ ಚನ್ನಾಗಿದ್ದೆವೆ ಎಂದು ಪ್ರಧಾನಿಯನ್ನು ಮುಕ್ತ ಕಂಠದಿಂದ ಹೊಗಳಿದರು. ಕರ್ನಾಟಕದಲ್ಲಿ ಹಿಂದುಗಳಿಗೆ ಒಂದು ಕಾನೂನು ಮತ್ತು ಮುಸ್ಲಿಮರಿಗೆ ಒಂದು ಕಾನೂನು ಯಾಕೆ ಎಂದರಲ್ಲದೇ, ಗಣೇಶ ನಮ್ಮ ಆರಾದ್ಯ ದೇವರು. ಈ ಹಬ್ಬ ಆಚರಿಸಲಿಕ್ಕೆ 20 ಕಟ್ಟಳೆಗಳನ್ನು ಸರ್ಕಾರ ಹಾಕುತ್ತದೆ. ಇದೆಲ್ಲ ಇನ್ನಂದೆ ನಡೆಯುವದಿಲ್ಲಾ ಎಂದರು. ನಮಗೆ ಸ್ವಾತ್ಯಂತ್ರ ಮಹಾತ್ಮಾ ಗಾಂಧಿ, ಜವಾಹರಲಾಲ ನೆಹರು ಸಿಕ್ಕಿದೆ ಎಂದು ಅಪಪ್ರಚಾರ ಮಾಡುತ್ತಿದ್ದಾರೆ. ಆದರೆ ನಮಗೆ ಸ್ವಾತ್ಯಂತ್ರ ಸಿಕ್ಕಿದ್ದು ನೇತಾಜಿ ಸುಭಾಶ ಚಂದ್ರ ಬೋಸ, ವೀರ ಸಾವರ್ಕರ, ಮದನಲಾಲ ಡಿಂಗ್ರಾ, ಲಾಲಾ ಲಜಪತರಾಯ, ಭಗತಸಿಂಗರಂತಹ ಮಹನಿಯರ ಪ್ರಾಣ ತ್ಯಾಗದಿಂದ ಎಂದರು.




ಸಮಾರಂಭಕ್ಕೂ ಪೂರ್ವದಲ್ಲಿ ಪಟ್ಟಣದ ಬೆಲ್ಲದ ಪೇಟೆಯಲ್ಲಿ ವೀರ ಸಾವರ್ಕರ ಯುವಕ ಸಂಘ ಹಾಗೂ ಶ್ರೀರಾಮ ಸೇನೆ ಕಾರ್ಯಕರ್ತರು ಪ್ರತಿಷ್ಠಾಪಿಸಿದ ಗಣೇಶನಿಗೆ ಪೂಜೆ ಸಲ್ಲಿಸಿದರು.

ಸಮಾರಂಭದ ವೇದಿಕೆಯ ಮೇಲೆ ಸ್ಥಳೀಯ ಕೆಂಪಯ್ಯಸ್ವಾಮಿ ಮಠದ ಪೀಠಾಧಿಕಾರಿಗಳಾದ ಡಾ.ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಹೊಸಮಠದ ವಿರುಪಾಕ್ಷ ಮಹಾಸ್ವಾಮಿಗಳು, ದರ್ಶನ ವಾಳಕೆ, ಶಿವರಾಜ ಅಂಬಾರಿ, ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಲಕ್ಷ್ಮಣ ಯಡ್ರಾವಿ ನಿರೂಪಿಸಿದರು.

# ಸೆ.6, 7ರಂದು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

**ಹಾವೇರಿ:** ಹಾವೇರಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಸೆ.6 ಮತ್ತು 7ರಂದು ಹಾವೇರಿ ನಗರದಲ್ಲಿ ಜರುಗಲಿದ್ದು, ಆನ್‌ಲೈನ್‌ನಲ್ಲಿ ನೋಂದಣಿಮಾಡಿದ ಕ್ರೀಡಾಪಟುಗಳಿಗೆ ಮಾತ್ರ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲು ಅವಕಾಶವಿರುತ್ತದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಶ್ರೀಮತಿ ಲತಾ ಅವರು ತಿಳಿಸಿದ್ದಾರೆ.

ತಾಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ವೈಯಕ್ತಿಕ ಕ್ರೀಡೆಯಲ್ಲಿ ಪ್ರಥಮ ಮತ್ತು ದ್ವಿತೀಯ ಹಾಗೂ ಗುಂಪು ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಪಡೆದ ವಿಜೇತರು ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಲು ಆನ್‌ಲೈನ್ https://dasaracmcup-2025.etrpindia.com/KA-sports ನಲ್ಲಿ ನೋಂದಣಿಮಾಡಿಕೊಳ್ಳಬೇಕು.

ಸೆ. 6 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಪುರುಷ ಹಾಗೂ ಮಹಿಳೆಯರಿಗೆ ಅಥ್ಲೆಟಿಕ್ಸ್, ವಾಲಿಬಾಲ್, ಬಾಸ್ಕೆಟ್ ಬಾಲ್, ಬಾಲ್ ಬ್ಯಾಡ್ಮಿಂಟನ್, ಥ್ರೋಬಾಲ್, ಬ್ಯಾಡ್ಮಿಂಟನ್, ಒಳಾಂಗಣದಲ್ಲಿ ಕ್ರೀಡಾಂಗಣದಲ್ಲಿ ಯೋಗಾ ಹಾಗೂ ಲಯನ್ಸ್ ಪ್ರೌಢಶಾಲೆಯಲ್ಲಿ ಪುರುಷರಿಗೆ ಫುಟ್‌ಬಾಲ್ ಕ್ರೀಡೆಗಳು ಜರುಗಲಿವೆ.ಸೆ.7 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಪುರುಷ ಹಾಗೂ ಮಹಿಳೆಯರಿಗೆ ಅಥ್ಲೆಟಿಕ್ಸ್, ಖೋಖೋ, ಕಬಡ್ಡಿ, ಹಾಕಿ, ಒಳಾಂಗಣದಲ್ಲಿ ಕುಸ್ತಿ ಹಾಗೂ ಟೇಬಲ್ ಟೆನ್ನಿಸ್ ಕ್ರೀಡೆಗಳು ಜರುಗಲಿವೆ. ಜಿಲ್ಲಾ ಕ್ರೀಡಾಂಗಣದಲ್ಲಿ ಟೆನ್ನಿಸ್ ಹಾಗೂ ನೆಟ್‌ಬಾಲ್ ಹಾಗೂ ರಾಣೇಬೆನ್ನೂರ ತಾಲೂಕು ಕ್ರೀಡಾಂಗಣದಲ್ಲಿ ಈಜು ಕ್ರೀಡೆಗಳ ಆಯ್ಕೆ ಜರುಗಲಿದೆ.

# ಅಮೂಲಾಗ್ರ ಬದಲಾವಣೆಗಾಗಿ ಶರಣರ ಕ್ರಾಂತಿ: ಸಾಹಿತಿ ರಾಜೂರ

**ಬಸವನಬಾಗೇವಾಡಿ:** 12 ನೇ ಶತಮಾನದಲ್ಲಿ ಜರುಗಿದ ಶರಣರ ಕ್ರಾಂತಿ ಕೇವಲ ಧಾರ್ಮಿಕ, ಸಮಾಜೋದ್ಧಾರ ಕ್ರಾಂತಿಯಾಗದೇ ಸಾಂಸ್ಕೃತಿಕ ಕ್ರಾಂತಿಯಾಗಿದೆ. ಶರಣರು ಸಮಾಜದಲ್ಲಿ ಅಮೂಲಾಗ್ರವಾಗಿ ಬದಲಾವಣೆ ತರಲು ಕ್ರಾಂತಿ ಮಾಡಿದರು ಎಂದು ಸಾಹಿತಿ ವೀರಣ್ಣ ರಾಜೂರ ಹೇಳಿದರು.

ಪಟ್ಟಣದ ಬಸವೇಶ್ವರ ಸಿಬಿಎಸ್‌ಇ ಶಾಲಾ ಆವರಣದಲ್ಲಿರುವ ನಂದೀಶ್ವರ ರಂಗಮಂದಿರದ ವಚನ ಪಿತಾಮಹ ಫ.ಗು.ಹಳಕಟ್ಟಿ ವೇದಿಕೆಯಲ್ಲಿ ಲಿಂಗಾಯತ ಮಠಾಧಿಪತಿಗಳ ಒಕ್ಕೂಟವು ಸೋಮವಾರ ಸಂಜೆ ಬಸವ ಸಂಸ್ಕೃತಿ ಅಭಿಯಾನ ಉದ್ಘಾಟನೆಯಂಗವಾಗಿ ಹಮ್ಮಿಕೊಂಡಿದ್ದ ಬಹಿರಂಗ ಸಮಾರಂಭದಲ್ಲಿ ಮಾತು ವಚನವಾಗಬೇಕು ಕುರಿತು ಉಪನ್ಯಾಸ ನೀಡಿ ಮಾತನಾಡಿದ ಅವರು, ಶರಣರು ಮುಕ್ತ ರೀತಿಯಲ್ಲಿ ವಚನಗಳನ್ನು ಬರೆಯುವ ಮೂಲಕ ಸಮಾಜವನ್ನು ತಿದ್ದುವ ಕಾರ್ಯ ಮಾಡಿದರು. ವಚನಗಳು ಯಾವುದೇ ವ್ಯಾಕರಣ, ಛಂದಸ್ಸು, ಅಲಂಕಾರಿಕ, ಪ್ರಾಸ, ಕವಿ ಸಮಯವಿಲ್ಲದೇ ಮುಕ್ತವಾಗಿ ರಚನೆಯಾಗಿವೆ. ವಚನಗಳಲ್ಲಿ ಇಡೀ ಬದುಕಿನ ವಸ್ತುವನ್ನು ಕಾಣಬಹುದು.ವಚನಗಳು ಸಕಲ ಜೀವಾತ್ಮರಿಗೆ ಲೇಸು ಬಯಸುವದು, ಮೈಲಿಗೆ ಕಳೆಯುವದು, ಮೂಢನಂಬಿಕೆ, ಅಂಧಶ್ರದ್ಧೆ ಕಳೆಯುವ ಆಶಯ ಹೊಂದಿವೆ ಎಂದರು.

ನಮ್ಮ ಮಾತುಗಳು ಸೂತಕದಿಂದ ಕೂಡಿವೆ. ಶರಣರು ನಡೆದಂತೆ ನುಡಿದು ತೋರಿಸಿದರು. ಮಾತಿನಲ್ಲಿ ವ್ಯವಹಾರಿಕ ಮಾತು, ಅಲಂಕಾರಿಕ ಮಾತು ಮತ್ತು ಅನುಭಾವಿಕ ಮಾತು ಎಂದು ಮೂರು ರೀತಿಯನ್ನು ನೋಡುತ್ತೇವೆ. ವ್ಯವಹಾರಿಕ ಮ ಾತು ಸಾಮಾನ್ಯರು ಆಡಿದರೆ, ಅಲಂಕಾರಿಕ ಮಾತುಗಳನ್ನು ಕವಿಗಳು ಆಡುತ್ತಾರೆ. ಅನುಭಾವಿಕ ಮಾತುಗಳನ್ನು ಶರಣರು ಆಡುತ್ತಾರೆ. ಶರಣರು ತಮ್ಮ ಮಾತುಗಳಿಂದ ಸಮಾಜವನ್ನು ತಿದ್ದಲು ಪ್ರಯತ್ನಿಸಿದ್ದನ್ನು ನೋಡುತ್ತೇವೆ ಎಂದರು.




ಲಿಂ. ಎಂ.ಎಂ. ಕಲಬುರ್ಗಿಯವರು ಲಿಂಗಾಯತ ಧರ್ಮಕ್ಕೆ ಐದು ಸೂತ್ರಗಳನ್ನು ಹೇಳಿದ್ದನ್ನು ಸ್ಮರಿಸಿಕೊಂಡು ಲಿಂಗಾಯತ ಧರ್ಮದಲ್ಲಿ ಶುದ್ಧೀಕರಣ, ಏಕೀಕರಣ, ನವೀಕರಣ, ಜಾಗತೀಕರಣ, ಸಬಲೀಕರಣವಾಗಬೇಕು ಎಂದು ಹೇಳಿದ್ದರು ಎಂದ ಅವರು ಅವರು ಹೇಳಿದಂತೆ ಇದನ್ನು ಪಾಲಿಸುವ ಮೂಲಕ ಲಿಂಗಾಯತ ಧರ್ಮವನ್ನು ಕಟ್ಟಬೇಕಿದೆ.ಸಾತ್ವಿಕ ಬದುಕು, ಸದೃಢ ರಾಷ್ಟ್ರ ಬಸವ ತತ್ವಗಳಿಂದ ಉಳಿಯಲು ಮಾತ್ರ ಸಾಧ್ಯವಿದೆ ಎಂದರು.

ಶಿವಮೊಗ್ಗದ ಡಾ.ಮಲ್ಲಿಕಾರ್ಜುನ ಮುರುಘರಾಜೇಂದ್ರ ಸ್ವಾಮೀಜಿ, ಚಿತ್ರದುರ್ಗದ ಮಾದಾರ ಚೆನ್ನಯ್ಯ ಸ್ವಾಮೀಜಿ, ಕೂಡಲಸಂಗಮದ ಬಸವಜಯಮೃತ್ಯುಂಜಯ, ಭೋವಿಗುರುಪೀಠದ ಇಮ್ಮಡಿ ಸಿದ್ದರಾಮ ಸ್ವಾಮೀಜಿ, ಸಚಿವರಾದ ಶಿವಾನಂದ ಪಾಟೀಲ, ಎಂ.ಬಿ.ಪಾಟೀಲ, ಮಾತನಾಡಿದರು.

ವೇದಿಕೆಯಲ್ಲಿ ಗದಗದ ಡಾ.ತೋಂಟದ ಸಿದ್ದರಾಮ ಸ್ವಾಮೀಜಿ, ಸಾಣೇಹಳ್ಳಿಯ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ,ಬಾಲ್ಕಿಯ ಡಾ.ಬಸವಲಿಂಗ ಪಟ್ಟದ್ದೇವರು, ಯರನಾಳದ ಸಂಗನಬಸವ ಸ್ವಾಮೀಜಿ, ತಂಗಡಗಿಯ ಅನ್ನದಾನ ಭಾರತಿ ಸ್ವಾಮೀಜಿ, ಹುಲಸೂರಿನ ಶಿವಾನಂದ ಸ್ವಾಮೀಜಿ, ವಿಜಯಪುರದ ಬಸವಲಿಂಗ ಸ್ವಾಮೀಜಿ, ಸೇರಿದಂತೆ ಅನೇಕ ಶ್ರೀಗಳು, ಶಾಸಕ ರಾಜುಗೌಡ ಪಾಟೀಲ, ಈರಣ್ಣ ಪಟ್ಟಣಶೆಟ್ಟಿ, ಹಾಸಿಂಪೀರ ವಾಲೀಕಾರ, ಜಂಗುನಾಥ ಕಂಚ್ಯಾಣಿ, ಇತರರು ಇದ್ದರು. ಪ್ರಭುಚನ್ನಬಸವ ಸ್ವಾಮೀಜಿ ನಿರೂಪಿಸಿದರು.

# ಹೊಳೆ ಆಲೂರಿನಲ್ಲಿ ಸ್ವಚ್ಚತಾ ಅಭಿಯಾನಕ್ಕೆ ಚಾಲನೆ

## ಸ್ವಚ್ಚತಾ ಅಭಿಯಾನವು ಕೇವಲ ಸರ್ಕಾರದ ಯೋಜನೆಯಲ್ಲ, ಪ್ರತಿಯೊಬ್ಬರ ವೈಯಕ್ತಿಕ ಜವಾಬ್ದಾರಿ: ಚಂದ್ರಶೇಖರ ಬಿ. ಕಂದಕೂರ

**ರೋಣ:** ಸ್ವಚ್ಚ ಭಾರತ ಮಿಷನ್ ನಡಿ ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಚತೆಯ ಅರಿವು ಮೂಡಿಸುವ ಅಭಿಯಾನಕ್ಕೆ ರೋಣ ತಾಲೂಕಿನಲ್ಲಿ ಮತ್ತಷ್ಟು ವೇಗ ಸಿಕ್ಕಿದೆ. ಈ ಹಿನ್ನೆಲೆಯಲ್ಲಿ ರೋಣ ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ. ಕಂದಕೂರ ಅವರು ಹೊಳೆ ಆಲೂರು ಗ್ರಾಮಕ್ಕೆ ಭೇಟಿ ನೀಡಿ ಸ್ವಚ್ಚತಾ ಅಭಿಯಾನದಲ್ಲಿ ಭಾಗವಹಿಸಿ ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸಿದರು.

ಹೊಳೆ ಆಲೂರ ಗ್ರಾಮದಲ್ಲಿನ ಅಂಗಡಿ ಮುಂಗಟ್ಟುಗಳಿಗೆ ಭೇಟಿ ನೀಡಿ ಸ್ವಚ್ಚತೆಯನ್ನು ಪರಿಶೀಲಿಸಿದರು. ಸ್ವಚ್ಚತಾ ವಾಹನಗಳ ಮೂಲಕ ಕಸದ ಸರಿಯಾದ ಕಸ ವಿಲೇವಾರಿ ವಿಧಾನ, ಕುಡಿಯುವ ನೀರಿನ ಗುಣಮಟ್ಟದ ಕಾಪಾಡುವಿಕೆ ಹಾಗೂ ಪ್ಲಾಸ್ಟಿಕ್ ನಿಷೇಧದ ಬಗ್ಗೆ ವ್ಯಾಪಾರಿಗಳು ಮತ್ತು ಗ್ರಾಹಕರಿಗೆ ಅರಿವು ನೀಡಿದರು. "ಸ್ವಚ್ಚತೆಯು ನಮ್ಮ ಜವಾಬ್ದಾರಿ ಮಾತ್ರವಲ್ಲ, ಅದು ನಮ್ಮ ಆರೋಗ್ಯ



ಮತ್ತು ಪರಿಸರದ ರಕ್ಷಣೆಗೆ ಮೂಲಭೂತ" ಎಂದು ಒತ್ತಿ ಹೇಳಿದ ಅವರು ಪ್ಲಾಸ್ಟಿಕ್ ಬದಲಿಗೆ ಕಾಗದದ ಚೀಲಗಳು ಹಾಗೂ ಬಟ್ಟೆಯ ಚೀಲಗಳ ಬಳಕೆಯನ್ನು ಉತ್ತೇಜಿಸುವಂತೆ ಗ್ರಾಮಸ್ಥರಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರು, ಅಂಗಡಿ ಮಾಲೀಕರು ಹಾಗೂ ಪಂಚಾಯತಿ ಸಿಬ್ಬಂದಿಗಳು ಸಕ್ರಿಯವಾಗಿ ಪಾಲ್ಗೊಂಡು ಕಸ ವಿಲೇವಾರಿಯ ವಿಧಾನಗಳನ್ನು ಪ್ರಾಯೋಗಿಕವಾಗಿ ಕಲಿತುಕೊಂಡರು. ಅಧಿಕಾರಿಗಳು ಕುಡಿಯುವ ನೀರಿನ ಮಾದರಿ ಪರೀಕ್ಷೆ ಹಾಗೂ ಶುದ್ಧತೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ವಿವರಿಸಿದರು. ಸ್ವಚ್ಚ ಭಾರತ ಮಿಷನ್‌ನಡಿ ಹೊಳೆ ಆಲೂರನ್ನು ಮಾದರಿ ಗ್ರಾಮವನ್ನಾಗಿ ರೂಪಿಸುವ ಸಂಕಲ್ಪವನ್ನು ವ್ಯಕ್ತಪಡಿಸಿದರು.

ಗ್ರಾಮ ಪಂಚಾಯತಿ ಕಚೇರಿಗೆ ಭೇಟಿ ನೀಡಿದ ಅವರು ಸಾಮಾಜಿಕ ಲೆಕ್ಕ ಪರಿಶೋಧನೆ, ಸ್ಥಳೀಯ ಲೆಕ್ಕ ಪರಿಶೋಧನೆ, ಮನರೇಗಾ ಯೋಜನೆಯಡಿ ಉದ್ಯೋಗ ಸೃಷ್ಟಿ, ಸಿಬ್ಬಂದಿಗಳ ಹಾಜರಾತಿ ಸೇರಿದಂತೆ ವಿವಿಧ ವಿಷಯಗಳ ಪ್ರಗತಿಯನ್ನು ಪರಿಶೀಲಿಸಿದರು. ಈ ಮೂಲಕ ಪಂಚಾಯತಿ ಕಾರ್ಯವೈಖರಿಯನ್ನು ಪಾರದರ್ಶಕಗೊಳಿಸುವ ಜೊತೆಗೆ ಸ್ವಚ್ಚತಾ ಯೋಜನೆಗಳಲ್ಲಿ ಇರುವ ಲೋಪಗಳನ್ನು ಸರಿಪಡಿಸಲು ಸೂಚಿಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಬಸವರಾಜ್ ಗಿರಿತಮ್ಮನ್ನವರ ಸೇರಿದಂತೆ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

# ಬಾಲಕ ಕಾಣೆ: ಅಪಹರಣ ಶಂಕೆ

**ಕೊಪ್ಪಳ:** ಕೊಪ್ಪಳ ನಗರದ ಮಿಟ್ಟಿಕೇರಿ ಓಣಿಯ ನಿವಾಸಿ ನಾಲ್ಕು ವರ್ಷದ ಮಹ್ಮದ್ ಅರ್ಮಾನ್ ತಂದೆ ಸಾಧಿಕಅಲಿ ಅಳವಂಡಿ ಎಂಬ ಬಾಲಕ ಸೆಪ್ಟೆಂಬರ್ 2ರ ಮಂಗಳವಾರದಂದು ಕಾಣೆಯಾಗಿದ್ದು, ಬಾಲಕನನ್ನು ಅಪಹರಣ ಮಾಡಿರುವ ಸಾಧ್ಯತೆಗಳಿದ್ದು, ಬಾಲಕನ ಪತ್ತೆಗೆ ಸಹಕರಿಸುವಂತೆ ಕೊಪ್ಪಳ ಮಹಿಳಾ ಪೊಲೀಸ್ ಠಾಣೆಯ ಅಧಿಕಾರಿಗಳು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ. ಮಹ್ಮದ್ ಅರ್ಮಾನ್ ಎಂಬ ಬಾಲಕ ಸೆ. 2ರಂದು ಮಧ್ಯಾಹ್ನ 1 ಗಂಟೆ ಸುಮಾರಿಗೆ ಮನೆಯ ಹೊರಗಡೆ ಆಟವಾಡುತ್ತಿದ್ದಾಗ ಕಾಣೆಯಾಗಿದ್ದು, ಪಾಲಕರು ತಮ್ಮ ಓಣಿ ಮತ್ತು ತಮ್ಮ ಸಂಬಂಧಿಕರು ವಾಸವಿರುವ ಏರಿಯಾಗಳಲ್ಲಿ ಹುಡುಕಿದ್ದರೂ ಸಹ ಬಾಲಕನು ಸಿಕ್ಕಿರುವುದಿಲ್ಲ. ಬಾಲಕನ್ನು ಯಾರೋ ಅಪಹರಣ ಮಾಡಿಕೊಂಡು ಹೋಗಿರಬಹುದು ಎಂದು ಕಾಣೆಯಾದ ಬಾಲಕನ ಪೋಷಕರು ಕೊಪ್ಪಳ ಮಹಿಳಾ ಪೊಲೀಸ್ ಠಾಣೆಗೆ ಹಾಜರಾಗಿ ದೂರು ನೀಡಿದ್ದು, ಠಾಣಾ ಗುನ್ನೆ ನಂ: 58/2025 ಕಲಂ: 137(2) ಬಿ.ಎನ್.ಎಸ್ ನೇದ್ದರಲ್ಲಿ ಪ್ರಕರಣ ದಾಖಲಾಗಿದೆ.*ಕಾಣೆಯಾದ ಬಾಲಕನ ಚಹರೆ ವಿವರ:* ಮಹ್ಮದ್ ಅರ್ಮಾನ್ ತಂದೆ ಸಾಧಿಕಅಲಿ ಅಳವಂಡಿ ವಯಸ್ಸು 4 ವರ್ಷ, ಎತ್ತರ 2.5 ಫೀಟ್, ಬಿಳಿ ಬಣ್ಣ ಸಾಧಾರಣ ಮೈಕಟ್ಟು ಹೊಂದಿದ್ದು, ಕಾಣೆಯಾದಾಗ ಸಾದಾ ಹಸಿರು ಬಣ್ಣದ ಟಿ ಶರ್ಟ್ ಮತ್ತು ಚಾಕಲೇಟ್ ಕಲರ್ ಪ್ಯಾಂಟ್ ಧರಿಸಿದ್ದನು. ಕಣೆಯಾದ ಬಾಲಕನು ಎಲ್ಲಿಯಾದರು ಕಂಡುಬಂದಲ್ಲಿ ಅಥವಾ ಈ ಬಗ್ಗೆ ಯಾರಿಗಾದರೂ ಮಾಹಿತಿ ದೊರೆತಲ್ಲಿ ಕೊಪ್ಪಳ ಮಹಿಳಾ ಪೊಲೀಸ್ ಠಾಣೆಯ ದೂ.ಸಂ: 08539–221233, ಪಿ.ಐ ಮೊ.ಸಂ: 8861116999, ತನಿಖಾಧಿಕಾರಿ ಶಶಿಕಲಾ ಮೊ.ಸಂ: 8217391502 ಹಾಗೂ ಕೊಪ್ಪಳ ಪೊಲೀಸ್ ಕಂಟ್ರೋಲ್ ರೂಂ ಮೊ.ಸಂ: 9480803700 ಗೆ ಸಂಪರ್ಕಿಸಿ ಮಾಹಿತಿ ನೀಡುವಂತೆ ಪ್ರಕಟಣೆ ತಿಳಿಸಿದೆ.

# ಜನತಾ ಸಹಕಾರ ಬ್ಯಾಂಕ: 1.19 ರೂ. ಕೋಟಿ ಲಾಭ

**ಹಾರೂಗೇರಿ.** ಗ್ರಾಹಕರ ಹಾಗೂ ಷೇರುದಾರರ ಪ್ರೀತಿ ಹಾಗೂ ವಿಶ್ವಾಸ ಜನತಾ ಸಹಕಾರ ಬ್ಯಾಂಕ ಮೇಲೆ ನೀವು ಇಟ್ಟಿರುವ ನಂಬಿಕೆಗೆ ಶಿರಸಾ ವಹಿಸಿ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗ ಪ್ರಾಮಾಣಿಕ ಕೆಲಸ ಮಾಡಿದ ಪ್ರಯುಕ್ತ ಬ್ಯಾಂಕು 2024–25 ನೇ ಸಾಲಿಗೆ ನಿವ್ವಳ ರೂ. 1.19 ಕೋಟಿ ರೂಪಾಯಿಗಳ ಲಾಭ ಗಳಿಸಿ ಅಪಾರ ಸಾಧನೆ ಮಾಡಿದೆ ಎಂದು ಬ್ಯಾಂಕಿನ ಅಧ್ಯಕ್ಷರಾದ ರಾಜಶೇಖರ ಪಾಟೀಲ ಹೇಳಿದರು.

ಅವರು ಪಟ್ಟಣದ ಜನತಾ ಸಹಕಾರಿ ಬ್ಯಾಂಕಿನ ಮುಖ್ಯ ಶಾಖೆಯ ಸಭಾಭವನದಲ್ಲಿ ಆಯೋಜಿಸಲಾಗಿದ್ದ ಸನ್ 2024–25 ನೇ ಸಾಲಿನ 48 ನೇ ಸಾಲಿನ ವಾರ್ಷಿಕ ಸರ್ವ ಸದಸ್ಯರ ಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ ಗ್ರಾಹಕರಿಗೆ, ವ್ಯಾಪಾರಸ್ಥರಿಗೆ, ರೈತರಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡಿ ಅವರ ಬೆಳವಣಿಗೆ ಬ್ಯಾಂಕು ಸದಾ ಬದ್ಧವಾಗಿದ್ದು , ಸದಸ್ಯರ ಸೇವೆಗೆ ಬ್ಯಾಂಕ ಸತತ ಉತ್ತಮ ಕಾರ್ಯ ಮಾಡುತ್ತಿದೆ ಎಂದರು.

ವೃತ್ತಿ ನಿರ್ದೇಶಕರಾದ ಸಿ ಡಿ ಮುಂಗರವಾಡಿ ಮಾತನಾಡಿ ಭಾರತ ಸತತವಾಗಿ ಆರ್ಥಿಕವಾಗಿ ಬೆಳವಣಿಗೆ ಹೊಂದುತ್ತಿದ್ದು, ಬಲಿಷ್ಠ 4 ನೇ ಆರ್ಥಿಕವಾಗಿ ಸ್ಥಾನವನ್ನು ಹೊಂದಿದೆ. ತಿಂಗಳಿಗೆ 2 ಲಕ್ಷ ರೂ ಕೋಟಿ ಮೀರಿದ್ದು 2027 ಕ್ಕೆ 3 ನೇ ಬಲಿಷ್ಠ ಆರ್ಥಿಕ ಸ್ಥಾನ ಪಡೆಯಲಿದೆ. ದೇಶದ ಅಭಿವೃದ್ಧಿಗೆ ಸಹಕಾರಿ ಸಂಘಗಳ ಸೇವೆ ಅನನ್ಯವಾಗಿದೆ ಎಂದರು.




ಆಡಳಿತ ವ್ಯವಸ್ಥಾಪನ ಸದಸ್ಯ ಡಾ. ಆರ್ ಸಿ ಗುಡಸಿ ಮಾತನಾಡಿ ಠೇವಣಿ ಇಟ್ಟ ಗ್ರಾಹಕರು ಅಂಜುವ ಪ್ರಶ್ನೆ ಇಲ್ಲಾ ಏಕೆಂದರೆ ಹೆಚ್ಚಿನ ಠೇವಣಿಯನ್ನು ಆರ್ ಬಿ ಐ ನಲ್ಲಿ ಇಡಲಾಗಿದೆ ಎಂದರು.ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕರಾದ ಎಸ್ ಎಸ್ ಅಮರಶೆಟ್ಟಿ ವರದಿ ವಾಚನ ಮಾಡಿ ಮಾತನಾಡಿ ಪ್ರಸಕ್ತ ವರ್ಷ 4747 ಸದಸ್ಯರು ಹೊಂದಿದ್ದು, ರೂ. 211.61 ಕೋಟಿ ದುಡಿಯುವ ಬಂಡವಾಳ, ರೂ. 184.27ಕೋಟಿ ಠೇವಣಿ, ರೂ. 109 ಕೋಟಿ ಗಳ ಸಾಲ ನೀಡಿದ್ದು, 2024–25 ನೇ ಸಾಲಿಗೆ 1.19 ಕೋಟಿ ರೂಪಾಯಿಗಳ ಲಾಭ ಗಳಿಸಿದೆ ಎಂದರು. ಕಾರ್ಯಕ್ರಮದಲ್ಲಿ ಉಪಾಧ್ಯಕ್ಷರಾದ ತಮಣ್ಣಪ್ಪ ತೇಲಿ, ಆಡಳಿತ ಮಂಡಳಿ ಸದಸ್ಯರಾದ ಪ್ರಕಾಶ ಕಶೆಟ್ಟಿ, ಸಂಜೀವ ಅವಕ್ಕನವರ, ಜಯಶ್ರೀ ಪಾಟೀಲ, ಶಂಕರ ಮಾನಶೆಟ್ಟಿ, ಪ್ರಭುಲಿಂಗ ಪಾಲಭಾವಿ, ಭೀಮಗೊಂಡ ಕರ್ಣವಾಡಿ, ಹಣಮಂತ ಮಡಿವಾಳ, ರಾಮಪ್ಪ ನಾಯಕ, ಬಸಗೌಡ ಪಾಟೀಲ, ಎಮ್ ಬಿ ಮಠಪತಿ, ಎಸ್ ಟಿ ತೇಲಿ,ಹಾರೂಗೇರಿ, ರಾಯಭಾಗ, ಯುಗಾರಖುರ್ದ, ಅಥಣಿ ಶಾಖೆಗಳ ಸದಸ್ಯರು, ಸಲಹಾ ಸಮಿತಿ ಸದಸ್ಯರು, ಸಿಬ್ಬಂದಿ ಉಪಸ್ಥಿತರಿದ್ದರು. ಆನಂದ ಗುರವ ಸ್ವಾಗತಿಸಿದರು, ಸುನೀಲ ಕಬ್ಬುರ ನಿರೂಪಿಸಿದರು. ಇದೆ ಸಂದರ್ಭದಲ್ಲಿ ಜಿಲ್ಲಾ 17 ನೇ ಕನ್ನಡ ಸಾಹಿತ್ಯ ಪರಿಷತ್ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ಹಿರಿಯ ಸಾಹಿತಿ ಡಾ. ವಿ ಎಸ್ ಮಾಳಿ, ಸೇವಾ ನಿವೃತ್ತಿ ಪಡೆದ ಎಸ್ ಕೆ ಕಂಬಾರ, ಇ ಎಚ್ ತಕ್ಕಳಕಿ ಅವರನ್ನು ಸತ್ಕರಸಲಾಯಿತು.

# ಹಬ್ಬಗಳ ಆಚರಣೆಯಿಂದ ಸಂಘಟನೆಯಲ್ಲಿ ಶಕ್ತಿ ಬರುತ್ತದೆ: ಪವಾರ

**ಗದಗ:** ನಾಡಿನ ಹಬ್ಬಗಳ ಆಚರಣೆ ಮಾಡುವ ಮೂಲಕ ಎಲ್ಲರ ಮನಸ್ಸು ಒಂದುಗೂಡಿಸುತ್ತವೆ ಅಲ್ಲದೆ, ಎಸ್.ಎಸ್.ಕೆ ಸಮಾಜದ ಸಂಘಟನೆಗೆ ಶಕ್ತಿ ತುಂಬುತ್ತದೆ ಎಂದು ಸರಾಫ್ ಉದ್ಯಮಿ ಹಾಗೂ ಎಸ್.ಎಸ್.ಕೆ. ತರುಣ ಸಂಘದ 2025–26 ನೇ ಸಾಲಿನ ಶ್ರೀ ಗಜಾನನೋತ್ಸವ ಸಮಿತಿಯ ಚೇರಮನ್‌ರಾದ ಮೋಹನಸಾ ಪವಾರ ಅವರು ಹೇಳಿದರು.



ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಸಹಸ್ರಾರ್ಜುನ ಸಮುದಾಯ ಭವನದ ಲಕ್ಷ್ಮಣಸಾ ಸಭಾಗೃಹದಲ್ಲಿ 2025–26 ನೇ ಸಾಲಿನ ಶ್ರೀ ಗಜಾನನೋತ್ಸವ ಸಮಿತಿಯಿಂದ ಹಮ್ಮಿಕೊಂಡ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಎಸ್.ಎಸ್.ಕೆ ಸಮಾಜ ಚಿಕ್ಕದಾದರೂ ಸಂಸ್ಕೃತಿಯಲ್ಲಿ ಶ್ರೀಮಂತವಾಗಿದೆ. ಪ್ರತಿಯೊಂದು ಹಬ್ಬಗಳನ್ನು ವಿಶಿಷ್ಟವಾಗಿ ಆಚರಿಸುತ್ತ ನಾಡಿಗೆ ತನ್ನದೆಯಾದ ಕೊಡುಗೆ ನೀಡುತ್ತಾ ಬಂದಿದೆ. ಈ ನಿಟ್ಟನಿಲ್ಲಿ ಇಂದಿನ ಯುವ ಪೀಳಿಗೆ ಹಿರಿಯರು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನೆಡೆಯಬೇಕು. ಈ ನಿಟ್ಟನಲ್ಲಿ ಮಹಿಳೆಯರ ಪಾತ್ರ ಬಹು ಮುಖ್ಯವಾಗಿರುವದರಿಂದ ಮಕ್ಕಳಿಗೆ ಮನೆಯಿಂದಲೆ ಸಂಸ್ಕಾರ ನೀಡುವ ಕೆಲಸವಾಗಬೇಕು ಎಂದು ಹೇಳಿದ ಅವರು ಇದೇ ದಿ. 4 ರಂದು ಗುರುವಾರ ಮಧ್ಯಾಹ್ನ 1 ಗಂಟೆಗೆ ಜರುಗುವ ಗಣಪತಿ ವಿಸರ್ಜನೆ ಕಾರ್ಯಕ್ರಮದಲ್ಲಿ ಸಮಾಜ ಬಾಂಧವರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಶ್ರೀ ಗಜಾನನೋತ್ಸವ ಸಮಿತಿಯಿಂದ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಗದಗ ಎಸ್.ಎಸ್.ಕೆ ಸಮಾಜ ಪಂಚ ಕಮೀಟಿಯ ಅಧ್ಯಕ್ಷರಾದ ಫಕೀರಸಾ ಬಾಂಡಗೆ ಅವರು ಉದ್ಘಾಟಿಸಿದರು. ಅನ್ನಸಂತರ್ಪಣೆ ಕಾರ್ಯಕ್ರಮವನ್ನು ಪಂಚ ಕಮೀಟಿ ಗೌರವ ಕಾರ್ಯದರ್ಶಿ ವಿನೋಧ ಶಿದ್ಲಿಂಗ ಅವರು ಚಾಲನೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತರುಣ ಸಂಘದ ಉಪಾಧ್ಯಕ್ಷ ಮಾಧು ಬದಿ ಅವರು ವಹಿಸಿಕೊಂಡಿದ್ದರು. ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಎಕ್ ಮಿನಿಟ್ ಶೋ, ರಂಗೋಲಿ ಸ್ಪರ್ಧೆ ಸೇರಿದಂತೆ ಮುಂತಾದ ಕಾರ್ಯಕ್ರಮಗಳು ಜರುಗಿದವು.

ಈ ಸಂದರ್ಭದಲ್ಲಿ ಪಂಚ ಕಮೀಟಿ ಉಪಾಧ್ಯಕ್ಷ ರಾಜು ಬದಿ, ತರುಣ ಸಂಘದ ಗೌರವ ಕಾರ್ಯದರ್ಶಿ ನಾಗರಾಜ ಖೋಡೆ, ಕಾರ್ಯದರ್ಶಿ ಶ್ರೀಕಾಂತ ಬಾಕಳೆ, ಖಜಾಂಚಿ ಶ್ರೀನಿವಾಸ ಬಾಂಡಗೆ, ಸಂದೀಪ ಕಬಾಡಿ, ನೇಮಚಂದ ಪವಾರ, ಷಣ್ಮುಖ ಪೂಜಾರಿ, ರಾಜು ಮಗಜಿ, ಸುಧೀರ ಕಾಟಿಗರ, ರಾಘು ಬಾಂಡಗೆ, ರಾಮಚಂದ್ರ ಶಿದ್ಲಿಂಗ, ರಾಜು ಖಟವಟೆ, ಮಹಿಳಾ ಮಂಡಳದ ಅಧ್ಯಕ್ಷರಾದ ಉಮಾ ಬೇವಿನಕಟ್ಟಿ, ಗೀತಾಬಾಯಿ ಹಬೀಬ, ಕಸ್ತೂರಿಬಾಯಿ ಬಾಂಡಗೆ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಸಂಭ್ರಮದಿಂದ ಗಣೇಶನ ವಿಸರ್ಜನೆ



**ಜಮಖಂಡಿ:** ಸಕಲ ಮಂಗಳವಾದ್ಯಮೇಳದೊಂದಿಗೆ ಸಡಗರದಿಂದ ಗಣೇಶ ಮೂರ್ತಿ ವಿಸರ್ಜನೆಯು ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿದ ಭಕ್ತರು ಸಡಗರ ನಗರದಾದ್ಯಂತ ಗಣೇಶ ವಿಸರ್ಜನೆ ಕಾರ್ಯಕ್ರಮ ನಡೆಯಿತು,

ಮಂಗಳವಾರ ಸಂಜೆಯಿಂದ ಪ್ರಾರಂಭವಾದ ಗಣೇಶ ವಿಸರ್ಜನೆಯಲ್ಲಿ ಸಾವಿರಾರು ಜನ ಭಕ್ತರು ಭಾಗವಹಿಸಿದ್ದರು. ನೂರಕ್ಕೂ ಹೆಚ್ಚು ಗಣೇಶ ವಿಗ್ರಹಗಳನ್ನು ವಾದ್ಯಮೇಳ, ಸಂಗೀತದೊಂದಿಗೆ ಕುಣಿದು ಕುಪ್ಪಳಿಸಿ ಮೆರವಣಿಗೆಯ ಮೂಲಕ ಕೊಂಡ್ಯೊದು ವಿಸರ್ಜಿಸಲಾಯಿತು.

ನಗರದ ಹನುಮಾನ ಚೌಕದಲ್ಲಿ ಗಜಾನನ ಮಹಾಮಂಡಳದ ವೇದಿಕೆಯಲ್ಲಿ ಬಹುಮಾನ ವಿತರಣೆ, ವಿಜೇತ ಮಂಡಲ ಅಧ್ಯಕ್ಷರಿಗೆ ಗಣ್ಯರಿಂದ ಸನ್ಮಾನ ಕಾರ್ಯಕ್ರಮಗಳು ನಡೆದವು. ಸಮಾರೋಪ ಸಮಾರಂಭದಲ್ಲಿ ಮುತ್ತಿನಕಂತಿ ಮಠದ ಶಿವಲಿಂಗ ಪಂಡಿತರಾಧ್ಯ ಶಿವಾಚಾರ್ಯರು, ರುದ್ರಾವಧೂತ ಮಠದ ಕೃಷ್ಣಾನಂದ ಅವಧೂತರು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ವೇದಿಕೆಯಲ್ಲಿ ಶಾಸಕ ಜಗದೀಶ ಗುಡಗುಂಟಿ, ನಗರಸಭೆ ಅಧ್ಯಕ್ಷ ಈಶ್ವರ ವಾಳೆನ್ನವರ, ಅರ್ಬನ್ ಬ್ಯಾಂಕ್ ಅಧ್ಯಕ್ಷ ರಾಹುಲ ಕಲೂತಿ, ತಹಶೀಲ್ದಾರ ಅನೀಲ ಬಡಿಗೇರ, ನಗರಸಭೆ ಪೌರಾಯುಕ್ತ ಜೋತಿಗಿರೀಶ, ಸಿಪಿಐ ಮಲ್ಲಪ್ಪ ಮಡ್ಡಿ,. ನಗರಸಭೆ ಸದಸ್ಯ ಕುಶಾಲ ವಾಘಮೊರೆ, ಸಹಿತ ಹಲವರು ಇದ್ದರು.

# ಈದ್ ಮಿಲಾದ್ ಆಚರಣೆಗೆ ಸಿದ್ಧತೆ

**ಜಮಖಂಡಿ:** ಪ್ರವಾದಿ ಮೊಹಮದ್ ಪೈಗಂಬರ್ ಅವರ 1500ನೇ ಜನ್ಮದಿನದ ನಿಮಿತ್ತ ಆಚರಿಸಲ್ಪಡುವ ಈದ್ ಮಿಲಾದ್ ಹಬ್ಬವನ್ನು ಸೆ.4 ರಿಂದಲೇ ವಿಜೃಂಭಣೆಯಿಂದ ಆಚರಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಮೊಮಿನಗಲ್ಲಿಯ ಮಸೀದಿಯ ಅಧ್ಯಕ್ಷ ಆಜಮ ಅವಟಿ ಹೇಳಿದರು.

ನಗರದ ರಮಾನಿವಾಸ ಸಭಾಭವನದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಗುರುವಾರ ಶಾಲಾ ಮಕ್ಕಳಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಬೆಳಿಗ್ಗೆ 9 ಗಂಟೆಯಿಂದ ಸಂಜೆ 5ರ ವರೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ನಗರದ ಎಲ್ಲ ಮಸೀದಿಗಳಲ್ಲಿ ವಿಶೇಷ ಪ್ರಾರ್ಥನಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸಮಾಜದ ಎಲ್ಲರೂ ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ರಫೀಕ ಬಾರಿಗಡ್ಡಿಯವರು ಸಾರ್ವಜನಿಕ ಆಸ್ಪತ್ರೆಯ ರೋಗಿಗಳಿಗೆ ಅಲ್ಪೋಪಹಾರ, ಹಣ್ಣು ಹಂಪಲುಗಳನ್ನು ವಿತರಿಸಲಿದ್ದಾರೆ. ಜಾಗರಣೆ ಕಾರ್ಯಕ್ರಮದ ಅಂಗವಾಗಿ ಎಲ್ಲ ಮಸೀದಿಗಳಲ್ಲಿ ಸಿಹಿ ಪದಾರ್ಥಗಳ ವಿತರಣೆ ನಡೆಯಲಿದೆ ಎಂದರು. ಮುಖಂಡರಾದ ರಫೀಕ ಬಾರಿಗಡ್ಡಿ ಮಾತನಾಡಿ, ಶುಕ್ರವಾರ ಹಬ್ಬದ ದಿನ ಸೆ.5ರಂದು ನಗರದ ಶಾಲಂ ಗೇಟನಿಂದ ಬೃಹತ್ ಮೆರವಣಿಗೆ ನಡೆಯಲಿದೆ. ಓಲೇಮಠ, ಮುತ್ತಿನಕಂತಿಮಠ ಸಹಿತ ವಿವಿಧ ಮಠಾಧೀಶರ ಸಾನಿಧ್ಯದಲ್ಲಿ ಶಾಸಕ ಜಗದೀಶ ಗುಡಗುಂಟಿ, ಮಾಜಿ ಶಾಸಕ ಆನಂದ ನ್ಯಾಮಗೌಡ, ಸಮಾಜದ ಪ್ರಮುಖರು, ಮೌಲ್ವಿಗಳು ಮತ್ತು ವಿವಿಧ ಗಣ್ಯರ ಸನ್ಮಾನ ಹಾಗೂ ಮಠಾಧೀಶರಿಂದ ಮೆರವಣಿಗೆಗೆ ಚಾಲನೆ ನೀಡಲಾಗುವದು, ಸಂಜೆ ಸಾರ್ವಜನಿಕರಿಗೆ ಪ್ರಸಾದ ವಿತರಣೆ ಕಾರ್ಯಕ್ರಮ ನಡೆಯಲಿದೆ ಎಂದರು.

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅನ್ವರ ಮೋಮಿನ, ಸಿರಿಯತ್ ಕಮೀಟಿ ಅಧ್ಯಕ್ಷ ಕುತಬುದ್ದೀನ ಬಿಜಾಪೂರ, ದಾವೂದ ಅವಟಿ, ಅಬುಬಕರ ಕುಡಚಿ, ಸಲೀಮ ಮುಧೋಳ, ಮಹಮ್ಮದ ಮುಲ್ಲಾ ಸಹಿತ ಹಲವರು ಇದ್ದರು.

# ಅನ್ನದಾನ ಸ್ವ ಉದ್ಯೋಗಿ ಸಹಪಾಠಿಗಳಿಗೆ ಸನ್ಮಾನ



**ಗೋಕಾಕ:** ಮೂಲತಃ ತಾಲ್ಲೂಕಿನ ಶಿಂಧಿಕುರಬೇಟ ಗ್ರಾಮದ ನಿವೃತ್ತ ವಾಯುಸೇನೆ ಅಧಿಕಾರಿ ಶ್ರೀಕಾಂತ ರಾಚಯ್ಯಾಸ್ವಾಮಿ ಹಿರೇಮಠ ದಂಪತಿಗಳು ತಮ್ಮ ತಂದೆ–ತಾಯಿಯವರ ಸ್ಮರಣಾರ್ಥ ತಮ್ಮ ಬಾಲ್ಯದ ಸಹಪಾಠಿಗಳಿಗಾಗಿ 'ಅನ್ನದಾನ ? ಸ್ವ ಉದ್ಯೋಗಿ ಸಹಪಾಠಿಗಳಿಗೆ ಸನ್ಮಾನ ' ವಿಶೇಷ ಕಾರ್ಯಕ್ರಮವನ್ನು ನಗರದ ಬಣಗಾರ ಓಣಿಯ ಪಾರನಟ್ಟಿಯ ಶ್ರೀ ಕಲ್ಲಟ್ಟಿಮಠದಲ್ಲಿ ಬುಧವಾರ ಹಮ್ಮಿಕೊಳ್ಳುವ ಮೂಲಕ ಗಮನ ಸೆಳೆದರು.

ಪ್ರಾಥಮಿಕ, ಪ್ರೌಢ ಶಿಕ್ಷಣ ಮತ್ತು ಕಾಲೇಜು ಮಟ್ಟದಲ್ಲಿ ತಮ್ಮೊಂದಿಗೆ ವಿದ್ಯಾರ್ಜನೆ ಮಾಡಿದ್ದ ನಲ್ವತ್ತಕ್ಕೂ ಹೆಚ್ಚು ಸಹಪಾಠಿಗಳನ್ನು ಒಂದೆಡೆ ಕರೆತಂದು ಸುಮಾರು ಐವತ್ತಕ್ಕೂ ಅಧಿಕ ವರ್ಷಗಳ ಬಾಲ್ಯದ ಬಾಂಧವ್ಯವನ್ನು ಮೆಲಕು ಹಾಕಿದ್ದು ವಿಶೇಷವಾಗಿತ್ತು. ವಾಯು ಸೇನೆಯಿಂದ ನಿವೃತ್ತಿ ಹೊಂದಿ, ತಂದೆ ಶ್ರೀ ರಾಚಯ್ಯಸ್ವಾಮಿ ಡಿ. ಹಿರೇಮಠ ಅವರ ಹೆಸರಿನಲ್ಲಿ ಸೇವಾಶ್ರಮ ತೆರೆದು, ತದನಂತರ ಅದರ ಶಾಖೆಗಳನ್ನು ಗೋಕಾಕ ನಗರ ಮತ್ತು ಬೆಂಗಳೂರಿನಲ್ಲಿ ಆರಂಭಿಸಿ ಸ್ವ ಉದ್ಯೋಗಿ ಸಹಪಾಟಿಗಳನ್ನು ಗುರ್ತಿಸಿ ಅವರಿಗೆ ಬೇಕಿರುವ ಅಗತ್ಯ ಸಹಾಯ–ಸಹಕಾರ ನೀಡಿ ಅನ್ನದಾಸೋಹ ವ್ಯವಸ್ಥೆ ಕಲ್ಪಿಸಿ ತಮ್ಮ ತಂದೆ–ತಾಯಿಯವರ ಮನೋಇಚ್ಚೆಯನ್ನು ಈಡೇರಿಸುವ ಮೂಲಕ ಇತರರಿಗೆ ಮಾದರಿಯಾಗಿದ್ದಾರೆ.

ವಿಶೇಷ ಅತಿಥಿಗಳಾಗಿ ಪಾಲ್ಗೊಂಡಿದ್ದ ವಕೀಲ ಆರ್.ಎಂ.ಕಲ್ಯಾಣಶೆಟ್ಟಿ, ಚಂದರಗಿಯ ನಿವೃತ್ತ ಮುಖ್ಯೋಪಾಧ್ಯಾಯ ಸಹದೇವ ಬಿ.ಪಾಟೀಲ, ಹುಬ್ಬಳ್ಳಿಯ ಮಹಾದೇವ ಕೊಳವಿ ಮತ್ತು ಅಧ್ಯಕ್ಷತೆ ವಹಿಸಿದ್ದ ದಟ್ಟಿ ಕುಣಿತ ಕಲಾವಿದ ವಕೀಲ ಉದ್ದಣ್ಣ ಗೋಡೇರ ಮಾತನಾಡಿ, ತಮ್ಮ ಬಾಲ್ಯದ ನೆನಹುಗಳನ್ನು ಮೆಲಕು ಹಾಕಿ ಕಾರ್ಯಕ್ರಮ ಸಂಘಟನೆ ಮಾಡಿದ ಶ್ರೀಕಾಂತ ಹಿರೇಮಠ ಅವರ ಮಿತ್ರತ್ವದ ಅಭಿಲಾಷೆಯನ್ನು ಕೊಂಡಾಡಿದರು. ಶ್ರೀಕಾಂತ ಹಿರೇಮಠ ಅವರು ಪ್ರಾಸ್ತಾಪಿಕವಾಗಿ ಮಾತನಾಡಿ, ತಂದೆ–ತಾಯಿವರ ಸ್ಮರಣಾರ್ಥ ಪ್ರತಿ ವರ್ಷವೂ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಿಕೊಂಡ ಬಂದಿದ್ದಾಗಿ ತಿಳಿಸಿದರು.

# ಸಾಕ್ಷರತಾ ದಿನಾಚರಣೆ

**ಕೊಪ್ಪಳ:** 2025–26ನೇ ಸಾಲಿನ ಜಿಲ್ಲಾ ಮಟ್ಟದ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಹಾಗೂ ಧ್ವಜಾರೋಹಣ ಕಾರ್ಯಕ್ರಮವನ್ನು ಸೆಪ್ಟೆಂಬರ್ 8ರಂದು ಬೆಳಿಗ್ಗೆ 8 ಗಂಟೆಗೆ ತಳಕಲ್ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಮಟ್ಟದ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆಯನ್ನು ಪ್ರಸ್ತುತ ಸಾಲಿನ ಲಿಂಕ್ ಡಾಕ್ಯುಮೆಂಟ್ ಅನುದಾನದಡಿ ಮೂಲ ಸಾಕ್ಷರತಾ ಕಾರ್ಯಕ್ರಮವನ್ನು 'ನಮ್ಮ ನಡೆ–ಸಂಪೂರ್ಣ ಸಾಕ್ಷರತೆಯ ಕಡೆಗೆ' ಎಂಬ ಧ್ಯಯ ವಾಕ್ಯದೊಂದಿಗೆ ಕುಕನೂರು ತಾಲೂಕಿನ ತಳಕಲ್ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಕೊಪ್ಪಳ ಜಿಲ್ಲಾ ಪಂಚಾಯತ ಕಾರ್ಯ ನಿರ್ವಾಹಕಾಧಿಕಾರಿ ವರ್ಣಿತ್ ನೇಗಿ ಅವರು ಅಧ್ಯಕ್ಷತೆ ವಹಿಸಿ ಧ್ವಜಾರೋಹಣ ಕಾರ್ಯಕ್ರಮ ನೆರವೆಸುವರು ಎಂದು ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಟಿ.ಕೃಷ್ಣಮೂರ್ತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಂತ ತಪಾಸಣಾ ಶಿಬಿರ ಮತ್ತು ಆರೋಗ್ಯ ಅರಿವು ಆಂದೋಲನ

# ಬಾಯಿಯ ಆರೋಗ್ಯ, ಸ್ವಚ್ಛತೆ ಕಾಪಾಡಿಕೊಳ್ಳಿ: ಡಾ. ಶ್ರೀವಿದ್ಯಾ

**ಕೊಪ್ಪಳ:** ಮನುಷ್ಯನ ಜೀವನದಲ್ಲಿ ಬಾಯಿಯ ಆರೋಗ್ಯ ಪ್ರಮುಖ ಪಾತ್ರವಹಿಸುತ್ತದೆ. ಬಾಯಿಯ ಆರೋಗ್ಯ ಮತ್ತು ಸ್ವಚ್ಛತೆ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಕುಷ್ಟಗಿ ಸಾರ್ವಜನಿಕ ಆಸ್ಪತ್ರೆಯ ದಂತ ವೈದ್ಯರಾದ ಡಾ. ಶ್ರೀವಿದ್ಯಾ ಅವರು ಹೇಳಿದರು.

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕುಷ್ಟಗಿ ತಾಲೂಕ ಸಾರ್ವಜನಿಕ ಆಸ್ಪತ್ರೆ ಹಾಗೂ ಕುಷ್ಟಗಿ ಸರಕಾರಿ ಪಾಲಿಟೆಕ್ನಿಕಲ್ ಕಾಲೇಜ್, ಎನ್.ಎಸ್.ಎಸ್ ಘಟಕದ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಸರಕಾರಿ ಪಾಲಿಟೆಕ್ನಿಕಲ್ ಕಾಲೇಜಿನ ಸಭಾಭವನದಲ್ಲಿ ಹಮ್ಮಿಕೊಂಡಿದ್ದ "ದಂತ ತಪಾಸಣಾ ಶಿಬಿರ ಹಾಗೂ ಆರೋಗ್ಯ ಅರಿವು ಆಂದೋಲನ" ಕಾರ್ಯಕ್ರಮದಲ್ಲಿ ಮಾತನಾಡಿದರು.

ತಂಬಾಕು ಸೇವನೆ ಹಾಗೂ ಹಾಲ್ಗೊಹಾಲ್ ಸೇವನೆಯಿಂದ ಕುಟುಂಬದ ಮೇಲೆ ಹಾಗೂ ಸಮಾಜದ ಮೇಲೆ ದುಷ್ಪರಿಣಾಮ ಉಂಟಾಗುವುದು. ಪ್ರತಿಯೊಬ್ಬರೂ ದಿನಕ್ಕೆ ಎರಡುಬಾರಿಯಂತೆ ಹಲ್ಲುಜ್ಜಬೇಕು ಮತ್ತು ಬಾಯಿಯ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಹಾಗೂ ಯಾವುದೇ ರೀತಿಯ ತಂಬಾಕು ಉತ್ಪನ್ನಗಳು ಹಾಗೂ ಹಾಕ್ಕೋಹಾಲ್ ಸೇವನೆ ಮಾಡಬಾರದು. ಆಹಾರ ಸೇವೆನೆ ಮಾಡಿದಾಗ ಹಲ್ಲುಗಳ ಸಂದುಗಳಲ್ಲಿ ಆಹಾರದ ಕಣಗಳು ಉಳಿದುಕೊಂಡು ಸ್ವಚ್ಛತೆ ಕಾಪಾಡಿಕೊಳ್ಳದೇ ಇದ್ದರೆ ಹುಳುಕು ಹಲ್ಲು ಉಂಟಾಗುತ್ತವೆ ಮತ್ತು ಬಾಯಿಯ ದುರ್ವಾಸನೆ ಉಂಟಾಗುವುದಲ್ಲದೆ ಇದ–ರಿಂದ ಅನಾರೋಗ್ಯ ಉಂಟಾಗಿತ್ತದೆ. ಯುವಕರು ವಿವಿಧ ರೀತಿಯ ಗುಟುಕಾ, ತಂಬಾಕು ಹಾಗೂ ಹಾಲ್ಗೊಹಾಲು ಸೇವನೆ ಮಾಡುವುದರಿಂದ ಬಾಯಿ ಕ್ಯಾನ್ಸರ್ ಮತ್ತು ಗಂಟಲು ಕ್ಯಾನ್ಸರ್ ಬರುವ ಸಾಧ್ಯತೆ ಇರುತ್ತದೆ ಎಂದರು.

ನಿರಂತರ ದಂತವೈದ್ಯರ ಹತ್ತಿರ ಬಾಯಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಯುವಕರು ಬೀಡಿ, ಸಿಗರೇಟ್, ಗುಟುಕಾ ಹಾಗೂ ಹಾಕ್ಕೋಹಾಲ್ ಸೇವನೆ ಮಾಡಬಾರದು. ತಮ್ಮ ಆರೋಗ್ಯವನ್ನು ತಾವೇ ಕಾಪಾಡಿಕೊಳ್ಳಬೇಕು. ಹಲ್ಲಿನ ಯಾವುದೇ ಸಮಸ್ಯೆ ಉಂಟಾದರೆ, ತಮ್ಮ ಸಮೀಪದ ಆಸ್ಪತ್ರೆಗೆ ಭೇಟಿ ನೀಡಿ, ದಂತ ವೈದ್ಯರಲ್ಲಿ ಪರೀಕ್ಷಿಸಿಕೊಳ್ಳಬೇಕು ಎಂದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ.ಪಿ ಅವರು ಕಾರ್ಯಕ್ರಮ ಕುರಿತು ಮಾತನಾಡಿ, ಸೋಂಕಿತ ಸೊಳ್ಳೆಗಳಿಂದ ಹರಡುವ ಸಾಂಕ್ರಾಮಿಕ ರೋಗಗಳಾದ ಡೆಂಗ್ಯೂ, ಚಿಕನ್‌ಗುನ್ಯಾ, ಆನೆಕಾಲು ರೋಗ, ಮೆದಳುಜ್ವರ, ಮಲೇರಿಯಾ, ಜಿಕಾವೈರಸ್ ಹರಡದಂತೆ, ಸೊಳ್ಳೆಗಳ ಉತ್ಪತ್ತಿತಾಣ ಗುರುತಿಸಿ, ಸ್ವಚ್ಛಗೊಳಿಸುತ್ತಿರಬೇಕು ಹಾಗೂ ವೈಯಕ್ತಿಕ ರಕ್ಷಣೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ಕ್ಷಯರೋಗ ನಿರ್ಮೂಲನೆ ಮಾಡಲು ಎಲ್ಲರು ಸಹಕಾರ ಬಹಳ ಮುಖ್ಯ. ನಿಮ್ಮ ಅಕ್ಕ–ಪಕ್ಕದವರಿಗೆ ಯಾರಿಗಾದರೂ ಎರಡು ವಾರಗಳಿಂದ ಸತತ ಕೆಮ್ಮು, ಕಫದಲ್ಲಿ ರಕ್ತಬಿಳುವುದು. ಹಸಿವು ಆಗದೇ ಇರುವಂತಹ ಲಕ್ಷಣಗಳು ಕಂಡುಬಂದರೆ ತಕ್ಷಣ ಸಮೀಪದ ಸರ್ಕಾರಿ ಆಸ್ಪತ್ರೆ ಕಳುಹಿಸಿಕೊಡಿ. ಮೈಮೇಲೆ ತಿಳಿ–ಬಿಳಿ ತಾಮ್ರವರ್ಣದ ಸ್ಪರ್ಶ ಜ್ಞಾನವಿಲ್ಲದ ಮಚ್ಚೆಗಳು ಕಂಡುಬಂದರೆ ಆರೋಗ್ಯ ಸಿಬ್ಬಂದಿಯನ್ನು ಭೇಟಿ ಮಾಡಬೇಕು ಎಂದರು.

ಯಾವುದೇ ಮಾನಸಿಕ ಸಮಸ್ಯೆ ಕಂಡುಬಂದರೆ, 14416 ಗೆ ಕರೆ ಮಾಡಿ ಮಾಹಿತಿ ಪಡೆದುಕೊಳ್ಳಬೇಕು ಹಾಗೂ ಜೀವನ ಶೈಲಿಯಿಂದ ಬರುವ ಖಾಯಿಲೆಗಳಾದ ಅಧೀಕ ರಕ್ತದೊತ್ತಡ, ಮಧುಮೇಹ, ಕ್ಯಾನ್ಸರ್, ಹೃದಯಘಾತ, ಸ್ಟೋಕ್ ಮತ್ತು ಬೇಡವಾದ ಬೊಜ್ಜು ಇವುಗಳಿಂದ ದೂರವಿರಲು ದೈಹಿಕ ಚಟುವಟಿಕೆ ಹಾಗೂ ಪೌಷ್ಠಿಕ ಆಹಾರ ಸೇವನೆ ಮಾಡಿ ಹಾಗೂ 30 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರೂ ನಿರಂತರ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವಂತೆ ಪಾಲಕರಿಗೆ ಮತ್ತು ಸಾರ್ವಜನಿಕರಿಗೆ ತಿಳಿಸುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಆರ್.ಕೆ.ಎಸ್.ಕೆ ಆಪ್ತ ಸಮಾಲೋಚಕರಾದ ಖಾದರ್‌ಬಾಷಾ ಅವರು ಹದಿ–ಹರೆಯದವರ ಆರೋಗ್ಯ ರಕ್ಷಣೆ ಹಾಗೂ ಬಾಲ್ಯವಿವಾಹ ನಿಷೇಧ ಕಾಯ್ದೆ–2006 ಮತ್ತು ಪೌಷ್ಠಿಕ ಆಹಾರ ಸೇವೆನೆ ಕು–ರಿತು ವಿವರವಾಗಿ ಮಾತನಾಡಿದರು.

ಐ.ಸಿ.ಟಿ.ಸಿ ಆಪ್ತಸಮಾಲೋಚಕರಾದ ವಿಜಯಲಕ್ಷ್ಮಿ ಅವರು ಹೆಚ್.ಐ.ವಿ. ಏಡ್ಸ್ ನಿಯಂತ್ರಣ ಕುರಿತು ವಿಶೇಷ ಉಪನ್ಯಾಸ ನೀಡಿದರು.

ದಂತ ತಪಾಸಣಾ ಶಿಬಿರ ಮತ್ತು ಆರೋಗ್ಯ ಅರಿವು ಆಂದೋಲನ ಕಾರ್ಯಕ್ರಮದ ಅಂಗವಾಗಿ ಕುಷ್ಟಗಿ ಸರಕಾರಿ ಪಾಲಿಟೆಕ್ನಿಕಲ್ ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳಿಗೆ ಬಾಯಿ ಆರೋಗ್ಯ ತಪಾಸಣೆ ಮಾಡಲಾಯಿತು.

ಸರಕಾರಿ ಪಾಲಿಟೆಕ್ನಿಕಲ್ ಕಾಲೇಜ್ ಪ್ರಾಂಶುಪಾಲರಾದ ಸಿ.ಎಸ್. ಜನಾದ್ರಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಆರೋಗ್ಯ ಇಲಾಖೆಯು ಹಮ್ಮಿಕೊಳ್ಳುವ ಇಂತಹ ಜಾಗೃತಿ ಕಾರ್ಯಕ್ರಮಗಳು ಹಾಗೂ ಆರೋಗ್ಯ ತಪಾಸಣಾ ಶಿಬಿರಗಳು ವಿದ್ಯಾರ್ಥಿಗಳಿಗೆ ಬಹಳಷ್ಟು ಉಪಯುಕ್ತವಾಗಿವೆ. ಇದರ ಸದುಪಯೋಗ ಪಡೆದುಕೊಳ್ಳುವಂತೆ ವಿದ್ಯಾರ್ಥಿಗಳಿಗೆ ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಹಿರಿಯ ಉಪನ್ಯಾಸಕರಾದ ಸೌಮ್ಯ ಸೇರಿದಂತೆ ಸಹ ಉಪನ್ಯಾಸಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತ–ರಿದ್ದರು.

# ಶುಲ್ಕ ಮರುಪಾವತಿಗೆ ಅರ್ಜಿ ಆಹ್ವಾನ

**ಕೊಪ್ಪಳ:** ಕೊಪ್ಪಳ ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ ನಂತರದ ತರಗತಿಯಲ್ಲಿ ಉನ್ನತ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಂದ ಶುಲ್ಕ ಮರುಪಾವತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ವಿಕಲಚೇತನ ವಿದ್ಯಾರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು ತಮ್ಮ ಕಾಲೇಜು ಮುಖ್ಯಸ್ಥರ ದೃಢೀಕರಣದೊಂದಿಗೆ ಭರ್ತಿಮಾಡಿ ಸೆಪ್ಟೆಂಬರ್ 30 ರೊಳಗೆ ಕಛೇರಿ ಅವಧಿಯಲ್ಲಿ ಕೊಪ್ಪಳ ನಗರದ ಹೊಸಪೇಟೆ ರಸ್ತೆಯ ಜಿಯೋ ಪೆಟ್ರೋಲ್ ಬಂಕ್ ಎದುರುಗಡೆ ಇರುವ ನಗರಾಭಿವೃದ್ಧಿ ಪ್ರಾಧಿಕಾರ ಕಾರ್ಯಾಲಯ ಆವರಣ ಕೊಠಡಿ ಸಂಖ್ಯೆ 31 ಮತ್ತು 32ರಲ್ಲಿನ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಾರ್ಯಾಲಯಕ್ಕೆ ಸಲ್ಲಿಸಬೇಕು. ಶುಲ್ಕ ಮರುಪಾವತಿ ಮೊತ್ತವನ್ನು ನೇರವಾಗಿ ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಜಮಾ ಮಾಡುವುದರಿಂದ ಕಡ್ಡಾಯವಾಗಿ ಪ್ರಚಲಿತ ಬ್ಯಾಂಕ್ ಖಾತೆಯ ವಿವರ ನೀಡತಬೇಕು.ಪ್ರಮುಖ ದಾಖಲೆಗಳು: ಅರ್ಜಿ ನಮೂನೆಯೊಂದಿಗೆ ಯು.ಡಿ.ಐ.ಡಿ ಕಾರ್ಡ್ ಝರಾಕ್ಸ್ ಪ್ರತಿ, ಚಾಲ್ತಿಯಲ್ಲಿರುವ ಧೃಡೀಕರಿಸಿದ ಜಾತಿ ಪ್ರಮಾಣ ಪತ್ರ, ಧೃಡೀಕರಿಸಿದ ಚಾಲ್ತಿ ಬ್ಯಾಂಕ್ ಖಾತೆ ಝರಾಕ್ಸ ಪ್ರತಿ ಹಾಗೂ ಧೃಡೀಕರಿಸಿದ ಹಿಂದಿನ ವರ್ಷದ ಅಂಕಪಟ್ಟಿ, ಶುಲ್ಕ ಪಾವತಿಸಿದ ಮೂಲ ಪ್ರತಿ, ಆಧಾರ್ ಕಾರ್ಡ್ ಮತ್ತು ಕಾಲೇಜಿನ ದೃಡೀಕರಣ ಪತ್ರಿಯನ್ನು ಲಗತ್ತಿಸಿ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗಾಗಿ ಎಂ.ಆರ್.ಡಬ್ಲ್ಯೂ.ಗಳಾದ ಕೊಪ್ಪಳದ ಜಯಶ್ರೀ ಮೊ.ಸಂ: 9980126391, ಯಲಬುರ್ಗಾದ ಶಶೀಕಲಾ ಮೊ.ಸಂ: 8147749523, ಕುಕನೂರಿನ ಶರಣಯ್ಯ ಮೊ.ಸಂ: 9886240203, ಕುಷ್ಟಗಿಯ ಚಂದ್ರಶೇಖರ ಮೊ.ಸಂ: 9916308585 ಹಾಗೂ ಗಂಗಾವತಿ, ಕನಕಗಿರಿ ಮತ್ತು ಕಾರಟಗಿ ತಾಲೂಕುಗಳ ಎಂ.ಆರ್.ಡಬ್ಲ್ಯೂ ಆಗಿರುವ ಮಂಜುಳಾ ಮೊ.ಸಂ: 7975398202 ಗೆ ಸಂಪರ್ಕಿಸಿ ಅಥವಾ ಗ್ರಾಮ ಪಂಚಾಯತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿ.ಆರ್.ಡಬ್ಲ್ಯೂ ಹಾಗೂ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಯು.ಆರ್. ಡಬ್ಲ್ಯೂ ಗಳನ್ನು ಭೇಟಿ ಮಾಡಿ ಮಾಹಿತಿ ಪಡೆಯಬಹುದು ಎಂದು ಕೊಪ್ಪಳ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯಲ್ಲಿ ಸಮೀಕ್ಷಾ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಿ: ಡಾ.ಇಟ್ನಾಳ



**ಕೊಪ್ಪಳ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಕರ್ನಾಟಕ ರಾಜ್ಯ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಕೈಗೊಳ್ಳಲಿರುವ ಈ ಸಮೀಕ್ಷಾ ಕಾರ್ಯವನ್ನು ಕೊಪ್ಪಳ ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಮಂಗಳವಾರ ಜಿಲ್ಲಾಧಿ ಕಾರಿಗಳ ಕಛೇರಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಕರ್ನಾಟಕ ರಾಜ್ಯ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಕೈಗೊಳ್ಳಲಿರುವ ಸಮೀಕ್ಷಾ ಕಾರ್ಯದ ಕುರಿತು ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಈ ಸಮೀಕ್ಷೆ ಕಾರ್ಯವು ಕೊಪ್ಪಳ ಜಿಲ್ಲೆಯಲ್ಲಿ ಸೆಪ್ಟೆಂಬರ್ 20 ರಿಂದ ಅಕ್ಟೋಬರ್ 7 ರವರೆಗೆ ನಡೆಯಲಿದ್ದು, ಯಾವುದೇ ಸಮಸ್ಯೆಗಳಾಗದಂತೆ ನಡೆಸಬೇಕು. ಜಿಲ್ಲೆಯ ಆಯಾ ತಾಲ್ಲೂಕಿನ ತಹಶಿಲ್ದಾರರು ಸಮೀಕ್ಷೆ ಕಾರ್ಯಕ್ಕೆ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಿಕ್ಷಕರನ್ನು ಸರಿಯಾಗಿ ನೇಮಿಸಿದ್ದಾರೆ ಅಥವಾ ಇಲ್ಲ ಎಂಬುದನ್ನು ಪರಿಶೀಲನೆ ಮಾಡಬೇಕು. ಶಿಕ್ಷಕರು ವರ್ಗಾವಣೆ ಯಾದವರು. ಡೆಪಟೇಷನ್ ಮೇಲೆ ಬೇರೆ ಕಡೆ ಹೋದವರು ಇರುತ್ತಾರೆ ಹಾಗಾಗಿ ಈ ಎಲ್ಲವುಗಳನ್ನು ಗಮನಿಸಿ ಗಣತಿದಾರರ ಸಮೀಕ್ಷಾ ಪಟ್ಟಿ ತೈಯಾರಿಸಬೇಕೆಂದರು.

ಆರೋಗ್ಯ ಸಮಸ್ಯೆ ಇರುವವರು, ಚಿಕ್ಕ ಮಕ್ಕಳು ಇರುವ ಮಹಿಳಾ ಶಿಕ್ಷಕರು ಮತ್ತು ವಿಶೇಷ ಚೇತನ ಶಿಕ್ಷಕರಿಗೆ ಈ ಕಾರ್ಯಕ್ಕೆ ನಿಯೋಜನೆ ಮಾಡಬೇಡಿ. ಸಮೀಕ್ಷಾ ಕಾರ್ಯಕ್ಕೆ ಪ್ರತಿ 150 ಮನೆಗಳಿಗೆ ಒಬ್ಬ ಗಣತೀದಾರರನ್ನು ಹಾಗೂ 20 ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರನ್ನು ನೇಮಿಸಿ ಗಣತಿ ಕಾರ್ಯಕ್ಕೆ ಯಾವುದೇ ಸಮಸ್ಯೆಗಳಾಗದಂತೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಪ್ರತಿಯೊಂದಕ್ಕೆ ತಮಗೆ ಹೇಳುವಂತಾಗಬಾರದು ತಾವೆಲ್ಲರೂ ಸ್ವಯಂ ಪ್ರೇರಿತರಾಗಿ ಕೆಲಸ ಮಾಡಬೇಕೆಂದು ಹೇಳಿದರು.

ಕೊಪ್ಪಳ ಜಿಲ್ಲೆಯಲ್ಲಿ 3,55,361 ಕುಟುಂಬಗಳನ್ನು ಅಂದಾಜಿಸಲಾಗಿದ್ದು 150 ಕುಟುಂಬಕ್ಕೆ ಒಬ್ಬ ಗಣತಿದಾರರಂತೆ ಒಟ್ಟು 2370 ಗಣತಿದಾರರು ಬೇಕಾಗುತ್ತಾರೆ. 20 ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರಂತೆ ಅಂದಾಜು 130 ಜನ ಮೇಲ್ವಿಚಾರಕರು ಮತ್ತು 50 ಮಾಸ್ಟರ್ ಟ್ರೈನರಗಳನ್ನು ನೇಮಿಸಬೇಕು. ಪ್ರಾಥಮಿಕ ಶಾಲೆಯ ಶಿಕ್ಷಕರನ್ನು ಗಣತಿದಾರರನ್ನಾಗಿ ನೇಮಿಸಬೇಕು. ಆಯಾ ಗ್ರಾಮ ಪಂಚಾಯತಿ ಮತ್ತು ನಗರ ವ್ಯಾಪ್ತಿಯ ಪ್ರದೇಶದಲ್ಲಿ ಅವಶ್ಯವಿರುವಷ್ಟು ಶಿಕ್ಷಕರು ಲಭ್ಯವಾಗದಿದ್ದಲ್ಲಿ ಇತರೆ ವಿವಿಧ ಇಲಾಖೆಯ ಪ್ರಥಮ ದರ್ಜೆ ಸಹಾಯಕರು ಹಾಗೂ ದ್ವಿತೀಯ ದರ್ಜೆ ಸಹಾಯಕರನ್ನು ನೇಮಿಸಿ. ಈ ಸಮೀಕ್ಷೆ ಕಾರ್ಯಕ್ಕೆ ಮಾಸ್ಟರ್ ಟ್ರೈನರಗಳ ಅವಶ್ಯಕತೆ ಇದ್ದು ಈಗಾಗಲೇ ಈ ಕಾರ್ಯದಲ್ಲಿ ಕೆಲಸ ಮಾಡಿದವರನ್ನು ನೇಮಿಸಿ ಎಂದು ಹೇಳಿದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡೂರ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ನಾಗಮಣಿ ಹೊಸಮನಿ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಬಸವರಾಜ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಸುಧಾಕರ್ ಮಾನೆ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಜಗದೀಶ್, ಜಿಲ್ಲಾ ಅಲ್ಪ ಸಂಖ್ಯಾತರ ಕಲ್ಯಾಣ ಅಧಿಕಾರಿ ಅಜ್ಮೀರ್ ಅಲಿ ಹಾಗೂ ಜಿಲ್ಲೆಯ ವಿವಿಧ ತಾಲ್ಲೂಕಿನ ತಹಶಿಲ್ದಾರರು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮಕ್ಕಳ ಹಕ್ಕುಗಳ ತರಬೇತಿ ಕಾರ್ಯಕ್ರಮ

**ಕೊಪ್ಪಳ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಯುನಿಸೆಫ್–ಮಕ್ಕಳ ರಕ್ಷಣಾ ಯೋಜನೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕೊಪ್ಪಳ ಇವರ ಸಹಯೋಗದಲ್ಲಿ "ಮಕ್ಕಳ ಹಕ್ಕುಗಳು ಮತ್ತು ಮಕ್ಕಳ ಸಂರಕ್ಷಣೆ"ಯ ಕುರಿತು ವಸತಿ ನಿಲಯಗಳ ಅಧೀಕ್ಷಕರು, ನಿಲಯ ಪಾಲಕರು, ಪ್ಯಾರಾ ಮೆಡಿಕಲ್ ಕಾಲೇಜುಗಳ ಮುಖ್ಯಸ್ಥರು ಹಾಗೂ ಪ್ರಾಂಶುಪಾಲರಿಗೆ ಮತ್ತು ಮಕ್ಕಳ ಪಾಲನಾ ಸಂಸ್ಥೆಗಳ ಅಧೀಕ್ಷಕರು, ಮುಖ್ಯಸ್ಥರಿಗೆ ತರಬೇತಿ ಕಾರ್ಯಕ್ರಮವನ್ನು ಸೆಪ್ಟೆಂಬರ್ 6 ರಂದು ಬೆಳಗ್ಗೆ 9.30 ರಿಂದ ಸಾಯಂಕಾಲ 5.30 ರವರೆಗೆ ಕೊಪ್ಪಳ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ ನೇಗಿ ಹಾಗೂ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯರಾದ ಶೇಖರಗೌಡ ಜಿ. ರಾಮತ್ನಾಳ ಅವರು ಘನ ಉಪಸ್ಥಿತರಿರುವರು. ಕೊಪ್ಪಳ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕೊಪ್ಪಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಮ ವೈ. ಶೆಟ್ಟೆಪ್ಪನವರ್ ಮುಖ್ಯ ಅತಿಥಿಗಳಾಗಿ ಉಪಸ್ಥಿತರಿರುವರು.

ಅತಿಥಿಗಳಾದ ಕೊಪ್ಪಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಲಿಂಗರಾಜು ಟಿ., ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿದೇಶಕ ಸೋಮಶೇಖರಗೌಡ ಪಾಟೀಲ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಪ್ರಕಾಶ ಕಡಗದ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಅಜ್ಜಪ್ಪ ಸೊಗಲದ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ನಾಗಮಣಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಅಜ್ಮೀರ್ ಅಲಿ ಅವರು ಪಾಲ್ಗೊಳ್ಳುವರು.ಸಂಪನ್ಮೂಲ ವ್ಯಕ್ತಿಗಳಾಗಿ ಕೊಪ್ಪಳ ಯುನಿಸೆಫ್–ಮಕ್ಕಳ ರಕ್ಷಣಾ ಯೋಜನೆಯ ವಿಭಾಗೀಯ ಸಂಯೋಜಕ ಡಾ. ಕೆ.ರಾಘವೇಂದ್ರ ಭಟ್ ಹಾಗೂ ಯುನಿಸೆಫ್–ಮಕ್ಕಳ ರಕ್ಷಣಾ ಯೋಜನೆಯ ವ್ಯವಸ್ಥಾಪಕ ಹರೀಶ ಜೋಗಿ ಅವರು ಭಾಗವಹಿಸಲಿದ್ದು, ವಿವಿಧ ವಿಷಯಗಳ ಕುರಿತು ತರಬೇತಿ ನೀಡಲಿದ್ದಾರೆ ಎಂದು ಕೊಪ್ಪಳ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಪ್ರಕಟಣೆ ತಿಳಿಸಿದೆ.

## ಪುಟ್ಟರಾಜ ಕವಿ ಗವಾಯಿಗಳವರ ಪುಣ್ಯಸ್ಮರಣೆ



**ಗದಗ:** ನಡೆದಾಡುವ ದೇವರೆಂದೇ ಖ್ಯಾತಿ ಹೊಂದಿರುವ ಲಿಂ.ಡಾ.ಪಂ. ಪುಟ್ಟರಾಜ ಕವಿ ಗವಾಯಿಗಳು ಅಂಧ, ಅನಾಥರ ಬಾಳಿಗೆ ಬೆಳಕಾಗಿದ್ದರು. ಅವರಿಂದ ಸಂಗೀತ ಕಲಿತ ಲಕ್ಷಾಂತರ ಕಲಾವಿದರು ವಿಶ್ವದೆಲ್ಲೆಡೆ ಸೇವೆ ಸಲ್ಲಿಸುತ್ತಿದ್ದಾರೆ. ಮಾನವರಾಗಿ ಜನಿಸಿದ್ದರೂ ಕೂಡಾ ತಮ್ಮ ಸತ್ಕಾರ್ಯಗಳ ಮೂಲಕ ದೇವರಾದರು ಎಂದು ಬಳಗಾನೂರು ಚಿಕೇನಕೊಪ್ಪ ಮಠದ ಶಿವಶಾಂತವೀರ ಶರಣರು ಹೇಳಿದರು.

ತಾಲೂಕಿನ ನಾಗಾವಿ ಗ್ರಾಮದ ಬಸವೇಶ್ವರ ಭಜನಾ ಸಂಘದ ವತಿಯಿಂದ ಡಾ.ಪಂ. ಪುಟ್ಟರಾಜ ಕವಿ ಗವಾಯಿಗಳವರ 15ನೇ ಪುಣ್ಯಸ್ಮರಣೆ ಆಚರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು. ಪುಟ್ಟರಾಜ ಕವಿ ಗವಾಯಿಗಳವರ ಸಂಗೀತ, ಸಾಹಿತ್ಯ ಸೇವೆಗಾಗಿ ವಿವಿಧ ಸಂಘಟನೆಗಳಿಂದ ವಿವಿಧ ಪ್ರಶಸ್ತಿಗಳೂ ಸೇರಿದಂತೆ ಸರಕಾರದಿಂದ ಪದ್ಮ ಪ್ರಶಸ್ತಿ ಪಡೆದಿದ್ದಾರೆ. ಅವರ ಪುಣ್ಯಸ್ಮರಣೆಯನ್ನು ದೇಶಾದ್ಯಂತ ಆಚರಿಸುತ್ತಿರುವುದು ಅವರ ಘನತೆಯನ್ನು ತೋರುತ್ತದೆ ಎಂದು ಶ್ರೀಗಳು ಹೇಳಿದರು.

ಇದೇ ಸಂದರ್ಭದಲ್ಲಿ ನಾಗಾವಿ ನಾನಾ ಯೂಟ್ಯೂಬ್ ಮುಖಾಂತರ ಹೊರ ತಂದಿರುವ ಶರಣರ ಸಂದೇಶ ಕಾರ್ಯಕ್ರಮಕ್ಕೆ ವೀಕ್ಷಕರ ಆಹ್ವಾನಪತ್ರಿಕೆ ಬಿಡುಗಡೆ ಮಾಡುವುದರೊಂದಿಗೆ ಪ್ರಥಮ ಸಂಚಿಕೆಗೆ ಚಾಲನೆ ನೀಡಿದರು. ತಾಲೂಕು ಪಂಚಾಯತಿ ಮಾಜಿ ಅಧ್ಯಕ್ಷ ಬಿ.ಎಸ್. ಚಿಂಚಲಿ ಪ್ರಾಸ್ತಾವಿಕವಾಗಿ ಮತನಾಡಿ, ಸ್ವಾಗತಿಸಿದರು.

ನಾಗಾವಿ ಗ್ರಾಮದ ಗಂಗಾಧರೇಶ್ವರ ಮಠದ ವೇದಮೂರ್ತಿ ಮೃತ್ಯುಂಜಯ ಸ್ವಾಮೀಜಿ ಹಿರೇಮಠ ಸಮ್ಮುಖ ವಹಿಸಿದರು. ಎಸ್.ಬಿ. ಹುಬ್ಬಳ್ಳಿ, ಸಿ.ವಿ. ಮಡಿವಾಳರ, ಜಿ.ಪಿ. ಹೊಂಬಳ, ಅಳಗವಾಡಿಯ ಗುರಪ್ಪ ಅವರಾದಿ ಸೇರಿದಂತೆ ಗ್ರಾಮದ ಪ್ರಮುಖರು, ಗಣ್ಯರು ಪಾಲ್ಗೊಂಡಿದ್ದರು. ಬಸವರಾಜ ಎಸ್. ಹೊಂಬಳ ಪ್ರಾರ್ಥಿಸಿದರು. ಮಲ್ಲಪ್ಪ ಗೋಲಪ್ಪನವರ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಬಸವೇಶ್ವರ ಭಜನಾ ಸಂಘದವರು ಮುಂಜಾನೆ ಪುಟ್ಟರಾಜ ಗವಾಯಿಗಳವರ ಭಾವಚಿತ್ರದೊಂದಿಗೆ ಭಜನೆ ಗೀತೆಗಳನ್ನು ಹಾಡುತ್ತ ಪ್ರಮುಖ ಬೀದಿಗಳಲ್ಲಿ ಸಂಚರಿಸಿದರು. ಮಧ್ಯಾಹ್ನ ಅನ್ನದಾಸೋಹ ನಡೆಯಿತು. ಬಳಿಕ ಅಹೋರಾತ್ರಿ ಭಜನಾ ಕಾರ್ಯಕ್ರಮ ಜರುಗಿತು.

## ವೈದ್ಯಕೀಯ ಕಾಲೇಜು ಖಾಸಗಿ ಸಹಭಾಗಿತ್ವಕ್ಕೆ ಖಂಡನೆ

**ಮುದ್ದೇಬಿಹಾಳ:** ಜಿಲ್ಲಾ ಸರ್ಕಾರಿ ಆಸ್ಪತ್ರೆ ಆವರಣದಲ್ಲಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಸರ್ಕಾರ ಮುಂದಾಗಿರುವುದು ಸ್ವಾಗತಾರ್ಹ ವಿಜಯಪುರ ಜಿಲ್ಲೆಗೆ ಸರ್ಕಾರಿ ವೈದ್ಯಕೀಯ ಕಾಲೇಜಿನ ಅವಶ್ಯಕತೆ ತುಂಬಾ ಇದೆ, ಆದರೆ ಸರ್ಕಾರ ಜಿಲ್ಲೆಯಲ್ಲಿ ಪಿಪಿಪಿ (ಪಬ್ಲಿಕ್, ಪ್ರೈವೇಟ್, ಪಾರ್ಟನರ್ಶಿಪ್) ಮಾದರಿಯಲ್ಲಿ ವೈದ್ಯಕೀಯ ಕಾಲೇಜು ಆರಂಭಿಸುವ ಹುನ್ನಾರದಲ್ಲಿದೆ ಇದನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ ಎಂದು ದಲಿತ ವಿದ್ಯಾರ್ಥಿ ಪರಿಷತ್ ಮುದ್ದೇಬಿಹಾಳ ತಾಲೂಕು ಅಧ್ಯಕ್ಷ ಮುತ್ತು ಚಲವಾದಿ (ನೇಬಗೇರಿ) ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜ್ ಸ್ಥಾಪನೆ ಆಗಬೇಕೆಂದು ಹಲವಾರು ವಿದ್ಯಾರ್ಥಿ ಸಂಘಟನೆಗಳು ಕಳೆದ15ವರ್ಷಗಳಿಂದಹೋರಾಟಗಳನ್ನು ನಡೆಸುತ್ತಿವೆ ಇದರ ಫಲವಾಗಿ ಮೆಡಿಕಲ್ ಕಾಲೇಜು ಸ್ಥಾಪನೆಗೆ ಸರ್ಕಾರ ನಿರ್ಧರಿಸಿದ್ದು ಸ್ವಾಗತಾರ್ಹ ಆದರೆ ಪಿಪಿಪಿ ಮಾದರಿಯನ್ನು ಕೈಬಿಟ್ಟು ಸಂಪೂರ್ಣ ಸರ್ಕಾರಿ ಮಾದರಿಯ ವೈದ್ಯಕೀಯ ಕಾಲೇಜನ್ನು ಸ್ಥಾಪನೆ ಮಾಡಬೇಕು. ಶಿಕ್ಷಣ ಹಾಗೂ ಆರೋಗ್ಯ ಸೇವಾ ವಲಯದಲ್ಲಿ ಇರಬೇಕಾಗಿತ್ತು ಆದರೆ ಖಾಸಗೀಕರಣದ ಮೂಲಕ ಎರಡು ಕ್ಷೇತ್ರಗಳನ್ನು ಮಾರಾಟಮಾಡುತ್ತಿರುವುದು ಖಂಡನೀಯ. ಜಿಲ್ಲೆಯಲ್ಲಿ ಈಗಾಗಲೇ ಖಾಸಗಿ ಮೆಡಿಕಲ್ ಕಾಲೇಜುಗಳಿದ್ದು ಇದಕ್ಕೆ ಲಕ್ಷಾಂತರ ಶುಲ್ಕ ಕಟ್ಟಲು ಸಾಧ್ಯವಾಗದೆ ಸಾವಿರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ತಮ್ಮ ಶಿಕ್ಷಣವನ್ನು 'ತೊರೆದಿದ್ದಾರೆ ಶಿಕ್ಷಣ ಎಂಬುದು ಕೆಲವೇ ಜನರ ಸ್ವತ್ತಾಗದೆ ಎಲ್ಲರ ಸ್ವತ್ತಾಗಬೇಕು, ಎಲ್ಲ ವರ್ಗದ ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣ ಸಿಗಬೇಕಾದರೆ ಸರ್ಕಾರವೇ ಸಂಪೂರ್ಣ ಆರ್ಥಿಕ ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕು ಆಗ ಮಾತ್ರ ಬಡವರ, ಕಾರ್ಮಿಕರ, ರೈತರ ಮಕ್ಕಳಿಗೆ ಶಿಕ್ಷಣ ಸಿಗುತ್ತದೆ ಆದ್ದ–ರಿಂದ ಸರ್ಕಾರ ಪಿಪಿಪಿ ಹೆಸರಿನಲ್ಲಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸದೇ ಸರ್ಕಾರಿ ಕಾಲೇಜು ಸ್ಥಾಪಿಸಬೇಕು. ಶಿಕ್ಷಣವನ್ನು ರಾಜಕಾರಣಿಗಳು, ಉದ್ಯಮಿಗಳು ಅಪಹರಿಸುವುದನ್ನು ದಲಿತ ವಿದ್ಯಾರ್ಥಿ ಪರಿಷತ್ತು ತೀವ್ರವಾಗಿ ಖಂಡಿಸುತ್ತದೆ' ಎಂದು ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಜನ್ಮ ದಿನ

## ಇಂದು ಶಿಕ್ಷಕರ ದಿನಾಚರಣೆ

**ವಿಜಯಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ವಿಜಯಪುರ ಇವರ ಸಹಯೋಗದಲ್ಲಿ ಸೆ.5 ರಂದು ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನದ ಅಂಗವಾಗಿ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 10–30ಕ್ಕೆ ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಡಾ.ಎಂ.ಬಿ.ಪಾಟೀಲ ಅವರು ಉದ್ಘಾಟಿಸಲಿದ್ದಾರೆ. ನಗರ ಶಾಸಕರಾದ ಬಸನಗೌಡ ಆರ್.ಪಾಟೀಲ ಯತ್ನಾಳ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್.ಪಾಟೀಲ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ರವಿಕುಮಾರ್ ಎನ್, ನವದೆಹಲಿಯಲ್ಲಿನ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ–2 ಹಾಗೂ ಶಾಸಕರಾದ ಪ್ರಕಾಶ ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತದ ಅಧ್ಯಕ್ಷರೂ ಆದ ಶಾಸಕ ಅಪ್ಪಾಜಿ ಸಿ.ಎಸ್.ನಾಡಗೌಡ, ಸಂಸದರಾದ ರಮೇಶ ಜಿಗಜಿಣಗಿ, ಡಾ. ಸುಧಾ ಮೂರ್ತಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ಹಣಮಂತ ಆರ್.ನಿರಾಣಿ, ಸುನೀಲಗೌಡ ಬಿ.ಪಾಟೀಲ, ಪಿ.ಎಚ್.ಪೂಜಾರ, ವಿಠ್ಠಲ ಕಟಕದೊಂಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ, ಕೇಶವ ಪ್ರಸಾದ ಎಸ್, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಕಾಂತಾ ನಾಯ್ಕ, ಧಾರವಾಡದ ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷರಾದ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಮಹಾಪೌರರಾದ ಮಡಿವಾಳಪ್ಪ ಸಿದ್ದರಾಮಪ್ಪ ಕರಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕನಾನ್ ಮುಶ್ರೀಫ್ ಹಾಗೂ ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಇಲಿಯಾಸ್ ಬೋರಾಮಣಿ ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಅನಾಮಧೇಯ ಶವ ಪತ್ತೆ

**ವಿಜಯಪುರ:** ಅನಾಮಧೇಯ ಅಂದಾಜು 35 ರಿಂದ 40 ವರ್ಷ ವಯಸ್ಸಿನ ವ್ಯಕ್ತಿ ಶವ ಪತ್ತೆಯಾಗಿರುವ ಕುರಿತು ವಿಜಯಪುರದ ಗೋಲಗುಮ್ಮಜ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಅನಾಮಧೇಯ ವ್ಯಕ್ತಿ ವಾರಸುದಾರರ ಪತ್ತೆಗೆ ಸಾರ್ವಜನಿಕರಲ್ಲಿ ವಿಜಯಪುರ ಗ್ರಾಮೀಣ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸಪೇಕ್ಟರ್ ಅವರು ಮನವಿ ಮಾಡಿಕೊಂಡಿದ್ದಾರೆ.

ಪತ್ತೆಯಾದ ವ್ಯಕ್ತಿಯು 5 ಪೂಟ್ ಎತ್ತರ, ಸಾಧಾರಣ ಮೈಕಟ್ಟು, ನೆಟ್ಟನೆಯ ಮೂಗು, ಕಪ್ಪು ಕೂದಲು, ಶರ್ಟ್, ಪ್ಯಾಂಟ್ ಧರಿಸಿದ್ದು, ಈ ಚಹರೆಯುಳ್ಳ ವ್ಯಕ್ತಿಯ ವಾರಸುದಾರರು ಪತ್ತೆಯಾದಲ್ಲಿ ಸಾರ್ವನಜಿಕರು ವಿಜಯಪುರ ಗೋಲಗುಮ್ಮಜ್ ಠಾಣೆಯ ದೂರವಾಣಿ ಸಂಖ್ಯೆ: 08352–250252, 08352–253100, 08352–250152 ಹಾಗೂ 0831–2405201ಗೆ ಸಂಪರ್ಕಿಸಬಹುದಾಗಿದೆ ಎಂದು ಗ್ರಾಮೀಣ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸಪೇಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಖ್ಯಮಂತ್ರಿ ಜಿಲ್ಲಾ ಪ್ರವಾಸ

**ವಿಜಯಪುರ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೆಪ್ಟೆಂಬರ್ 6ರಂದು ವಿಜಯಪುರ ಜಿಲ್ಲಾ ಪ್ರವಾಸ ಕೈಗೊಂಡು, ಆಲಮಟ್ಟಿಯಲ್ಲಿನ ಲಾಲ್ ಬಹಾದ್ದೂರ್ ಶಾಸ್ತ್ರೀ ಸಾಗರದ ಕೃಷ್ಣೆಯ ಜಲಧಿಗೆ ಗಂಗಾ ಪೂಜೆ ಹಾಗೂ ಬಾಗಿನ ಅರ್ಪಣೆ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಸೆಪ್ಟೆಂಬರ್ 6ರ ಮಧ್ಯಾಹ್ನ 12ಗಂಟೆಗೆ ವಿಜಯಪುರ ಜಿಲ್ಲೆಯ ನಿಡಗುಂದಿ ತಾಲೂಕಿನ ಆಲಮಟ್ಟಿ ಡ್ಯಾಂಗೆ ಹೆಲಿಕ್ಯಾಪ್ಟರ್ ಮೂಲಕ ಆಗಮಿಸುವ ಅವರು,ಕೃಷ್ಣೆಯ ಜಲಧಿಗೆ ಗಂಗಾ ಪೂಜೆ ಹಾಗೂ ಬಾಗಿನ ಅರ್ಪಣೆ ಸಮಾರಂಭ ನೆರವೇರಿಸಿ, ಅದೇ ದಿನ ಮಧ್ಯಾಹ್ನ 3ಗಂಟೆಗೆ ಕೊಪ್ಪಳ ಜಿಲ್ಲೆಗೆ ತೆರಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಒಳಮೀಸಲಾತಿ ಹಂಚಿಕೆ ತಾರತಮ್ಯ ಖಂಡಿಸಿ ಪ್ರತಿಭಟನೆ



**ಬಸವನಬಾಗೇವಾಡಿ:** ಪಟ್ಟಣದಲ್ಲಿ ಕರ್ನಾಟಕ ಪ್ರದೇಶ ಬಂಜಾರ ಸೇವಾ ಸಂಘ ಹಾಗೂ ತಾಲೂಕು ಬಂಜಾರ ಸಂಘದಿಂದ ಒಳಮೀಸಲಾತಿ ಹಂಚಿಕೆ ವಿಚಾರದಲ್ಲಿ ಸರ್ಕಾರದ ತಾರತಮ್ಯವನ್ನು ಖಂಡಿಸಿ ಲಂಬಾಣಿ, ಭೋವಿ, ಕೊರಮ, ಕೊರಚ ಸಮುದಾಯಗಳಿಗೆ ನ್ಯಾಯ ಒದಗಿಸುವಂತೆ ಆಗ್ರಹಿಸಿ ಬುಧವಾರ ಬೃಹತ್ ಪ್ರತಿಭಟನೆ ಬಂಜಾರ ಸಮಾಜ ಬಾಂಧವರು ಮಾಡಿದರು.

ಪಟ್ಟಣದ ಸಂತ ಸೇವಾಲಾಲ ವೃತ್ತದಿಂದ ಪ್ರತಿಭಟನೆ ಮೆರವಣಿಗೆ ಆರಂಭಿಸಿದ ಸಮಾಜ ಬಾಂಧವರು ಡಾ.ಬಿ.ಆರ್.ಅಂಬೇಡ್ಕರ ವೃತ್ತದ ಮಾರ್ಗವಾಗಿ ಗಣಪತಿ ವೃತ್ತದ ಮೂಲಕ ಬಸವೇಶ್ವರ ವೃತ್ತದವರೆಗೂ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಆಗಮಿಸಿ ಬಸವೇಶ್ವರ ವೃತ್ತದಲ್ಲಿ ಜಮಾಯಿಸಿದರು.

ಬಸವೇಶ್ವರ ವೃತ್ತದಲ್ಲಿ ಜರುಗಿದ ಪ್ರತಿಭಟನೆ ಸಭೆ ಉದ್ದೇಶಿಸಿ ಕರ್ನಾಟಕ ಪ್ರದೇಶ ಬಂಜಾರಾ ಸೇವಾ ಸಂಘದ ಜಿಲ್ಲಾಧ್ಯಕ್ಷ ಡಾ.ಬಸವರಾಜ ಚವ್ಹಾಣ, ತಾಲೂಕಾಧ್ಯಕ್ಷ ಬಾಳು ರಾಠೋಡ ಮಾತನಾಡಿ, ಒಳಮೀಸಲಾತಿ ಕುರಿತು ನೀಡಿದ ವರದಿ ಅವೈಜ್ಞಾನಿಕ, ದೋಷಪೂರಿತವಾಗಿರುವ ವರದಿಯನ್ನು ಸರ್ಕಾರ ಜಾರಿಗೆ ತರಲು ಹೊರಟಿರುವದು ಬಂಜಾರ ಸಮಾಜ ಸೇರಿದಂತೆ 63 ಸಮಾಜ ಬಾಂಧವರಿಗೆ ಅನ್ಯಾಯವಾಗುತ್ತಿದೆ. ರಾಜ್ಯದಲ್ಲಿ ಬಸವ ತತ್ವದ ಕಾಯಕದ ತತ್ವ ಅಳವಡಿಸಿಕೊಂಡಿರುವ ಬಂಜಾರ ಸಮಾಜ ಬಾಂಧವರಿಗೆ ಈಚೆಗೆ ಸರ್ಕಾರ ಒಳಮೀಸಲಾತಿ ಕುರಿತು ತೆಗೆದುಕೊಂಡ ನಿರ್ಣಯ ಅನ್ಯಾಯವಾಗಿದೆ. ರಾಜ್ಯದಲ್ಲಿ ನಮ್ಮ ಸಮಾಜಕ್ಕೆ ಒಂದು ಲೋಕಸಭೆಗೆ ಟಿಕೆಟ್ ನೀಡಲಿಲ್ಲ. ನಮ್ಮ ಸಮಾಜದಿಂದ ಹೆಚ್ಚು ಜನರು ಶಾಸಕರು ಆಯ್ಕೆಯಾದರೂ ಒಂದು ಸಚಿವ ಸ್ಥಾನ ನೀಡಿಲ್ಲ. ಇದೀಗ ಒಳಮೀಸಲಾತಿಯಲ್ಲಿಯೂ ನಮ್ಮ ಸಮಾಜಕ್ಕೆ ಸರ್ಕಾರ ಅನ್ಯಾಯ ಮಾಡಲು ಹೊರಟಿದೆ. ಸೆ.6 ರಂದು ಜಿಲ್ಲಾ ಮಟ್ಟದಲ್ಲಿ, ಸೆ.10 ರಂದು ಬೆಂಗಳೂರಿನ ಫ್ರಿಡಂ ಪಾರ್ಕಿನಲ್ಲಿ ನಮ್ಮ ಬಾಂಧವರು ಸರ್ಕಾರದ ವಿರುದ್ಧ ಹೋರಾಟ ಮಾಡಲಿದ್ದಾರೆ ಎಂದರು.

ಜಿಪಂ ಮಾಜಿ ಸದಸ್ಯ ಮಲ್ಲಿಕಾರ್ಜುನ ನಾಯಕ ಮಾತನಾಡಿ, ಒಳಮೀಸಲಾತಿಯಲ್ಲಿ ನಮ್ಮ ಸಮಾಜಕ್ಕೆ ಅನ್ಯಾಯವಾಗಿದೆ. 2011 ರ ಜನಗಣತಿ ಪ್ರಕಾರ ರಾಜ್ಯದಲ್ಲಿ 25ಲಕ್ಷ ಬಂಜಾರ ಸಮಾಜ ಬಾಂಧವರು ಇದ್ದಾರೆ. ಸರ್ಕಾರ ಇದೀಗ ತಮ್ಮ ಸಮೀಕ್ಷೆಯಲ್ಲಿ 11 ಲಕ್ಷ ತೋರಿಸಿದೆ. ಸರ್ಕಾರ ಸರಿಯಾಗಿ ಸಮೀಕ್ಷೆ ಮಾಡದೇ ನಮ್ಮ ಸಮಾಜಕ್ಕೆ ಅನ್ಯಾಯ ಮಾಡಿದೆ. ನಮ್ಮ ವಿಜಯಪುರ ಜಿಲ್ಲೆಯಲ್ಲಿಯೇ 3.14 ಲಕ್ಷ ಸಮಾಜ ಬಾಂಧವರು ಇದ್ದಾರೆ. ಸರ್ಕಾರ ಇದನ್ನು ಅರಿತುಕೊಂಡು ನಮ್ಮ ಸಮಾಜಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಬೇಕೆಂದು ಆಗ್ರಹಿಸಿದರು.

ಪುರಸಭೆ ಸದಸ್ಯ ನೀಲು ನಾಯಕ ಮಾತನಾಡಿ, ಕಾಂಗ್ರೆಸ್ ಸರ್ಕಾರ ಪರಿಶಿಷ್ಟ ಜಾತಿ ಜನಾಂಗದಲ್ಲಿ ಒಳಮೀಸಲಾತಿ ತರುವ ಮೂಲಕ ಜಗಳ ಹಚ್ಚುವ ಕಾರ್ಯ ಮಾಡುತ್ತಿದೆ. ಸರ್ಕಾರ ಒಳಮೀಸಲಾತಿ ಕೈಬಿಟ್ಟು ಮೊದಲಿನಂತೆ ಇರುವ ಮೀಸಲಾತಿಯನ್ನು ಮುಂದುವರಿಸಬೇಕು. ನಮ್ಮ ಸಮಾಜ ಬಾಂಧವರು ಶ್ರಮಜೀವಿಗಳಾಗಿದ್ದಾರೆ. ತಾಂಡಾದಲ್ಲಿ ರಸ್ತೆ, ಕುಡಿಯುವ ನೀರು, ವಾಸಕ್ಕೆ ಯೋಗ್ಯವಾದ ಮನೆಗಳು ನಮ್ಮ ಬಾಂಧವರಿಗೆ ಇಲ್ಲ. ಇದನ್ನು ಸರ್ಕಾರ ಅರಿತುಕೊಂಡು ಸಮಾಜಕ್ಕೆ ನ್ಯಾಯ ಒದಗಿಸಬೇಕು. ಕಾಂಗ್ರೆಸ್ ಸರ್ಕಾರಕ್ಕೆ ಮೂರು ವರ್ಷವಾಗುತ್ತಿದೆ. ನಮ್ಮ ಸಮಾಜಕ್ಕೆ ನ್ಯಾಯ ಒದಗಿಸದೇ ಹೋದರೆ ಸರ್ಕಾರಕ್ಕೆ ಮೂರಾಬಟ್ಟೆ ಆರಂಭವಾಗುವದರಲ್ಲಿ ಸಂದೇಹವಿಲ್ಲ ಎಂದರು.

.ಮನವಿ ಪತ್ರವನ್ನು ತಹಸೀಲ್ದಾರ ವೈ. ಎಸ್.ಸೋಮನಕಟ್ಟಿ ಸ್ವೀಕರಿಸಿದರು ಪ್ರತಿಭಟನೆಯಲ್ಲಿ ಮಹೇಂದ್ರ ನಾಯಕ, ಸಂತೋಷ ನಾಯಕ, ಸುರೇಶ ನಾಯಕ, ರಾಜು ನಾಯಕ, ಶಿವಾಜಿ ಲಮಾಣಿ, ಅರವಿಂದ ನಾಯಕ, ಮೋಹನ ರಜಪೂತ,ರುಕ್ಮಿಣಿ ರಾಠೋಡ, ಭಾಗ್ಯ ರಾಠೋಡ, ಶ್ರೀದೇವಿ ಲಮಾಣಿ, ರವಿ ಲಮಾಣಿ, ಅಪ್ಪು ನಾಯಕ, ನೇಮು ಲಮಾಣಿ, ಹೇಮು ಚವ್ಹಾಣ, ಈಶ್ವರ ಜಾಧವ, ಪುನೀತ ಲಮಾಣಿ, ಹರಿಲಾಲ ನಾಯಕ, ಶ್ರೀಕಾಂತ ರಾಠೋಡ, ಬಾಬು ನಾಯಕ, ಶಿವು ಪವಾರ, ಪ್ರಕಾಶ ರಾಠೋಡ, ನಾನು ರಾಠೋಡ, ಶಿವಾಜಿ ರಾಠೋಡ, ಕಿರಣ ಚವ್ಹಾಣ, ವಿನೋದ ಚವ್ಹಾಣ, ಗಣೇಶ ಚವ್ಹಾಣ, ಆನಂದ ಚವ್ಹಾಣ, ಅಶೋಕ ಕಾರಬಾರಿ, ಅನಿಲ ಚವ್ಹಾಣ, ಮನೋಜ ಚವ್ಹಾಣ, ರಾಮು ಜಾಧವ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಮದ್ಯ ಮಾರಾಟ, ಸಾಗಾಟ ನಿಷೇಧ

**ಗದಗ:** ಗದಗ ಜಿಲ್ಲೆಯಾದ್ಯಂತ ಸೆಪ್ಟೆಂಬರ್ 5 ರಂದು ಈದ್ ಮಿಲಾದ್ ಹಬ್ಬದ ಅಂಗವಾಗಿ ಮೆರವಣಿಗೆ ಹಾಗೂ ಸಮಾರಂಭಗಳು ಜರುಗುತ್ತಿದ್ದು ಆ ಕಾಲಕ್ಕೆ ಜಿಲ್ಲೆಯಾದ್ಯಂತ ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯಾದ್ಯಂತ ಸೆಪ್ಟೆಂಬರ್ 5 ರಂದು ಬೆಳಿಗ್ಗೆ 6 ಗಂಟೆಯಿಂದ ಮಧ್ಯರಾತ್ರಿಯವರೆಗೆ ಮದ್ಯ ಮಾರಾಟ ಮತ್ತು ಸಾಗಾಟ ನಿಷೇಧಿಸಲಾಗಿದೆ. ಸದರ ದಿನಗಳಂದು ಗದಗ ಜಿಲ್ಲೆಯ ಯಾವತ್ತೂ ಬಾರುಗಳು, ಕ್ಲಬ್ಬುಗಳು, ಬಿಯರ್, ಭಾರತೀಯ ತಯಾರಿಕೆಯ ಮದ್ಯದ ಅಂಗಡಿಗಳನ್ನು ಮೇಲ್ಕಾಣಿಸಿದ ಅವಧಿಯಲ್ಲಿ ಮುಚ್ಚತಕ್ಕದ್ದು. ಅಲ್ಲದೇ ಪರಿಸ್ಥಿತಿಗೆ ಅನುಗುಣವಾಗಿ ಸಾರ್ವಜನಿಕ ಶಾಂತತೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ವಲಯ ಅಬಕಾರಿ ಇನ್‌ಪೆಕ್ಟರ್ ಹಾಗೂ ಅಬಕಾರಿ ಉಪ–ಆಯುಕ್ತರು, ಕರ್ನಾಟಕ ಅಬಕಾರಿ ಕಾಯ್ದೆಯನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಗದಗ:** 2025–26 ನೇ ಸಾಲಿಗೆ ಮೀನುಗಾರಿಕೆ ಇಲಾಖೆ ವತಿಯಿಂದ ರಾಜ್ಯ ವಲಯ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಕ್ಕೆ ಸೇರಿದ ಮೀನುಗಾರಿಕೆ ಸಹಕಾರಿ ಸಂಘದ ಸದಸ್ಯರು, ನೋಂದಾಯಿತ ಮೀನು ಮಾರಾಟಗಾರರಿಗೆ, ಮೀನು ಸಾಗಾಣಿಕೆ ಮತ್ತು ಮಾರಾಟಕ್ಕಾಗಿ ನಾಲ್ಕು ಚಕ್ರದ ವಾಹನ ಖರೀದಿಸಲು ಗದಗ ಜಿಲ್ಲೆಗೆ ಪರಿಶಿಷ್ಟ ಜಾತಿ–02 ಮತ್ತು ಪರಿಶಿಷ್ಟ ಪಂಗಡ–01 ಗುರಿ ನಿಗದಿಪಡಿಸಿದ್ದು, ಯೋಜನೆಯ ನಿಯಮಾವಳಿ ಅನ್ವಯ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಕೊನೆಯ ದಿನ ಸೆಪ್ಟೆಂಬರ್ 20 ಆಗಿದ್ದು ಗದಗ, ರೋಣ, ಗಜೇಂದ್ರಗಡ, ನರಗುಂದ ತಾಲ್ಲೂಕಿಗೆ ಸಂಬಂಧಿಸಿದಂತೆ ಮೀನುಗಾರಿಕೆ ಸಹಾಯಕ ನಿರ್ದೇಶಕರು ಗದಗ ಕಛೇರಿಗೆ ಹಾಗೂ ಶಿರಹಟ್ಟಿ, ಮುಂಡರಗಿ, ಲಕ್ಷೆ ?ಮೇಶ್ವರ ತಾಲ್ಲೂಕಿಗೆ ಸಂಬಂಧಿಸಿದಂತೆ ಮೀನುಗಾರಿಕೆ ಸಹಾಯಕ ನಿರ್ದೇಶಕರು ಮುಂಡರಗಿ ಕಛೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ: ಮೀನುಗಾರಿಕೆ ಸಹಾಯಕ ನಿರ್ದೇಶಕರು ಗದಗ/ಮುಂಡರಗಿ ಮೊಬೈಲ್ ದೂರವಾಣಿ ಸಂಖ್ಯೆ:8095792530 ಸಂಪರ್ಕಿಸಬಹುದಾಗಿದೆ.

## ಅಂತಿಮ ಆಯ್ಕೆಪಟ್ಟಿ ಪ್ರಕಟ

**ಹಾವೇರಿ:** ರಾಷ್ಟ್ರೀಯ ಆರೋಗ್ಯ ಅಭಿಯಾನ ದಡಿಯಲ್ಲಿ ಖಾಲಿ ಇರುವ ಒಂಭತ್ತು ಮಹಿಳಾ ಶುಶ್ರೂಷಾಧಿಕಾರಿಗಳ ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿಯನ್ನು ಹಾವೇರಿ ಜಿಲ್ಲಾ ಜಾಲತಾಣದಲ್ಲಿ www.haveri.nic.in ಪ್ರಕಟಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಹಾವೇರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿ ಸಂಪರ್ಕಿಸಬಹದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಪಠ್ಯೇತರ ಚಟುವಟಿಕೆ ಉದ್ಘಾಟನೆ

**ಬಾಗಲಕೋಟೆ :** ನಗರದ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಸಕ್ತ ಸಾಲಿನ ಐ.ಕ್ಯೂ.ಎ.ಸಿ, ಸಾಂಸ್ಕೃತಿಕ, ಕ್ರೀಡಾ, ಎನ್‌ಎಸ್‌ಎಸ್, ರೆಡ್‌ಕ್ರಾಸ್, ಸ್ಕೌಟ್ಸ್ & ಗೈಡ್ಸ್ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ಹಾಗೂ ಬಿ.ಎ ಮತ್ತು ಬಿ.ಕಾಂ ಪ್ರಥಮ ವರ್ಷದ ವಿದ್ಯಾರ್ಥಿನಿಯರಿಗೆ ಸ್ವಾಗತ ಸಮಾರಂಭವನ್ನು ಇದೇ ಸೆಪ್ಟೆಂಬರ 6 ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಅಂದು ಕಾಲೇಜಿನ ಸಭಾಭವನದಲ್ಲಿ ಜರುಗುವ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಶಾಸಕರು ಹಾಗೂ ಬಿಟಿಡಿಎ ಅಧ್ಯಕ್ಷ ಎಚ್. ವಾಯ್.ಮೇಟಿ, ಅತಿಥಿಗಳಾಗಿ ರೇಣುಕಾ ನ್ಯಾಮಗೌಡರ ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಚಾರ್ಯ ಪ್ರೊ.ಗೀತಾಂಜಲಿ ಶ್ರೀನಿವಾಸರಾವ ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ನಾಳೆ ಕೃಷ್ಣೆಯ ಜಲದಿಗೆ ಮುಖ್ಯಮಂತ್ರಿ ಬಾಗಿನ ಅರ್ಪಣೆ

**ಬಾಗಲಕೋಟೆ:** ಆಲಮಟ್ಟಿ ಆಣೆಕಟ್ಟಿನಲ್ಲಿ ಗರಿಷ್ಠ ಮಟ್ಟಕ್ಕೆ ನೀರು ಸಂಗ್ರಹಣೆಯಾದ ಹಿನ್ನಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೆಪ್ಟೆಂಬರ 6 ರಂದು ಬೆಳಿಗ್ಗೆ 11 ಗಂಟೆಗೆ ಆಲಮಟ್ಟಿಯ ಲಾಲ್ ಬಹದ್ದೂರ ಶಾಸ್ತ್ರೀ ಸಾಗರದ ಕೃಷ್ಣೆ ಜಲದಿಗೆ ಗಂಗಾ ಪೂಜೆ ಹಾಗೂ ಬಾಗಿನ ಅರ್ಪಣೆ ಸಲ್ಲಿಸಲಿದ್ದಾರೆ.ಕಾರ್ಯಕ್ರಮದಲ್ಲಿ ಉಪ ಮುಖ್ಯಮಂತ್ರಿ ಹಾಗೂ ಜಲ ಸಂಪನ್ಮೂಲ ಮತ್ತು ನಗರಾಭಿವೃದ್ಧಿ ಸಚಿವ ಡಿ.ಕೆ.ಶಿವಕುಮಾರ ಘನ ಉಪಸ್ಥಿತರಿರುವರು. ಅಧ್ಯಕ್ಷತೆಯನ್ನು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಸಚಿವ ಶಿವಾನಂದ ಪಾಟೀಲ, ಗೌರವ ಉಪಸ್ಥಿತಿಯನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಡಾ.ಎಂ.ಬಿ.ಪಾಟೀಲ, ಅಬಕಾರಿ ಸಚಿವರ ಆರ್.ಬಿ.ತಿಮ್ಮಾಪೂರ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿಜಯಪುರ ಜಿಲ್ಲೆಗೆ ಸಂಬಂಧಿಸಿದ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ರವಿಕುಮಾರ ಎನ್, ವಿಧಾನ ಪರಿಷತ್ ಶಾಸಕ ಪ್ರಕಾಶ ಹುಕ್ಕೇರಿ, ಮುದ್ದೇಬಿಹಾಳ ಶಾಸಕ ಹಾಗೂ ರಾಜ್ಯ ಸಾಬೂನು ಮತ್ತು ಮಾರ್ಜಕ ನಿಯಮಿತದ ಅಧ್ಯಕ್ಷ ಅಪ್ಪಾಜಿ ನಾಡಗೌಡ, ಸಂಸದ ರಮೇಶ ಜಿಗಜಿನ್ನಿ, ರಾಜ್ಯ ಸಭಾ ಸದಸ್ಯೆ ಡಾ.ಸುಧಾ ಮೂರ್ತಿ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

ಬಾಗಲಕೋಟೆ ಜಿಲ್ಲೆಗೆ ಸಂಬಂಧಿಸಿದ ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ, ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷ ಜೆ.ಟಿ.ಪಾಟೀಲ, ಹುನಗುಂದ ಶಾಸಕ ಹಾಗೂ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ. ಅಲ್ಲದೇ ಜಲಸಂಪನ್ಮೂಲ ಇಲಾಖೆಯ ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಸರಕಾರದ ಕಾರ್ಯದರ್ಶಿ ಕೃಷ್ಣಮೂರ್ತಿ ಕುಲಕರ್ಣಿ, ಕೆಬಿಜೆಎನ್‌ಎಲ್ ವ್ಯವಸ್ಥಾಪಕ ನಿರ್ದೇಶಕ ಕೆ.ಪಿ.ಮೋಹನರಾಜ್, ಮುಖ್ಯ ಇಂಜಿನೀಯರ್ ಬಸವರಾಜ್ ಡಿ. ಭಾಗವಹಿಸಲಿದ್ದಾರೆ.

## ಲೋಕಾಯುಕ್ತ ಜನ ಸಂಪರ್ಕ ಸಭೆ

**ಗದಗ:** ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಸೆಪ್ಟೆಂಬರ್ 10 ರ ಬುಧವಾರ ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ತಹಶೀಲ್ದಾರ ಕಚೇರಿ ಸಭಾಭವನ ಶಿರಹಟ್ಟಿಯಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಸದರಿ ದಿನಾಂಕದಂದು ಸಾರ್ವಜನಿಕರಿಂದ ದೂರು/ ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಗದಗ ಕರ್ನಾಟಕ ಲೋಕಾಯುಕ್ತ ಪೊಲೀಸ ಉಪಾಧೀಕ್ಷಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಬಾಗ ಮತಕ್ಷೇತ್ರದಲ್ಲಿ ಅಭಿವೃದ್ದಿಗಾಗಿ ಹೆಚ್ಚಿನ ಒತ್ತು: ಪ್ರೀಯಾಂಕಾ ಜಾರಕಿಹೊಳಿ



**ರಾಯಬಾಗ:** ಚಿಕ್ಕೋಡಿ ಲೋಕಸಭೆ ವ್ಯಾಪ್ತಿಯ ರಾಯಬಾಗ ಮತಕ್ಷೇತ್ರದಲ್ಲಿ ಅಭಿವೃದ್ದಿಗಾಗಿ ಹೆಚ್ಚಿನ ಒತ್ತು ನೀಡಲಾಗಿದ್ದು, ರಸ್ತೆ, ಹೈಮಾಸ್ಟ್ ವಿದ್ಯುತ್ ದೀಪ ಅಳವಡಿಕೆ ಸೇರಿದಂತೆ ಅನೇಕ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಸಂಸದೆ ಪ್ರಿಯಾಂಕ ಜಾರಕಿಹೊಳಿ ಹೇಳಿದರು.

ಬುಧವಾರ ಸಾಯಂಕಾಲ ತಾಲೂಕಿನ ಚಿಂಚಲಿ ಪಟ್ಟಣದಲ್ಲಿ ಕೇಂದ್ರ ಸರ್ಕಾರದ ಅನುದಾನದಲ್ಲಿ ಮಂಜೂರಾದ 3 ಕೋಟಿ 92 ಲಕ್ಷ ರೂ. ಅನುದಾನದಲ್ಲಿ ಕಸ ವಿಲೇವಾರಿ ಘಟಕ ನಿರ್ಮಾಣ ಕಾಮಗಾರಿ ಭೂ ಪೂಜೆ ನೆರವೇರಿಸಿ, ಪೌರಕಾರ್ಮಿಕರಿಗೆ ಕಿಟ್‌ಗಳನ್ನು ವಿತರಿಸಿ ಮಾತನಾಡಿದ ಅವರು, ಪಟ್ಟಣ ಸ್ವಚ್ಛತೆ ಕಾಪಾಡಲು ಪ್ರತಿಯೊಬ್ಬರು ಸೂಕ್ತ ರೀತಿಯಲ್ಲಿ ಕಸವನ್ನು ವಿಲೇವಾರಿ ಮಾಡಲು ಪೌರಕಾರ್ಮಿಕರಿಗೆ ಸಹಕರಿಸಬೇಕು. ನಾವು ಚುನಾವಣೆಯಲ್ಲಿ ಕೊಟ್ಟ ಭರವಸೆಯನ್ನು ಒಂದೊಂದಾಗಿ ಈಡೇರಿಸುತ್ತಿದ್ದು, ಬರುವ ದಿನಗಳಲ್ಲಿ ಇನ್ನು ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಪ್ಪಾಸಾಹೇಬ ಕುಲಗುಡೆ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಹಾವೀರ ಮೊಹಿತೆ, ಪ.ಪಂ.ಅಧ್ಯಕ್ಷೆ ಕವಿತಾ ಯಡ್ರಾಂವೆ, ಮುಖ್ಯಾಧಿಕಾರಿ ವಿ.ಆರ್.ಬಳ್ಳಾರಿ, ಜಿತೇಂದ್ರ ಜಾಧವ, ಶಿವನಗೌಡ ಪಾಟೀಲ, ಸಿದ್ದು ಬಂಡಗಾರ, ದಿಲೀಪ ಜಮಾದಾರ, ನಿರ್ಮಲಾ ಪಾಟೀಲ, ಹಾಜಿ ಮುಲ್ಲಾ, ಕುಮಾರ ಹಾರೂಗೇರಿ, ಮಹಾದೇವ ದಂಡಾಪೂರೆ, ಫಿರೋಜ ಮಕಾಂದಾರ, ರಮೇಶ ಹಾರೂಗೇರಿ, ಜಾಕೀರ ತರಡೆ, ಸುಲ್ತಾನ ಹೆಗಡೆ, ತನುಜಾ ಶಿಂಗೆ, ಸೇರಿ ಅನೇಕರು ಇದ್ದರು.

## ರೈತರಿಗೆ ಹೈನುಗಾರಿಕೆ, ಕುರಿ-ಆಡು ಹಾಗೂ ಕೋಳಿ ಸಾಕಾಣಿಕೆ ತರಬೇತಿ

**ವಿಜಯಪುರ:** ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವತಿಯಿಂದ ಜಿಲ್ಲೆಯ ರೈತ-ರೈತ ಮಹಿಳೆಯರಿಗೆ ಸೆ8ರಿಂದ 13ರವರೆಗೆ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಹೈನುಗಾರಿಕೆ, ಕುರಿ-ಆಡು ಹಾಗೂ ಕೋಳಿ ಸಾಕಾಣಿಕ ತರಬೇತಿ ಆಯೋಜಿಸಲಾಗಿದೆ. 6 ದಿನಗಳ ಕಾಲ ನಡೆಯುವ ಈ ತರಬೇತಿಯಲ್ಲಿ ಭಾಗವಹಿಸುವ ಆಸಕ್ತ ರೈತರು ದಿನಾಂಕ : 06-09-2025ರೊಳಗೆ ನೊಂದಾಯಿಸಿಕೊಳ್ಳಬೇಕು. ನೊಂದಣಿ ಹಾಗೂ ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಕೃಷಿ ಅಧಿಕಾರಿ ಶ್ರೀಮತಿ ಗೀತಾ ಭಜಂತ್ರಿ ಮೊ: 9986054750 ಇವರನ್ನು ಸಂಪರ್ಕಿಸುವಂತೆ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸ್ತು ಪ್ರದರ್ಶನ, ಮಾರಾಟ ಮೇಳ

**ವಿಜಯಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಇದೇ ಸೆಪ್ಟಂಬರ್ 8 ರಿಂದ 17ರವರೆಗೆ ನಗರದ ಇಂಡಿ ರಸ್ತೆಯಲ್ಲಿರುವ ಚಾಂದನಿ ಫಂಕ್ಷನ್ ಹಾಲ್‌ನಲ್ಲಿ ರಾಜ್ಯ ಮಟ್ಟದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳ ಹಮ್ಮಿಕೊಳ್ಳಲಾಗಿದೆ.

ವಸ್ತು ಪ್ರದರ್ಶನದಲ್ಲಿ ಖಾದಿ ಮಂಡಳಿಯಿಂದ ಧನಸಹಾಯ ಪಡೆದ ಫಲಾನುಭವಿಗಳು ವಸ್ತು ಪ್ರದರ್ಶನದಲ್ಲಿ ಭಾಗವಹಿಸುತ್ತಿದ್ದು, ವಿಜಯಪುರ, ಬಾಗಲಕೋಟೆ, ಗದಗ, ಬೆಳಗಾವಿ, ಧಾರವಾಡ, ದಾವಣಗೆರೆ. ಚಿತ್ರದುರ್ಗ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ತುಮಕೂರು, ಬಳ್ಳಾರಿ, ಕೊಪ್ಪಳ, ಬೀದರ, ಮಂಡ್ಯ ಮೈಸೂರು, ಹಾಗೂ ಹೊರ ರಾಜ್ಯಗಳಿಂದ ಅರಳೆ ಖಾದಿ, ಉಣ್ಣೆ ಖಾದಿ, ಪಾಲಿವಸ್ತ್ರ, ಶುದ್ಧ ಖಾದಿ ರೇಷ್ಮೆ ಸೀರೆಗಳು, ಕಸೂತಿ ಸೀರೆಗಳು, ಜಾಕೆಟ್, ಕರದಂಟು, ಸಿಹಿ ತಿಂಡಿಗಳು, ಡಿಜೈನ್ ಬ್ಯಾಗಗಳು, ಬಿದಿರು ಬೆತ್ತ, ರೆಡಿಮೇಡ್ ಶರ್ಟ್‌ಗಳು, ಪಾದರಕ್ಷೆಗಳಂತಹ ಖಾದಿ ಉತ್ಪನ್ನಗಳು ವಸ್ತು ಈ ಪ್ರದರ್ಶನದಲ್ಲಿ ಕಾಣಬಹುದಾಗಿದೆ.

ವಿಜಯಪುರ ಜಿಲ್ಲೆಯ ನಾಗರಿಕರು ಈ ವಸ್ತು ಪ್ರದರ್ಶನಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡಿ ಹೆಚ್ಚಿನ ಪ್ರಮಾಣದಲ್ಲಿ ವಸ್ತುಗಳನ್ನು ಖರೀದಿಸಿ ವಸ್ತು ಪ್ರದರ್ಶನಕ್ಕೆ ಪ್ರೋತ್ಸಾಹ ನೀಡಬೇಕೆಂದು ಖಾದಿ ಮಂಡಳಿಯ ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೈಲಹೊಂಗಲದಲ್ಲಿಂದು ಶಿಕ್ಷಕರ ದಿನಾಚಾರಣೆ

**ಬೈಲಹೊಂಗಲ:** ಜಿಲ್ಲಾ ಪಂಚಾಯತ ಬೆಳಗಾವಿ, ರಾಜ್ಯ ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಲಯ ಬೈಲಹೊಂಗಲ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳ ಕಾರ್ಯಾಲಯ ಬೈಲಹೊಂಗಲ ಇವುಗಳ ಆಶ್ರಯದಲ್ಲಿ ಸ.5 ರಂದು 10-30 ಕ್ಕೆ ಇಂಚಲ ಕ್ರಾಸ್ ಹತ್ತಿರದ ಶ್ರೀ ಶಿವಬಸವ ಕಲ್ಯಾಣ ಮಂಟಪದಲ್ಲಿ 2025-26 ನೇ ಸಾಲಿನ ತಾಲೂಕಾ ಮಟ್ಟದ ಶಿಕ್ಷಕರ ದಿನಾಚಾರಣೆ ಹಾಗೂ ಪ್ರತಿಭಾ ಕಾರಂಜಿ ಉದ್ಘಾಟನಾ ಸಮಾರಂಭವು ನಡೆಯಲಿದೆ. ಶಾಸಕರು, ಬಿಇಓ, ಶಿಕ್ಷಕರ ಸಂಘಟನೆಗಳು, ಗಣ್ಯರು, ಶಿಕ್ಷಕ/ಶಿಕ್ಷಕಿಯರು ಬಾಗವಹಿಸಲಿದ್ದಾರೆ ಎಂದು ಕಚೇರಿಯ ಪ್ರಕಟಣೆ ತಿಳಿಸಿದೆ.

# ನಾಳೆ ನೇತ್ರದಾನ ಜಾಗೃತಿ ಜಾಥಾ: ಡಾ.ದೀಪಾ

### ವಿಜ್ಞಾನಿಗಳಿಂದ ಕೃತಕ ನೇತ್ರಗಳ ಪ್ರಯೋಗ ಯಶಸ್ವಿ । ದುಬಾರಿ ವೆಚ್ಚದಲ್ಲಿ ಕೃತಕ ನೇತ್ರ ಜೋಡಣೆ




**ಜಮಖಂಡಿ:** ದೇಶದಲ್ಲಿ 1.2 ಮಿಲಿಯನ್ ಜನರು ಕುರುಡರಿದ್ದಾರೆ. ಕಣ್ಣಿನ ಮಸೂರ (ಕರಿಗುಡ್ಡೆ) ದೋಶದಿಂದ ಚಿಕ್ಕ ಮತ್ತು ಮಧ್ಯಮ ವಯಸ್ಸಿನವರು ಹೆಚ್ಚಿನ ಸಂಖ್ಯೆಯಲ್ಲಿ ಬಳಲುತ್ತಿದ್ದಾರೆ. ಅಂಥವರಿಗೆ ಪುನ; ದೃಷ್ಠಿ ಒದಗಿಸುವ ನಿಟ್ಟಿನಲ್ಲಿ ಸಮಸ್ಯೆ ಗಮನದಲ್ಲಿಟ್ಟುಕೊಂಡು 40ನೇ ರಾಷ್ಟ್ರೀಯ ನೇತ್ರದಾನ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ಡಾ. ದೀಪಾ ಎಸ್. ಮುಗಳಿ ಹೇಳಿದರು.

ನಗರದ ಕುಂಚನೂರ ರಸ್ತೆಯಲ್ಲಿರುವ ಎಂ.ಎಂ.ಜೋಷಿ ನೇತ್ರಾಲಯದ ಸಭಾಭವನದಲ್ಲಿ ಬುಧವಾರ ಸಂಜೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಸೆ. 6 ರಂದು ನಗರದಲ್ಲಿ ನೇತ್ರದಾನ ಜಾಗೃತಿ ಜಾಥಾ ಕಾರ್ಯಕ್ರಮ ಏರ್ಪಡಿಸಲಾಗಿದೆ. ಅಂದು ಬೆಳಿಗ್ಗೆ 9 ಗಂಟೆಗೆ ಬಸವ ಭವನದಿಂದ ಜಾಥಾ ಪ್ರಾರಂಭವಾಗಲಿದೆ. ನಗರದ ಪ್ಯಾರಾ ಮೆಡಿಕಲ್ ಕಾಲೇಜು, ಎಜಿಎಂ ಆಯುರ್ವೇದ ಕಾಲೇಜು ಸಹಿತ 11 ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಜಾಗೃತಿ ಜಾಥಾದಲ್ಲಿ ಭಾಗವಹಿಸಲಿದ್ದಾರೆ ಎಂದರು.

ದೇಶದಲ್ಲಿ ನೇತ್ರದಾನಕ್ಕಾಗಿ ಹೆಸರು ನೋಂದಾಯಿಸುವರ ಸಂಖ್ಯೆ ಬಹಳಿದೆ. ಆದರೆ ನೇತ್ರದಾನ ಮಾಡುವರ ಸಂಖ್ಯೆ ತೀರಾ ವಿರಳವಾಗಿದ್ದರಿಂದ ಸಮಸ್ಯೆ ಎದುರಾಗಿದೆ. ಸಾರ್ವಜನಿಕರಿಗೆ ತಿಳುವಳಿಕೆ ನೀಡುವ ಉದ್ದೇಶದಿಂದ ಜಾಥಾ ಹಮ್ಮಿಕೊಳ್ಳಲಾಗಿದೆ. ಮೃತಗೊಂಡ 4 ರಿಂದ 6 ಗಂಟೆ ವಳಗೆ ಕಣ್ಣುಗಳನ್ನು ಸ್ವೀಕರಿಸಬಹುದಾಗಿದೆ. ಕುಟುಂಬಸ್ಥರ ಸನ್ಮತಿ ಅವಶ್ಯವಾಗಿರುವದರಿಂದ ನೇತ್ರದಾನ ಸಮಯದಲ್ಲಿ ತೊಂದರೆ ಉಂಟಾಗುತ್ತಿದೆ. 2 ವರ್ಷದ ಮೇಲ್ಪಟ್ಟವರು ಯಾರಾದರೂ ನೇತ್ರದಾನ ಮಾಡಬಹುದು. ಸೋಂಕಿತರು ಹಾಗೂ ಸಾಂಕ್ರಾಮಿಕ ರೋಗದಿಂದ ಮೃತಪಟ್ಟವರ ನೇತ್ರಗಳನ್ನು ದಾನ ಮಾಡಲು ಬರುವದಿಲ್ಲ ಎಂದರು.

ನೇತ್ರದಾನ ಜಾಗೃತಿ ಜಾಥಾ ಕಾರ್ಯಕ್ರಮ ದಲ್ಲಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ಡಿವೈಎಸ್ಪಿ ರೋಶನ ಜಮೀರ, ತಹಸೀಲ್ದಾರ ಅನೀಲ ಬಡಿಗೇರ, ಪೌರಾಯುಕ್ತ ಜ್ಯೋತಿಗಿರೀಶ, ಐಎಂಎ ತಾಲೂಕಾಧ್ಯಕ್ಷ ಡಾ.ಹೆಚ್.ಜಿ. ದಡ್ಡಿ ಭಾಗವಹಿಸಲಿದ್ದಾರೆ. ಅಂದಾಜ 500ಕ್ಕೂ ಹೆಚ್ಚು ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ. ದೃಷ್ಠಿಗಾಗಿ ನಡಿಗೆ ಎಂಬ ಧೇಯ ವಾಕ್ಯದೊಂದಿಗೆ ಜಾಗೃತಿಜಾಥಾ ಕಾರ್ಯಕ್ರಮ ನಡೆಯಲಿದೆ ಎಂದರು. ನೇತ್ರತಜ್ಞೆ ಡಾ. ಪೂಜಾ ಗುಳೇದ ಮಾತನಾಡಿ, ಪಂಚೇಂದ್ರಿಯಗಲ್ಲಿ ಅಗ್ರಸ್ಥಾನದಲ್ಲಿರುವ ನೇತ್ರ ಮುಖ್ಯವಾದ ಅಂಗವಾಗಿದೆ. ವ್ಯಕ್ತಿ ಮರಣ ನಂತರವೂ ಇನ್ನೊಬ್ಬರಿಗೆ ಉಪಯೋಗವಾಗುವ ಪುಣ್ಯದ ಕೆಲಸಕ್ಕೆ ಎಲ್ಲರೂ ಮುಂದಾಗಬೇಕು ಸ್ವಯಂ ಪ್ರೇರಣೆಯಿಂದ ನೇತ್ರದಾನ ಮಾಡಬೇಕು. ವಿಜ್ಞಾನಿಗಳು ಕೃತಕ ನೇತ್ರಗಳನ್ನು ಸಿದ್ಧ ಪಡಿಸುತ್ತಿದ್ದಾರೆ ಅದರಿಂದ ರೋಗಿಗಳಿಗೆ ಹೆಚ್ಚಿನ ಹಣ ವೆಚ್ಚ ಮಾಡಬೇಕಾಗುತ್ತದೆ. ಆದರೆ ದಾನದಿಂದ ಬರುವ ಕಣ್ಣುಗಳನ್ನು ಅವಶ್ಯವಿರುವ ಇಬ್ಬರಿಗೆ ಉಚಿತವಾಗಿ ಜೋಡಿಸಲಾಗುವದು ಎಂದರು.

## ಬಿಮ್ಸ್: ಎಂ.ಬಿ.ಬಿ.ಎಸ್. ಪ್ರವೇಶ ಮಿತಿ 150 ರಿಂದ 200 ಕ್ಕೆ ಹೆಚ್ಚಳ

**ಬೆಳಗಾವಿ:** ಕರ್ನಾಟಕ ರಾಜ್ಯದಲ್ಲಿ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಬೆಳಗಾವಿಯು ಇಂಡಿಯಾ ಟುಡೇ ಇವರು ನಡೆಸಿದ ಬೆಸ್ಟ್ ಮೆಡಿಕಲ್ ಕಾಲೇಜು ಸರ್ವೆಯಲ್ಲಿ ರಾಜ್ಯಕ್ಕೆ 2ನೇ ಸ್ಥಾನ ಪಡೆದುಕೊಂಡಿರುವುದು ಬಿಮ್ಸ್ ಸಂಸ್ಥೆಗೆ ಹೆಮ್ಮೆಯ ವಿಷಯವಾಗಿದೆ. ಅದರ ಜೊತೆ-ಜೊತೆಗೆ 2025 -26ನೇ ಸಾಲಿಗೆ ಒಃಃಖ ಸೀಟಗಳ ಪ್ರವೇಶಾತಿ ಮಿತಿಯನ್ನು150 ರಿಂದ 200ಕ್ಕೆ ಹೆಚ್ಚಳವಾಗಿರುವುದು ಸಂಸ್ಥೆಗೆ ಮತ್ತೊಂದು ಹೆಮ್ಮೆಯ ಗರಿಯನ್ನು ಮೂಡಿಸಿದೆ.

ಕರ್ನಾಟಕದಲ್ಲಿ ಎರಡನೇ ದೊಡ್ಡ ಜಿಲ್ಲೆಯಾಗಿರುವ ಬೆಳಗಾವಿಯು ಎಲ್ಲ ಕ್ಷೇತ್ರಗಳಲ್ಲಿಯೂ ತನ್ನದೇ ಆದ ಕೊಡುಗೆಯನ್ನು ನೀಡುವುದರಲ್ಲಿ ಮುಂಚೂಣಿಯಲ್ಲಿದೆ. ಬೆಳಗಾವಿಯ ಇನ್ನೊಂದು ಭಾಗವಾದ ಬಿಮ್ಸ್ ಸಂಸ್ಥೆಯು ಬಡರೋಗಿಗಳ ಆರೈಕೆಯಲ್ಲಿ ಮುಂಚೂಣಿಯಲ್ಲಿದ್ದು, ಅದರ ಜೊತೆಗೆ ಶೈಕ್ಷಣಿಕವಾಗಿ ತನ್ನದೆ ಆದ ಸಾಲು ಸಾಲು ಸಾಧನೆಗಳಲ್ಲಿ ಮುಂದಿದೆ. ಅದರ ಸಾಧನೆಗೆ ಸಾಕ್ಷಿಯಾಗಿ ಇದೀಗ 2025 -26ನೇ ಸಾಲಿಗೆ MBBS ಸೀಟಗಳ ಪ್ರವೇಶಾತಿ ಮಿತಿಯನ್ನು 150 ರಿಂದ 200 ಕ್ಕೆ ಹೆಚ್ಚಿಸಿಕೊಂಡಿರುವುದು ಗ್ರಾಮೀಣ ಭಾಗದ ಬಡವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣಕ್ಕೆ ಅನುಕೂಲಕರವಾಗಲಿದೆ. National Medical Council, ನವದೆಹಲಿಯೂ 2025 -26ನೇ ಸಾಲಿಗೆ MBBS ಸೀಟಗಳ ಪ್ರವೇಶಾತಿ ಹೆಚ್ಚಳ ಮಾಡಿ ಅಧೀಕೃತ ಆದೇಶವನ್ನು ಹೊರಡಿಸಿದ್ದಾರೆ. ಇದಕ್ಕೆ ಕಾರಣೀಕರ್ತರಾದ ಭೋಧಕ ಹಾಗೂ ಭೋಧಕೇತರ ಸಿಬ್ಬಂದಿಯವರಿಗೆ ಈ ಸಂಸ್ಥೆಯ ಹೆಮ್ಮೆಯ ನಿರ್ದೇಶಕರಾದ ಡಾ. ಅಶೋಕ್ ಕುಮಾರ್ ಶೆಟ್ಟಿ ಅವರು ಅಭಿನಂದನೆಯನ್ನು ತಿಳಿಸಿದ್ದಾರೆ.

## ಗ್ರಾಮ ಆಡಳಿತಾಧಿಕಾರಿ ಅಮಾನತ್ತುಗೊಳಿಸಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಆದೇಶ

**ಧಾರವಾಡ:** ಆಧಾರ ಸೀಡಿಂಗ್ ಹಾಗೂ ಪೌತಿ ಆಂದೋಲನದ ಪ್ರಗತಿ ಪರಿಶೀಲನಾ ಸಭೆಗೆ ಗೈರುಹಾಜರಾಗಿದ್ದರಿಂದ ಹಾಗೂ ಸರ್ಕಾರಿ ಕೆಲಸದಲ್ಲಿ ನಿಷ್ಕಾಳಜಿತನ ತೋರಿರುವ ಕಾರಣ ನವಲಗುಂದ ತಾಲೂಕಿನ ಕುಮಾರಗೊಪ್ಪ ಸಾಜಾದ ಗ್ರಾಮ ಆಡಳಿತಾಧಿಕಾರಿ ಗಜೇಶ ದೇಸಾಯಿ ಅವರನ್ನು ಸೆಪ್ಟೆಂಬರ 2 ರಂದು ಅಮಾನತ್ತುಗೊಳಿಸಿ, ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಆದೇಶ ಹೊರಡಿಸಿದ್ದಾರೆ.

ಆಗಸ್ಟ್ 28, 2025 ರಂದು ಜರುಗಿದ ಆಧಾರ ಸೀಡಿಂಗ್ ಹಾಗೂ ಪೌತಿ ಆಂದೋಲನ ಕಾರ್ಯಕ್ರಮದ ಪ್ರಗತಿ ಪರಿಶೀಲನೆ ಸಭೆಗೆ ಹಾಜರಾಗುವಂತೆ ಸೂಚಿಸಿದ್ದರೂ, ಗ್ರಾಮ ಆಡಳಿತಾಧಿಕಾರಿ ಗಜೇಶ ದೇಸಾಯಿ ಅವರು ಸದರಿ ಸಭೆಗೆ ಹಾಜರಾಗದೇ ಅನಧಿಕೃತ ಗೈರು ಹಾಜರಿದ್ದು, ಕುಮಾರಗೊಪ್ಪ ಸಾಜಾಕ್ಕೆ ಸಂಬಂಧಿಸಿದ ಆಧಾರ ಜೋಡಣೆ ಹಾಗೂ ಇ-ಪೌತಿ ಆಂದೋಲನದಲ್ಲಿ ಪ್ರಗತಿ ಸಾಧಿಸಿರುವುದಿಲ್ಲ.

ಇ-ಪೌತಿ ಆಂದೋಲನಕ್ಕೆ ಸಂಬಂಧಿಸಿದಂತೆ ಒಟ್ಟು 44 ಅರ್ಜಿಗಳು ಸ್ವೀಕೃತವಾಗಿದ್ದು, ಅವುಗಳನ್ನು ನಿಗದಿತ ಅವಧಿಯೊಳಗೆ ವಿಲೇವಾರಿ ಮಾಡಿರುವುದಿಲ್ಲ. ಸರ್ಕಾರದ ಮಹತ್ವಾಕಾಂಕ್ಷಿಯ ಇ-ಪೌತಿ ಆಂದೋಲನ ಯೋಜನೆಯಡಿಯಲ್ಲಿ ನವಲಗುಂದ ತಾಲೂಕಿನ ಕುಮಾರಗೊಪ್ಪ ಸಾಜಾಕ್ಕೆ ಸಂಬಂಧಿಸಿದಂತೆ 44 ಅರ್ಜಿಗಳನ್ನು ಇಟ್ಟುಕೊಂಡು ವಿಲೇವಾರಿ ಮಾಡದೇ ವಿಳಂಬ ಮಾಡಿರುತ್ತಾರೆ.

ಆದ್ದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮಗಳು (ವರ್ಗೀಕರಣ ನಿಯಂತ್ರಣ ಮತ್ತು ಅಪೀಲು) 1957 ರ ನಿಯಮ 10 (1) ಡಿ ಪ್ರಕಾರ ಗ್ರಾಮ ಆಡಳಿತಾಧಿಕಾರಿ ಗಜೇಶ ದೇಸಾಯಿ ಅವರನ್ನು ಇಲಾಖಾ ವಿಚಾರಣೆ ಕಾಯ್ದಿರಿಸಿ ಅಮಾನತ್ತುಗೊಳಿಸಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಆದೇಶ ಹೊರಡಿಸಿದ್ದಾರೆ.

ಸರ್ಕಾರದ ಮಹಾತ್ವಾಕಾಂಕ್ಷಿ ಕಾರ್ಯಕ್ರಮಗಳನ್ನು ಮತ್ತು ಇ-ಪೌತಿ ಆಂದೋಲನದಂತಹ ಸಾರ್ವಜನಿಕ ಉಪಯುಕ್ತ ಕಾರ್ಯಕ್ರಮಗಳನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಬೇಕು. ಮೇಲಾಧಿಕಾರಿಗಳ ನಿರ್ದೇಶನಗಳನ್ನು ಪಾಲಿಸದೇ ಸರ್ಕಾರಿ ಕಾರ್ಯಕ್ರಮ, ಯೋಜನೆಗಳ ಅನುಷ್ಠಾನದಲ್ಲಿ ವಿಳಂಬ ತೋರುವ ಅಧಿಕಾರಿ ಹಾಗೂ ಸಿಬ್ಬಂದಿಗಳ ಕರ್ನಾಟಕ ನಾಗರೀಕ ಸೇವಾ ನಿಯಮಗಳ ಪ್ರಕಾರ ಕ್ರಮ ವಹಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಲಿಂ. ಶ್ರೀ ಹಾನಗಲ್ ಕುಮಾರ ಮಹಾಸ್ವಾಮಿಗಳ 158 ನೇ ಜಯಂತಿ ಮಹೋತ್ಸವ**

# ವೀರಶೈವ ಸಮಾಜದ ಬೆಳಕು ಲಿಂ.ಹಾನಗಲ್ ಕುಮಾರೇಶ್ವರರು



**ಬೈಲಹೊಂಗಲ:** ಶಿವಯೋಗ ಮಂದಿರ ಸ್ಥಾಪನೆಯೊಂದಿಗೆ ಅಂಧಕಾರದಲ್ಲಿದ್ದಂತ ಸಮಾಜವನ್ನು ಬೆಳಕಿನತ್ತ ಸಾಗಿಸಿದ ಕೀರ್ತಿ ಹಾನಗಲ್ ಕುಮಾರೇಶ್ವರರಿಗೆ ಸಲ್ಲುತ್ತದೆ ಎಂದು ಬೆಳಗಾವಿಯ ಕಾರಂಜಿ ಮಠದ ಪೂಜ್ಯ ಗುರುಸಿದ್ದ ಸ್ವಾಮೀಜಿ ಹೇಳಿದರು.

ಅವರು ಪಟ್ಟಣದ ಇಂಚಲ ರಸ್ತೆಯ ಶ್ರೀ ಶಿವಬಸವ ಕಲ್ಯಾಣ ಮಂಟಪದಲ್ಲಿ ನಡೆದ ಲಿಂ. ಶ್ರೀ ಹಾನಗಲ್ ಕುಮಾರ ಮಹಾಸ್ವಾಮಿಗಳ 158 ನೇ ಜಯಂತಿ ಮಹೋತ್ಸವ ಹಾಗೂ ನಾಗನೂರಿನ ಶ್ರೀ ರುದ್ರಾಕ್ಷಿಮಠದ ಶತಾಯುಷಿ ಡಾ. ಶಿವಬಸವ ಸ್ವಾಮೀಜಿ ಅವರ 31 ನೇ ಪುಣ್ಯಸ್ಮರಣೆ ಅಂಗವಾಗಿ ನಡೆದ ಮೂರು ದಿನದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಠಾಧೀಶರನ್ನು ತಯಾರಿಸುವ ಪೂರ್ವದಲ್ಲಿ ವಟುಗಳಿಗೆ ಮಾರ್ಗದರ್ಶನ ಕೊಡುವಂತಹ ವ್ಯವಸ್ಥೆ ಮಾಡಿದ ಶ್ರೇಯಸ್ಸು ಅವರಿಗೆ ಸಲುತ್ತದೆ. ಬಸವಾದಿ ಶರಣರ ವಿರಕ್ತ ಪರಂಪರೆಯನ್ನು ಜಗತ್ತಿನಾದ್ಯಂತ ಪಸರಿಸಲು ಹೆಚ್ಚು ಪರಿಶ್ರಮ ಪಟ್ಟ ಸಾಧಕರಾಗಿದ್ದು ಧರ್ಮ ಜಾಗೃತಿಯೊಂದಿಗೆ ಅಧ್ಯಾತ್ಮದಿಂದ ಮನುಕುಲಕ್ಕೆ ಉತ್ತಮ ಸಂದೇಶಗಳನ್ನು ನೀಡಿ ಜಗತ್ತಿಗೆ ಜ್ಯೋತಿಯಾಗಿ ಬೆಳಗಿದ್ದಾರೆ. ಸಂಗೀತ ಕ್ರಾಂತಿಯನ್ನುಂಟು ಮಾಡಲು ಗದಗದಲ್ಲಿ ವಿರೇಶ್ವರ ಪುಣ್ಯಾಶ್ರಮ ಸ್ಥಾಪಿಸಿ ಆ ಮೂಲಕ ಪಂಚಾಕ್ಷರಿ ಗವಾಯಿಗಳಂಥ ವಿದ್ವಾಂಸರನ್ನು ತಯಾರಿಸಿದ್ದು ಅವಿಸ್ಮರಣೀಯವಾಗಿದೆ ಎಂದರು.

ಶೇಗುಣಿಸಿ ವಿರಕ್ತಮಠದ ಡಾ. ಮಹಾತಪ್ರಭು ಸ್ವಾಮೀಜಿ ಅವರಿಂದ ಲಿಂ. ಹಾನಗಲ್ ಕುಮಾರೇಶ್ವರರ ಹೊಸೂರ ಮಡಿವಾಳೇಶ್ವರ ಮಠದ ಪೂಜ್ಯ ಗಂಗಾಧರ ಶ್ರೀಗಳು ಸಾನಿಧ್ಯ ವಹಿಸಿ ಮಾತನಾಡಿ, ಗುರು ವಿರಕ್ತರ ತಾರತಮ್ಯವನ್ನು ಹೋಗಲಾಡಿಸಲ್ಲಿ ಹಾನಗಲ್ ಕುಮಾರೇಶ್ವರರ ಪಾತ್ರ ಗಣನೀಯವಾಗಿದ್ದು ವೀರಶೈವ ಧರ್ಮವನ್ನು ಪ್ರಚಾರ ಮಾಡುವಲ್ಲಿ ಹಗಲಿರುಳು ದುಡಿದಿದ್ದಾರೆ. ಮಠಗಳ ಉತ್ತಮ ಪರಂಪರೆಗೂ ನಾಂದಿ ಹಾಡಿ ಕನ್ನಡ ನಾಡಿನ ವೈಭವವನ್ನು ರಾಷ್ಟ್ರದಲ್ಲಿ ಎತ್ತಿ ಹಿಡಿದಿದ್ದಾರೆ ಎಂದರು. ಶಾಖಾ ಮೂರುಸಾವಿರ ಮಠದ ಪ್ರಭು ನೀಲಕಂಠ ಸ್ವಾಮೀಜಿ, ಉಗರಗೋಳ ಶ್ರೀ ನಿವಾಣೇಶ್ವರ ಮಠದ ಪೂಜ್ಯ ಮಹಾಂತ ಸ್ವಾಮೀಜಿ, ಸಂಗೊಳ್ಳಿ ಹಿರೇಮಠದ ಗುರುಲಿಂಗ ಶಿವಾಚಾರ್ಯ ಸ್ವಾಮೀಜಿ, ಕುಲವಳ್ಳಿಯ ಶ್ರೀಸುಕುಮಾರ ಯೋಗಾಶ್ರಮದ ಓಂಕಾರೇಶ್ವರ ಗುರೂಜಿ ವೇದಿಕೆ ಮೇಲಿದ್ದರು. ಮಾಜಿ ಸಚಿವ ಶಿವಾನಂದ ಕೌಜಲಗಿ, ಸುಶೀಲಮ್ಮ ಕೌಜಲಗಿ, ಶಾಸಕ ಮಹಾಂತೇಶ ಕೌಜಲಗಿ, ಬಸವರಾಜ ಕೌಜಲಗಿ, ಗಿರೀಜಾ ಕೌಜಲಗಿ, ಸುರೇಖಾ ಕೌಜಲಗಿ, ಅನಿಶ್ ಕೌಜಲಗಿ, ಅನನ್ಯ ಕೌಜಲಗಿ ಆದಿರಾಜ ಕೌಜಲಗಿ, ನ್ಯಾಯವಾದಿ ಬಿ.ಆರ್.ಅಲಸಂದಿ, ಕುಮಾರ ದೇಶನೂರ, ಸೀಮಾ ಮೆಟಗುಡ್ಡ, ಸವಿತಾ ಶರಣಪ್ಪನವರ, ಮಂಗಲಾ ಅಲಸಂದಿ, ಶಾಂತಕ್ಕ ಗದಗ, ಪುಷ್ಪಾ ದೇಶನೂರ, ಸುಧಾ ಸಂಗೊಳ್ಳಿ, ಉಷಾ ಬೆಲ್ಲದ, ಜಯಶ್ರೀ ವಾಲಿ, ಡಾ.ಎ.ಎನ್.ಬಾಳಿ, ಬಿ.ಎಸ್. ಕಿವಡಸಣ್ಣವರ, ವೇ.ಮೂ.ವಿಶ್ವನಾಥ ಹಿರೇಮಠ ಮುಂತಾದವರು ಉಪಸ್ಥಿತರಿದ್ದರು. ಅನೇಕ ಗಣ್ಯರು, ಭಕ್ತರು ಪಾಲ್ಗೊಂಡಿದ್ದರು. ಮಹೇಶ ಬೆಲ್ಲದ ಸ್ವಾಗತಿಸಿದರು. ಶರಣೆ ಶೋಭಾ ಛಬ್ಬಿ ನಿರೂಪಿಸಿದರು. ಶಿವಕುಮಾರ ಹಂಪಣ್ಣವರ ವಂದಿಸಿದರು.

## ಪರಿಹಾರ ನೀಡದ ಸರ್ಕಾರ ಕಾರು ಜಪ್ತಿ

**ಜಮಖಂಡಿ:** ಭೂಸ್ವಾಧೀನ ಪರಿಹಾರ ನೀಡದ ಹಿನ್ನೆಲೆಯಲ್ಲಿ ಜಮಖಂಡಿ ಉಪವಿಭಾಗಾಧಿಕಾರಿಗಳ ಪಿರೋಪಕರಣ ನ್ಯಾಯಾಲಯದ ಆದೇಶದ ಮೇರೆಗೆ ನ್ಯಾಯವಾದಿ ಎಲ್.ಎನ್.ಸುನಗದ ಅವರು ಉಪವಿಭಾಗಾಧಿಕಾರಿಗಳ ಕಛೇರಿ ವಾಹನವನ್ನು ಜಪ್ತಿ ಮಾಡಲಾಗಿದೆ.

ಮುಧೋಳ ತಾಲೂಕಿನ ಬೆಳಗಲಿ ಗ್ರಾಮದ ಬಾಳಪ್ಪ ನಿಂಗಪ್ಪ ಕಪ್ಪಲಗುದ್ದಿ, ಧರೆಪ್ಪ ಮುತ್ತಪ್ಪ ಕಪ್ಪಲಗುದ್ದಿ ಅವರಿಗೆ ಸೇರಿದ 4.28 ಎಕರೆ ಜಮೀನನ್ನು ಕೆರೆ ನಿರ್ಮಾಣಕ್ಕೆಂದು 2005-06 ರಲ್ಲಿ ಭೂಸ್ವಾಧೀನ ಮಾಡಿಕೊಳ್ಳಲಾಗಿತ್ತು. ಘಟನೆ ನಡೆದು ಹಲವು ವರ್ಷ ಕಳೆದರು ಇಂದಿನವರೆಗೆ ಸರ್ಕಾರ ಪರಿಹಾರ ನೀಡಿಲ್ಲ. ಆದ್ದರಿಂದ ಬಾಳಪ್ಪ ಮತ್ತು ಧರೆಪ್ಪ ಕಪ್ಪಲಗುದ್ದಿ ರೈತರು ತಮ್ಮ ಜಮೀನಿಗೆ ಪರಿಹಾರ ದೊರಕಿಸಿಕೊಡುವಂತೆ ನ್ಯಾಯಲಕ್ಕೆ ಮನವಿ ಸಲ್ಲಿಸಿದ್ದರು. ಪ್ರಕರಣದ ತನಿಖೆ ನಡೆಸಿದ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶ ಸುಶಾಂತ ಮಹಾವೀರ ಚೌಗಲೆ ಅವರು ಬಡ್ಡಿ ಸಮೇತ 43,33,306-00 ಪರಿಹಾರ ನೀಡುವಂತೆ ಆದೇಶ ನೀಡಿದ್ದರು. ಆದರೆ ಇದುವರೆಗೂ ಪರಿಹಾರ ನೀಡದ ಹಿನ್ನೆಲೆಯಲ್ಲಿ ಉಪವಿಭಾಗಾಧಿರಿಕಾರಿಗಳ ಕಚೇರಿಯ ಚರಾಸ್ತಿ ಮುಟ್ಟುಗೋಲು ಹಾಕಿಕೊಳ್ಳಲು ಕೋರ್ಟ್ ಆದೇಶ ನೀಡಿತ್ತು. ಉಪವಿಭಾಗಾಧಿಕಾರಿಗಳ ಕಚೇರಿ ಬೀಗ ಹಾಕಿದ್ದರಿಂದ ಉಪವಿಭಾಗಾಧಿಕಾರಿಗಳ ವಾಹನವನ್ನು ಜಪ್ತ ಮಾಡಲಾಯಿತು. ವಾಹನದ ಕೀಲಿ ಕೈ ನೀಡದ ಹಿನ್ನಲೆಯಲ್ಲಿ ಬೇರೆ ವಾಹನ ಮೂಲಕ ಎಳೆದೊಯ್ಯಲಾಗಿದೆ. ಇದೇ ಸಂದರ್ಭದಲ್ಲಿ ನ್ಯಾಯಾಲಯದ ಸಿಬ್ಬಂದಿ, ಬೆಲಿಪ ಹಾಗೂ ನ್ಯಾಯವಾದಿಗಳು ಇದ್ದರು.

## ನಾಳೆ ಜಿಲ್ಲಾ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ

**ಧಾರವಾಡ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಂಯುಕ್ತವಾಗಿ ಆಯೋಜಿಸಿರುವ ಜಿಲ್ಲಾ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಧಾರವಾಡ ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಸೆಪ್ಟೆಂಬರ 6 ರಂದು ಬೆಳಿಗ್ಗೆ 10:30 ಗಂಟೆಯಿಂದ 11:30 ರವರೆಗೆ ನೊಡಲ್ ಅಧಿಕಾರಿ ಡಾ. ಸರಸ್ವತಿದೇವಿ ಭಗವತಿ ಅವರು ಸಂಘಟಿಸಲಿದ್ದಾರೆ.

ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ಪ್ರೌಢ ಶಾಲಾ ವಿಭಾಗ, ಪದವಿ ಪೂರ್ವ ಕಾಲೇಜು ವಿಭಾಗ ಹಾಗೂ ಪದವಿ-ಸ್ನಾತಕೋತ್ತರ ಪದವಿ ವಿಭಾಗದಲ್ಲಿ ಎಲ್ಲ ತಾಲೂಕುಗಳಲ್ಲಿ ಸ್ಪರ್ಧಿಸಿ, ತಾಲೂಕು ಮಟ್ಟದಲ್ಲಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಗಳಿಸಿದ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶ ನೀಡಲಾಗಿದೆ. ಮಹಾತ್ಮಾ ಗಾಂಧೀಜಿಯವರ 156ನೇ ಜಯಂತಿ ಅಂಗವಾಗಿ ತಾಲೂಕು ಮಟ್ಟದಲ್ಲಿ ಪ್ರಬಂಧ ಸ್ಪರ್ಧೆಯನ್ನು ಸೆ.04ರಂದು ಯಶಸ್ವಿಯಾಗಿ ಆಯೋಜಿಸಲಾಗಿತ್ತು. ತಾಲೂಕಿನಾದ್ಯಂತ ವಿವಿಧ ಶಾಲೆಗಳಿಂದ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ, ತಮ್ಮ ಚಿಂತನೆಗಳನ್ನು ಮತ್ತು ಬರವಣಿಗೆಯ ಸಾಮರ್ಥ್ಯವನ್ನು ಪ್ರದರ್ಶಿಸಿದರು. ನಿರ್ಣಾಯಕರ ಮಂಡಳಿಯು ಪ್ರಬಂಧಗಳನ್ನು ಪರಿಶೀಲಿಸಿ, ಅತ್ಯುತ್ತಮ ಬರವಣಿಗೆ, ವಿಷಯದ ಆಳವಾದ ತಿಳುವಳಿಕೆ ಮತ್ತು ಬರವಣಿಗೆಯ ಶೈಲಿಯನ್ನು ಆಧರಿಸಿ ತಾಲೂಕು ಮಟ್ಟದಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಗಳ ವಿಜೇತರನ್ನು ಆಯ್ಕೆ ಮಾಡಲಾಗಿದೆ. ಸ್ಪರ್ಧೆಯಲ್ಲಿ 70 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗಿಯಾಗಲಿದ್ದು, ಪ್ರೌಢಶಾಲೆ, ದ್ವಿತೀಯ ಪಿಯುಸಿ, ಪದವಿ ಮತ್ತು ಸ್ನಾತಕೋತರ ಪದವೀಧರರು ಭಾಗವಹಿಸಲಿದ್ದಾರೆ.

# ದ್ವಿಚಕ್ರ ವಾಹನ ಕಳ್ಳನ ಬಂಧನ




**ಜಮಖಂಡಿ:** ಶಹರ ಠಾಣೆ ಹಾಗೂ ಗ್ರಾಮೀಣ ಠಾಣೆ ವ್ಯಾಪ್ತಿಯಲ್ಲಿ ಕಳ್ಳತನವಾಗಿದ್ದ ಅಂದಾಜು 10 ಲಕ್ಷ ಮೌಲ್ಯದ ವಿವಿಧ ಕಂಪನಿಯ ಒಟ್ಟು22 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಂಡು ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ.

ಬಂಧಿತ ಆರೋಪಿ ಜಮಖಂಡಿ ತಾಲೂಕಿನ ಇನಾಂ ಹಂಚಿನಾಳ ಪುನರವಸತಿ ಕೇಂದ್ರದ ನಿವಾಸಿ ಸಿದ್ದಪ್ಪ ಯಲ್ಲಪ್ಪ ಉಪ್ಪಲದಿನ್ನಿ ಬಂಧಿಸುವ ಮೂಲಕ 22 ದ್ವಿಚಕ್ರ ವಾಹನಗಳನ್ನು ಜಪ್ತ ಮಾಡಲಾಗಿದೆ.

ಜೂನ 6 ರಂದು ನಗರದ ಅಪ್ಪಾಸಾಹೇಬ ಶಿವಮೂರ್ತಿ ಬಿರಾದಾರ ತನ್ನ ಕಪ್ಪು ಬಣ್ಣದ ಹಿರೋ ಸ್ಪೆಂಡರ ಪ್ಲಸ್ ಕಂಪನಿ ದ್ವಿಚಕ್ರವಾಹನ ಕಳ್ಳತನವಾಗಿದೆ ಎಂದು ಫಿರ್ಯಾಧಿದಾರ ಶಹರ ಪೊಲೀಸ್ ಠಾಣೆ ಪ್ರಕರಣವನ್ನು ದಾಖಲಿಸಿದ್ದರು. ಪೊಲೀಸ್ ಇಲಾಖೆ ಪ್ರಕರಣವನ್ನು ಗಂಭಿರವಾಗಿ ತೆಗೆದುಕೊಂಡು ದ್ವಿಚಕ್ರ ವಾಹನ ಕಳ್ಳತನ ಆರೋಪಿಗಳನ್ನು ಪತ್ತೆ ಮಾಡಲು ಜಿಲ್ಲಾ ಪೊಲೀಸ್ ಅಧೀಕ್ಷಕ ಸಿದ್ದಾರ್ಥ ಗೋಯಲ್, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಅಪರಾಧ ವಿಭಾಗದ ಮಹಾಂತೇಶ್ವರ ಜಿದ್ದಿ, ಡಿ.ವೈ.ಎಸ್.ಪಿ. ರೋಷನ ಜಮೀರ ಮಾರ್ಗದರ್ಶನದಲ್ಲಿ ಸಿಪಿಐ ಮಲ್ಲಪ್ಪ ಮಡ್ಡಿ ನೇತೃತ್ವದಲ್ಲಿ ಶಹರಠಾಣೆ ಪಿಎಸ್.ಐ. ಅನೀಲ ಕುಂಬಾರ, ಅಪರಾಧ ವಿಭಾಗದ ಪಿಎಸ್.ಐ. ಎನ್. ಕೆ ಕಾಜಗಾರ, ಸಿಬ್ಬಂದಿಗಳಾದ ಸಂಗಪ್ಪ ಕೋಟಿ, ಪರಶುರಾಮ ಘಾಟಗೆ. ಪ್ರಕಾಶ ಹೊಸಮನಿ. ಮುತ್ತಪ್ಪ ಮಾಂಗ, ಮಲ್ಲಿಕಾರ್ಜುನ ತಂಬಾಕದ, ಸಿದ್ದು ಕಲಾಠಿ, ನಾಗರಾಜ ಬಿಸಲದಿನ್ನಿ, ಶಂಕರ ಆಸಂಗಿ, ಐ.ಎಂ.ಪೆಂಡಾರಿ, ರಾಜಶೇಖರ ಮನಗೂಳಿ ತಂಡ ರಚಿಸುವ ಮೂಲಕ ಒಂದು ತಿಂಗಳಲ್ಲಿ ಆರೋಪಿಯನ್ನು ಬಂಧಿಸಿರುವ ನಿಮಿತ್ತ ಜಿಲ್ಲಾ ಪೊಲೀಸ್ ಅಧೀಕ್ಷಕ ಸಿದ್ದಾರ್ಥ ಗೋಯಲ್ ತನಿಖಾ ತಂಡಕ್ಕೆ ಬಹುಮಾನ ಘೋಷಿಸಿದ್ದಾರೆ.

# ರಾಷ್ಟ್ರದ ಅಭಿವೃದ್ಧಿಗೆ ಯುವಕರೆ ಬುನಾದಿ: ಗಾಂವಕರ್



**ಬಾಗಲಕೋಟೆ:** ವಿಶೇಷ ಶಿಬಿರಗಳು ಸಾಮಾಜಿಕ ಸೇವೆಯಲ್ಲಿ ತೊಡಗುವಂತೆ ಮಾಡುವುದರ ಜೊತೆಗೆ ವ್ಯಕ್ತಿತ್ವ ವಿಕಸನ ಮತ್ತು ಕೌಶಲ್ಯ ಅಭಿವೃದ್ಧಿಗೆ ಸಹಾಯಕವಾಗುತ್ತವೆ ಎಂದು ಬಿವಿವಿ ಸಂಘದ ಕಾಲೇಜುಗಳ ಆಡಳಿತ ಮಂಡಳಿಯ ಪದನಿಮಿತ್ಯ ಕಾರ್ಯದರ್ಶಿಗಳಾದ ಡಾ.ಎಸ್.ಎಮ್ ಗಾಂವಕರ ಹೇಳಿದರು.

ಬಸವೇಶ್ವರ ಕಲಾ ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕದ ವತಿಯಿಂದ ಮುಚಖಂಡಿ ಗ್ರಾಮದಲ್ಲಿ ಹಮ್ಮಿಕೊಂಡ ಏಳು ದಿನದ ವಾರ್ಷಿಕ ವಿಶೇಷ ಶಿಬಿರವನ್ನು ಸಸಿಗೆ ನೀರೆರೆಯುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಸ್ವಾತಂತ್ರ್ಯದ ಪ್ರಾರಂಭದಲ್ಲಿ ಬಡತನ, ಅನಕ್ಷರತೆಯ ಪರಿಸ್ಥಿತಿಯನ್ನು ಹೊಡೆದೊಡಿಸಲು ಮತ್ತು ಯುವಕರನ್ನು ಹಳ್ಳಿಯ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು ಎಂಬ ಗಾಂಧೀಜಿಯವರ ಕನಸನ್ನು ನನಸಾಗಿಸಲು ರಾಷ್ಟ್ರೀಯ ಸೇವಾ ಯೋಜನೆ ಹುಟ್ಟಿಕೊಂಡಿದೆ. ಶಿಬಿರದಿಂದ ನಾಯಕತ್ವಗುಣ ಬೆಳೆಯಲು ಸಹಾಯವಾಗುತ್ತದೆ. ನನ್ನ ಭಾರತಕ್ಕಾಗಿ ಒಗ್ಗಟ್ಟು ಎಂಬ ಘೋಷವಾಕ್ಯದೊಂದಿಗೆ ಈ ಶಿಬಿರ ಹಮ್ಮಿಕೊಂಡಿದ್ದು ಒಗ್ಗಟ್ಟಿನಲ್ಲಿ ಬಲವಿದೆ ಎಂಬುದನ್ನು ತೋರಿಸಲು ಇದೊಂದು ನಿಮಗೆ ಸುವರ್ಣಾವಕಾಶ ಇದನ್ನು ಸಮರ್ಪಕವಾಗಿ ಬಳಸಿಕೊಳ್ಳಿ ಎಂದರು.

ಅತಿಹೆಚ್ಚು ಯುವಕರನ್ನು ಹೊಂದಿರುವ ದೇಶ ನಮ್ಮದಾಗಿದ್ದು, ಎಲ್ಲರ ಶಕ್ತಿಯನ್ನು ಒಗ್ಗೂಡಿಸಿ ಹಳ್ಳಿಗಳನ್ನು ಎತ್ತರಕ್ಕೆ ಕೊಂಡೊಯ್ಯಬೇಕು. ದೇಶಿಯ ಉತ್ಪನ್ನಗಳನ್ನು ಬಳಕೆಗೆ ಕರೆ ನೀಡಬೇಕು. ದೇಶಕ್ಕಾಗಿ ನಾನು ಏನನ್ನಾದರೂ ಸಾಧನೆ ಮಾಡಬೇಕೆಂದು ಶಿಬಿರಾರ್ಥಿಗಳು ಪ್ರತಿಜ್ಞೆಯ ಪಣ ತೊಡಬೇಕು ಎಂದರು.

ಪ್ರಾಚಾರ್ಯರಾದ ಬಿ.ಆರ್ ಪಾಟೀಲ ಅವರು ಮಾತನಾಡಿ ವ್ಯಕ್ತಿತ್ವ ವಿಕಸನಕ್ಕಾಗಿ ಶಿಕ್ಷಣ ಕ್ಷೇತ್ರದಲ್ಲಿ ಹಲವಾರು ಘಟಕಗಳಿದ್ದು, ಎನ್‌ಎಸ್‌ಎಸ್ ಶಿಬಿರ ವಿಶೇಷ ವೇದಿಕೆಯಾಗಿದೆ. ಪಠ್ಯಕ್ರಮದಲ್ಲಿ ದೇಶದ ಜನಸಂಖ್ಯೆ ಅಭಿವೃದ್ಧಿಗೆ ಒಂದು ಶಾಪ ಎಂದು ಬೋಧನೆ ಮಾಡಲಾಗುತ್ತಿದೆ. ಆದರೆ ಅದನ್ನು ಸರಿಯಾದ ರೀತಿಯಲ್ಲಿ ಬೆಳೆಸಿಕೊಂಡರೆ ಅದು ಹೊರೆಯಾಗದೆ ವರವಾಗುತ್ತದೆ. ಶಿಬಿರಗಳು ಸಮುದಾಯದೊಂದಿಗೆ ಯುವಕರನ್ನು ಬೆಸೆಯುವ ಕೆಲಸ ಮಾಡುತ್ತವೆ. ಪ್ರಸ್ತುತ ದಿನಗಳಲ್ಲಿ ಕೃಷಿಗೆ ಹೆಚ್ಚಿನ ಮನ್ನಣೆ ಸಿಗುತ್ತಿದ್ದು, ಹಳ್ಳಿಯನ್ನು ಅರ್ಥೈಸಿಕೊಳ್ಳುವ ಕೆಲಸವನ್ನು ಮಾಡಬೇಕು. ತಂತ್ರಜ್ಞಾನದಿಂದ ಆಹಾರ ಬೆಳೆಯಲು ಸಾಧ್ಯವಿಲ್ಲ ಅದನ್ನು ಮಾನವರೇ ಮಾಡಬೇಕು. ಎಐ ಆಗಮನದಿಂದ ನಿರುದ್ಯೋಗ ಹೆಚ್ಚುತ್ತದೆ ಎಂಬ ಭಯ ಹುಟ್ಟಿಸಲಾಗುತ್ತಿದೆ. ಅದು ಶುದ್ದಸುಳ್ಳಾಗಿದ್ದು, ಸೂಕ್ಷ್ಮ ಕೌಶಲ್ಯ ಬೆಳಸಿಕೊಂಡವರಿಗೆ ಹೊಸದೊಂದು ವೇದಿಕೆ ಸಿಗಲಿದೆ ಎನ್ನುವುದನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದರು.

ಪ್ರಾಚಾರ್ಯರಾದ ಎಸ್.ಆರ್ ಮೂಗನೂರಮಠ ಅವರು ಮಾತನಾಡಿ ಸಾಮಾಜಿಕ ಕೌಶಲ್ಯಗಳು ಹೆಚ್ಚು ಪ್ರಾಧ್ಯಾನ್ಯತೆ ಪಡೆಯುತ್ತಿದ್ದು, ಅವುಗಳನ್ನು ಬೆಳಸಿಕೊಳ್ಳುವುದು ಅವಶ್ಯಕವಾಗಿದೆ. ದುಡಿಯುವ ಕೈಗಳಿಗೆ ಮಾತ್ರ ಊಟ ಮಾಡುವ ಹಕ್ಕಿದೆ, ಹಳ್ಳಿಗಳಲ್ಲೂ ತಂತ್ರಜ್ಞಾನ ಆಧಾರಿತ ಕೃಷಿಕಾರ್ಯಗಳು ಜಾರಿಯಲ್ಲಿದ್ದು ಜನಜೀವನವನ್ನು ಅರಿಯಲು ಶಿಬಿರಗಳು ಸಹಾಯ ಮಾಡುತ್ತವೆ ಎಂದರು.

ಕಾರ್ಯಕ್ರಮದಲ್ಲಿ ಎನ್‌ಎಸ್‌ಎಸ್ ಘಟಕಾಧಿಕಾರಿಗಳಾದ ಡಾ.ಎಂ.ಎಚ್ ವಡ್ಡರ, ಡಾ. ವಿರುಪಾಕ್ಷಿ ಎನ್.ಬಿ, ಐಕ್ಯೂಎಸಿ ಸಂಯೋಜಕರಾದ ಡಾ.ಎ.ಯು ರಾಠೋಡ ಸೇರಿದಂತೆ ಉಪನ್ಯಾಸಕರುಗಳು ಮತ್ತು ಶಿಬಿರಾರ್ಥಿಗಳು ಪಾಲ್ಗೊಂಡಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :179, Postal Reg No. PMG/KA/NK/BM/135/25-27 / POST AT Vantamury Colony Post Office